ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 184 ಸಂಚಿಕೆ- 184 | PAGE-8 ಪುಟ-8 | ಬುಧವಾರ 03.09.2025 | RS.2/- ಬೆಲೆ 2/-

# ಸವಾಲುಗಳ ಹೊರತು ಭಾರತದ ಜಿಡಿಪಿ ಶೇ.7.8 ಬೆಳವಣಿಗೆ

# ಭಾರತದ ಸಣ್ಣ ಚಿಪ್ ಜಗತ್ತನ್ನೇ ಬದಲಿಸಲಿದೆ: ಪ್ರಧಾನಿ ಮೋದಿ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಸೆ.2: ಭಾರತದ ಮೇಲೆ ಅಮೆರಿಕ ವಿಧಿಸಿರುವ ವ್ಯಾಪಕ ಸುಂಕದಿಂದ "ಆರ್ಥಿಕ ಸ್ವಾರ್ಥ" ಸೃಷ್ಟಿಸಿದ ಸವಾಲುಗಳ ಹೊರತಾಗಿಯೂ, ಭಾರತದ ಜಿಡಿಪಿ ಶೇಕಡಾ 7.8 ರಷ್ಟು ಬೆಳವಣಿಗೆಯನ್ನು ಸಾಧಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ವಿಶ್ವಾಸದಿಂದ ನುಡಿದಿದ್ದಾರೆ.

ಸೆಮಿಕಾನ್ ಇಂಡಿಯಾ 2025 ರ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಮೋದಿ, "ಕೆಲವೇ ದಿನಗಳ ಹಿಂದೆ, ಈ ವರ್ಷದ ಮೊದಲ ತ್ರೈಮಾಸಿಕದ ಜಿಡಿಪಿ ಸಂಖ್ಯೆಗಳು ಬಂದಿವೆ. ಮತ್ತೊಮ್ಮೆ, ಭಾರತವು ಪ್ರತಿ ನಿರೀಕ್ಷೆ ಮೌಲ್ಯಮಾಪನಕ್ಕಿಂತ ಉತ್ತಮವಾಗಿ ಕಾರ್ಯನಿರ್ವಹಿಸಿದೆ. ವಿಶ್ವದ ಆರ್ಥಿಕತೆಯೊಳಗೆ ಇಂದು ಕಳವಳಗೊಂದಲಗಳಿರುವಾಗ, ಆರ್ಥಿಕ ಸ್ವಾರ್ಥದಿಂದ ಸೃಷ್ಟಿಯಾದ ಹಲವು ಸವಾಲುಗಳಿವೆ. ಇಂತಹ ಪರಿಸರ ಮಧ್ಯೆ, ಭಾರತವು ಶೇಕಡಾ 7.8 ರಷ್ಟು ಬೆಳವಣಿಗೆಯನ್ನು ಸಾಧಿಸಿದೆ ಎಂದು ಹೇಳಿದರು.

ಹೊಸ ಜಗತ್ತಿನಲ್ಲಿ ಸೆಮಿಕಂಡಕ್ಟರ್ ಪ್ರಾಮುಖ್ಯತೆ ಮತ್ತು ಸಾಮರ್ಥ್ಯದ ಬಗ್ಗೆ ಒತ್ತಿ ಹೇಳಿದ ಪ್ರಧಾನಿ, ಸೆಮಿಕಂಡಕ್ಟರ್ ಜಗತ್ತಿನಲ್ಲಿ ಇಂಧನವನ್ನು ಕಪ್ಪು ಚಿನ್ನ ಎಂದು ಹೇಳಲಾಗುತ್ತದೆ, ಚಿಪ್‌ಗಳು ಡಿಜಿಟಲ್ ವಜ್ರಗಳಾಗಿವೆ. ನಮ್ಮ ಕಳೆದ ಶತಮಾನವು ತೈಲದಿಂದ ರೂಪುಗೊಂಡಿತು. ಇಂದಿನ 21 ನೇ ಶತಮಾನದ ಶಕ್ತಿಯು ಸಣ್ಣ ಚಿಪ್‌ಗೆ ಸೀಮಿತವಾಗಿದೆ. ಈ ಚಿಪ್‌ಗಳು ಪ್ರಪಂಚದ ಅಭಿವೃದ್ಧಿಯನ್ನು ವೇಗಗೊಳಿಸುವ ಶಕ್ತಿಯನ್ನು ಹೊಂದಿದೆ ಎಂದಿದೆ.

2021 ರಲ್ಲಿ, ನಾವು ಸೆಮಿಕಾನ್ ಇಂಡಿಯಾ ಕಾರ್ಯಕ್ರಮವನ್ನು ಪ್ರಾರಂಭಿಸಿದೆವು. 2023 ರ ಹೊತ್ತಿಗೆ, ಭಾರತದ ಮೊದಲ ಸೆಮಿಕಂಡಕ್ಟರ್ ಘಟಕಕ್ಕೆ ಅನುಮೋದನೆ ನೀಡಲಾಯಿತು. 2024 ರಲ್ಲಿ, ನಾವು ಹೆಚ್ಚುವರಿ ಸ್ಥಾವರಕ್ಕೆ ಅನುಮೋದನೆ ನೀಡಿದೆವು. 2025 ರಲ್ಲಿ, ನಾವು ಐದು ಹೆಚ್ಚುವರಿ ಯೋಜನೆಗೆ ಅನುಮೋದನೆ



ನೀಡಿದ್ದೇವೆ. ಒಟ್ಟಾರೆಯಾಗಿ, ಹತ್ತು ಸೆಮಿಕಂಡಕ್ಟರ್ ಯೋಜನೆಗಳಲ್ಲಿ 1.5 ಲಕ್ಷ ಕೋಟಿ ರೂಪಾಯಿಗಿಂತಲೂ ಹೆಚ್ಚಿನ ಹೂಡಿಕೆ ಮಾಡಲಾಗುತ್ತಿದೆ. ಇದು ಜಗತ್ತಿನ ದೇಶಗಳು ಭಾರತದ ಮೇಲೆ ಬೆಳೆಯುತ್ತಿರುವ ನಂಬಿಕೆಯನ್ನು ತೋರಿಸುತ್ತದೆ ಎಂದು ಹೇಳಿದರು.

ನಾವು ರಾಷ್ಟ್ರೀಯ ಏಕ ಗವಾಕ್ಷಿ ವ್ಯವಸ್ಥೆಯನ್ನು ಜಾರಿಗೆ ತಂದಿದ್ದೇವೆ. ಇದರ ಮೂಲಕ, ಕೇಂದ್ರ ಮತ್ತು ರಾಜ್ಯಗಳಿಂದ ಎಲ್ಲಾ ಅನುಮೋದನೆಗಳನ್ನು ಒಂದೇ ವೇದಿಕೆಯಡಿ ಸ್ವೀಕರಿಸಲಾಗುತ್ತಿದೆ. ಪರಿಣಾಮವಾಗಿ, ನಮ್ಮ ಹೂಡಿಕೆದಾರರು ಈಗ ಸಾಕಷ್ಟು ಪ್ರಮಾಣದಲ್ಲಿ ದಾಖಲೆಗಳಿಂದ ಮುಕ್ತರಾಗಿದ್ದಾರೆ ಎಂದರು.

ಭಾರತವು ಈಗ ಪೂರ್ಣ ಪ್ರಮಾಣದಲ್ಲಿ ಸೆಮಿಕಂಡಕ್ಟರ್ ರಾಷ್ಟ್ರವಾಗುವ ಹಾದಿಯಲ್ಲಿದೆ. ಭಾರತದ ಚಿಕ್ಕ ಚಿಪ್ ವಿಶ್ವದಲ್ಲಿ ಅತಿದೊಡ್ಡ ಬದಲಾವಣೆಯನ್ನು ತರುವ ದಿನಗಳು ದೂರವಿಲ್ಲ. ನಮ್ಮ ಪಯಣ ತಡವಾಗಿ ಆರಂಭವಾಯಿತು. ಆದರೆ ಈಗ ನಮ್ಮನ್ನು ತಡೆಯಲು ಯಾವುದೂ ಸಾಧ್ಯವಿಲ್ಲ ಎಂದರು,

ದೇಶಕ್ಕೆ ಹೆಚ್ಚಿನ ಹೂಡಿಕೆದಾರರನ್ನು ಆಹ್ವಾನಿಸಿದ ಮೋದಿ, ದೇಶದಲ್ಲಿ ಎಲ್ಲಾ ಹೂಡಿಕೆದಾರರನ್ನು ಸ್ವಾಗತಿಸಲು ಸಿದ್ಧರಿದ್ದೇವೆ. ಭಾರತದಲ್ಲಿ ವಿನ್ಯಾಸಗೊಂಡಿದ್ದು, ಭಾರತದಲ್ಲಿ ತಯಾರಾಗಿದ್ದು, ಜಗತ್ತು ನಂಬಿದ್ದು ಎಂದು ಹೇಳುವ ದಿನಗಳು ದೂರವಿಲ್ಲ ಎಂದು ಪ್ರಧಾನಿ ಮೋದಿ ಹೇಳಿದರು.

ಭಾರತದ ಮೊದಲ ಸ್ವದೇಶಿ ನಿರ್ಮಿತ ವಿಕ್ರಮ್-32 ಬಿಟ್ ಪ್ರೊಸೆಸರ್ ಚಿಪ್ ಅನ್ನು ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರಿಗೆ ಹಸ್ತಾಂತರಿಸಲಾಯಿತು. ದೆಹಲಿಯಲ್ಲಿ ನಡೆಯುತ್ತಿರುವ ಸೆಮಿಕಾನ್ ಇಂಡಿಯಾ 2025 ರಲ್ಲಿ ಕಾರ್ಯಕ್ರಮದಲ್ಲಿ ಎಲೆಕ್ಟ್ರಾನಿಕ್ಸ್ ಮತ್ತು ಐಟಿ ಸಚಿವ ಅಶ್ವಿನಿ ವೈಷ್ಣವ್ ಚಿಪ್ ಹಸ್ತಾಂತರಿಸಿದರು.

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಸೆಮಿಕಂಡಕ್ಟರ್ ಲ್ಯಾಬೋರೇಟರಿ ಅಭಿವೃದ್ಧಿಪಡಿಸಿದ ವಿಕ್ರಮ್ ಚಿಪ್, ರಾಷ್ಟ್ರದ ಮೊದಲ ಸಂಪೂರ್ಣ ಸ್ಥಳೀಯ 32-ಬಿಟ್ ಮೈಕ್ರೊಪ್ರೊಸೆಸರ್ ಆಗಿದ್ದು, ಬಾಹ್ಯಾಕಾಶ ಉಡಾವಣಾ ವಾಹನಗಳಲ್ಲಿನ ಕಠಿಣ ಪರಿಸ್ಥಿತಿಗಳಿಗೆ ನಿರ್ದಿಷ್ಟವಾಗಿ ವಿನ್ಯಾಸಗೊಳಿಸಲಾಗಿದೆ.

(2ನೇ ಪುಟ ನೋಡಿ)

## ಬೆಳೆ ಹಾನಿ ವರದಿ ಸಲ್ಲಿಕೆಗೆ ಅಧಿಕಾರಿಗಳಿಗೆ ಸೂಚನೆ



ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್:ಸೆ.3:ನಿರಂತರವಾಗಿ ಸುರಿದ ಮಳೆ ಹಿನ್ನಲೆ ತಾಲೂಕಿನ ಗಡವಂತಿ ಗ್ರಾಮದ ಬೆಳೆ ಹಾನಿ ಹೊಲಗಳಿಗೆ ಮಂಗಳವಾರ ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಪಾಟೀಲ್ ಹಾಗೂ ಭೀಮರಾವ ಪಾಟೀಲ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಗಡವಂತಿ ಸರಕಾರಿ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಶಾಲೆಯ ಹಳೆ ಕಟ್ಟಡ ವೀಕ್ಷಿಸಿದರು. ನಂತರ ಅರುಣ ಮಾಣಿಕಪ್ಪ ವೈದ್ಯ, ನಿಂಗಮ್ಮ ಮರೇಪ್ಪ ವೈದ್ಯ, ಅರ್ಜುನ್ ಚಂಚೋಳಿಕರ್, ಶರಣಪ್ಪ ಮರಪಳ್ಳಿ, ಅಮೃತರಾವ ಗುಂಡೆಕರ್, ಅಶೋಕ ಮರಪಳ್ಳಿ, ಈಶ್ವರ ಅಂಬುಲಗಿ ಸೇರಿ ಅನೇಕರ ಮನೆಗಳಿಗೆ ಭೇಟಿ ನೀಡಿ ಮಳೆಗೆ ಕುಸಿದು ಬಿದ್ದ ಮೆನೆಗಳು ವೀಕ್ಷಣೆ ಮಾಡಿದರು.

ಸತತ ಸುರಿಯುತ್ತಿರುವ ಮಳೆಗೆ ಹಾನಿಯಾದ ರೈತರು ಬೆಳೆದ ಬೆಳೆ ಹಾಗೂ ಗಡವಂತಿ ಗ್ರಾಮದ ಗಲ್ಲಿ, ಗಲ್ಲಿಗಳಲ್ಲಿ ಸುತ್ತಾಡಿ ಮಳೆಗೆ ಕುಸಿದು ಬಿದ್ದ ಮನೆಗಳ ಸಂಪೂರ್ಣ ಮಾಹಿತಿ ಕಲೆ ಹಾಕಿ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

(2ನೇ ಪುಟ ನೋಡಿ)

### ಕಾರಖಾನೆ ವಿರುದ್ಧ ಕ್ರಮಕ್ಕೆ ಸೂಚನೆ

ಹುಮನಾಬಾದ್ : ತಾಲೂಕಿನ ಮಾಣಿಕ ನಗರ ಗ್ರಾಪಂ. ವ್ಯಾಪ್ತಿಯ ಗಡವಂತಿ ಗ್ರಾಮದ ಕೈಗಾರಿಕಾ ಪ್ರದೇಶದ ಹಳ್ಳದಲ್ಲಿ ರಾಸಾಯನಿಕ ಮಿಶ್ರಿತ ಕೊಳಚೆ ಬಿಟ್ಟಿರುವ ಹಿನ್ನಲೆ ಮಂಗಳವಾರ ವಿಧಾನ ಪರಿಷತ್ ಸದಸ್ಯರಾದ ಡಾ. ಚಂದ್ರಶೇಖರ ಪಾಟೀಲ್ ಹಾಗೂ ಭೀಮರಾವ ಪಾಟೀಲ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬಳಿಕ ವಿಧಾನ ಪರಿಷತ್ ಸದಸ್ಯರಾದ ಡಾ. ಚಂದ್ರಶೇಖರ ಪಾಟೀಲ್ ಹಾಗೂ ಭೀಮರಾವ ಪಾಟೀಲ್ ಮಾತನಾಡಿ, ಮಳೆಗಾಲ ಬಂದಾಗಲೆಲ್ಲ ಕೈಗಾರಿಕಾ ಪ್ರದೇಶದ ಕಾರಖಾನೆಗಳಿಂದ ರಾಸಾಯನಿಕ ತ್ಯಾಜ್ಯ ಹಳ್ಳಗಳಲ್ಲಿ ಬಿಟ್ಟಿರುವ ಕಾರಣ ಹುಮನಾಬಾದ್, ಗಡವಂತಿ, ಮಾಣಿಕ ನಗರ, ಧುಮ್ಮನಸೂರ ನಾನಾ ಗ್ರಾಮಗಳು ಅಲ್ಲದೇ ಕಾರಂಜ ಜಲಾಶಯಕ್ಕೂ ಕಂಟಕ ಎದುರಾಗಿದೆ. ಹೀಗಾಗಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ತಹಸೀಲ್ದಾರ್ ಅವರಿಗೆ ಸೂಚಿಸಿದರು.

## ಆಪ್ಟಿಕಲ್ ಫೈಬರ್ ಕೇಬಲ್ ಬಳಸಿ ಗ್ರಾಮೀಣ ಪ್ರದೇಶಗಳಲ್ಲಿ ಆರ್ಥಿಕ ಅವಕಾಶ: ರಾಜ್ಯದ 205 ಗ್ರಾಪಂಗಳ ಆಯ್ಕೆ: ಪ್ರಿಯಾಂಕ್ ಖರ್ಗೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಸೆ.2:ಆಪ್ಟಿಕಲ್ ಫೈಬರ್ ಕೇಬಲ್ ಬಳಸಿ ಡಿಜಿಟಲ್ ಸೇವೆಗಳು ಮತ್ತು ಆರ್ಥಿಕ ಅವಕಾಶಗಳನ್ನು ಗ್ರಾಮೀಣ ಪ್ರದೇಶಗಳಿಗೆ ತಲುಪಿಸುವ ಮೂಲಕ ದೂರಸಂಪರ್ಕ ಆಧಾರಿತ ಸಮೃದ್ಧ್ ಗ್ರಾಮ ಪಂಚಾಯತ್ ಯೋಜನೆಯನ್ನು ಜಾರಿಗೊಳಿಸಲು ರಾಜ್ಯದಲ್ಲಿ 205 ಗ್ರಾಮ ಪಂಚಾಯತಿಗಳನ್ನು ಆಯ್ಕೆ ಮಾಡಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.



ಗ್ರಾಮೀಣ ಪ್ರದೇಶಗಳಲ್ಲಿ ಡಿಜಿಟಲ್ ಪರಿವರ್ತನೆಗೆ ಪ್ರೇರಕಶಕ್ತಿಯಾಗಿ ಕಾರ್ಯನಿರ್ವಹಿಸುವ ಮೂಲಕ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಸಮೃದ್ಧ್ ಗ್ರಾಮ ಪಂಚಾಯತ್ ಯೋಜನೆ ಉತ್ತೇಜನ ನೀಡುತ್ತದೆ ಹಾಗೂ ಗ್ರಾಮಗಳ ಸಾಮಾಜಿಕ, ಆರ್ಥಿಕ ಅಭಿವೃದ್ಧಿಗೆ ಪೂರಕವಾಗಿ ಗ್ರಾಮೀಣ ಸಮುದಾಯಗಳು, ಸಾರ್ವಜನಿಕ ಹಾಗೂ ಖಾಸಗಿ ಸಂಸ್ಥೆಗಳು ಮತ್ತು ಗ್ರಾಮ ಮಟ್ಟದ ಉದ್ಯಮಿಗಳು/ಸಂಸ್ಥೆಗಳಿಗೆ ಹೆಚ್ಚಿನ ವೇಗದ ಬ್ರಾಡ್‌ಬ್ಯಾಂಡ್ (ಈಖಿಖಿಊ) ಸಂಪರ್ಕದ ಪ್ರಯೋಜನಗಳ ಬಗ್ಗೆ ಅರಿವು ಮೂಡಿಸಲು ಗ್ರಾಮಗಳಲ್ಲಿ ಫೈಬರ್ ಸಂಪರ್ಕದ ಸಮರ್ಥ ಬಳಕೆಗಾಗಿ ತಾಂತ್ರಿಕ ತಜ್ಞರು,

(2ನೇ ಪುಟ ನೋಡಿ)

## ಹೆಜ್ಜೇನು ಕಚ್ಚಿ ವಿದ್ಯಾರ್ಥಿಗಳು ಅಸ್ವಸ್ಥ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಸೆ.2-ಹೆಜ್ಜೇನು ಹುಳಗಳು ಕಚ್ಚಿ ಇಬ್ಬರು ಶಾಲಾ ಮಕ್ಕಳು ಅಸ್ವಸ್ಥರಾದ ಘಟನೆ ತಾಲೂಕಿನ ಸುತಗುಂಡಾರ ಗ್ರಾಮದಲ್ಲಿ ಮಂಗಳವಾರ ನಡೆದಿದೆ. ಸ್ಥಳೀಯ ಕರಬಸವೇಶ್ವರ ಪ್ರೌಢಶಾಲಾ ಆವರಣದಲ್ಲಿರುವ ಮರವೊಂದರಲ್ಲಿ ಗೂಡು ಕಟ್ಟಿರುವ ಹೆಜ್ಜೇನು ಹುಳಗಳನ್ನು ಯಾರೋ ಕಿಡಿಗೇಡಿಗಳು ಕಲ್ಲೆಸೆದು ಎಬ್ಬಿಸಿದ್ದಾರೆ.

ಆಗ ಶಾಲೆಗೆ ಬಂದ ವಿದ್ಯಾರ್ಥಿಗಳ ಮೇಲೆ ದಾಳಿ ಮಾಡಿರುವ ಜೇನು ಹುಳಗಳು ಇಬ್ಬರು ವಿದ್ಯಾರ್ಥಿಗಳಿಗೆ ಕಚ್ಚಿವೆ. ಇನ್ನುಳಿದ ವಿದ್ಯಾರ್ಥಿಗಳು ಓಡಿ ಹೋಗಿ ಅವಿತುಕೊಂಡಿದ್ದಾರೆ.

ವಿಷಯ ತಿಳಿದ ಶಾಲೆಯ ಶಿಕ್ಷಕರು ತತಕ್ಷಣ ಕಾರು ತರಿಸಿ ಜೇನುಹುಳ ಕಚ್ಚಿದ ಇಬ್ಬರೂ ವಿದ್ಯಾರ್ಥಿಗಳನ್ನು ಬಾಗಲಕೋಟೆ ಕುಮಾರೇಶ್ವರ ಆಸ್ಪತ್ರೆಗೆ ಕರೆತಂದು ಚಿಕಿತ್ಸೆ ಕೊಡಿಸಿದ್ದಾರೆ.

ಮಧ್ಯಾಹ್ನದ ಹೊತ್ತಿಗೆ ಇಬ್ಬರೂ ವಿದ್ಯಾರ್ಥಿಗಳು ಸಂಪೂರ್ಣ ಚೇತರಿಸಿಕೊಂಡಿದ್ದಾರೆ ಎಂದು ಶಾಲೆಯ ಶಿಕ್ಷಕರಾದ ಎ.ಎಲ್. ಬಡಿಗೇರ ಹಾಗೂ ಎಂ.ಎಸ್.ಬಸವನಾಳ ತಿಳಿಸಿದ್ದಾರೆ.

## ಪ್ರಜಾ ಸೌಧ, ಉತ್ಸವ ದಿನಾಚರಣೆ ಯಶಸ್ಸಿಗೆ ಸಿದ್ಧತೆ ಮಾಡಿಕೊಳ್ಳಿ:ನಲಿನ್ ಅತುಲ್



ಮಲ್ಲಮ್ಮನುಡಿವಾರ್ತೆ ಕಲಬುರಗಿ,ಸೆ.2: ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಭಾಗವಹಿಸಲು ಮತ್ತು ಪ್ರಜಾ ಸೌಧ ಕಾರ್ಯಕ್ರಮಕ್ಕೆ ಚಾಲನೆ ನೀಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇದೇ ಸೆ.16 ಮತ್ತು 17 ರಂದು ಎರಡು ದಿನಗಳ ಕಾಲ ಕಲಬುರಗಿಗೆ ಆಗಮಿಸಲಿದ್ದು, ಕಾರ್ಯಕ್ರಮ ಯಶಸ್ವಿಗೆ ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಳ್ಳುವಂತೆ ಕೆ.ಕೆ.ಆರ್.ಡಿ.ಬಿ ಮಂಡಳಿ ಕಾರ್ಯದರ್ಶಿ ನಲಿನ್ ಅತುಲ್ ಹೇಳಿದರು.

ಮಂಗಳವಾರ ಇಲ್ಲಿನ ಕೆ.ಕೆ.ಆರ್.ಡಿ.ಬಿ. ಸಭಾಂಗಣದಲ್ಲಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸೆ.16 ರಂದು ಯಡ್ರಾಮಿಯಲ್ಲಿ ನಡೆಯುವ ಕೆ.ಕೆ.ಆರ್.ಡಿ.ಬಿ ಮಂಡಳಿ ಅನುದಾನದ ಪ್ರಜಾ ಸೌಧ ನಿರ್ಮಾಣಕ್ಕೆ ಮುಖ್ಯಮಂತ್ರಿಗಳು ಅಡಿಗಲ್ಲು ನೆರವೇರಿಸಲಿದ್ದು, ಪ್ರದೇಶದ ಸಚಿವರು, ಶಾಸಕರು ಭಾಗವಹಿಸುವುದರಿಂದ ಜಿಲ್ಲಾಡಳಿತದಿಂದ ಸಕಲ ಸಿದ್ಧತೆ ಮಾಡಿಕೊಳ್ಳಬೇಕು. ಗಣ್ಯರ ಭದ್ರತೆಗೆ ಅಗತ್ಯ ಪೊಲೀಸ್ ಬಂದೋಬಸ್ತ್ ಒದಗಿಸಬೇಕು ಎಂದರು.

ಸೆಪ್ಟೆಂಬರ್ 17ರ ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮದಲ್ಲಿ ಮಂಡಳಿಯ ವಿವಿಧ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ ನೆರವೇರಿಸಲು ಸಿದ್ಧತೆ ಮಾಡಿಕೊಳ್ಳಬೇಕು. ಕೆ.ಕೆ.ಆರ್.ಡಿ.ಬಿ. ನೆರವಿನ ಅಕ್ಷರ ಆವಿಷ್ಕಾರ, ಆರೋಗ್ಯ ಆವಿಷ್ಕಾರ, ಅರಣ್ಯ ಆವಿಷ್ಕಾರ, ಪ್ರಜಾ ಸೌಧ ಹೀಗೆ ಸುಮಾರು 11 ವಿಷಯಗಳ ಮೇಲೆ ವಿವಿಧ ಇಲಾಖೆಗಳು 11 ಸ್ಥಬ್ದ ಚಿತ್ರಗಳು ಪ್ರದರ್ಶಿಸಬೇಕು. ಇದಲ್ಲದೆ ವಿವಿಧ ಸರ್ಕಾರಿ ಸೌಲಭ್ಯ ವಿತರಿಸುವ ಕಾರ್ಯಕ್ರಮ ಸಹ ಆಯೋಜಿಸಬೇಕೆಂದು ನಲಿನ್ ಅತುಲ್ ಅಧಿಕಾರಿಗಳಿಗೆ ನಿರ್ದೇಶನ ಎಂದರು.

ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಭಾಗವಾಗಿ ಕಲಬುರಗಿ ನಗರದಲ್ಲಿ ವಾಕ್‌ಥಾನ್, ಚಿತ್ರಕಲಾ ಪ್ರದರ್ಶನ ಕಾರ್ಯಕ್ರಮ ಆಯೋಜಿಸಬೇಕು. ಈ ಕುರಿತು ಚಿತ್ರಕಲಾ ಪರಿಷತ್ ಅಧಿಕಾರಿಗಳೊಂದಿಗೆ ಚರ್ಚಿಸಬೇಕು. ಇನ್ನು ಹೈದ್ರಾಬಾದ ಕರ್ನಾಟಕ ವಿಮೋಚನೆ ವಿಷಯನ್ನಾಧಾರಿತ ಸಾಂಸ್ಕೃತಿಕ ಕಾರ್ಯಕ್ರಮಗಳು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮುಂದಾಳತ್ವದಲ್ಲಿ ನಡೆಯಬೇಕು ಎಂದು ನಲಿನ್ ಅತುಲ್ ತಿಳಿಸಿದರು.

ಮಾಹಿತಿ ಮಳಿಗೆ: ಕಲ್ಯಾಣ ಕರ್ನಾಟಕದ 7 ಜಿಲ್ಲೆಗಳ ಐತಿಹಾಸಿಕ, ಕಲೆ, ಸಾಹಿತ್ಯ, ಸಂಸ್ಕೃತಿ ಹಾಗೂ ಪ್ರವಾಸಿ ತಾಣಗಳನ್ನು ಬಿಂಬಿಸುವ ಎರಡು ದಿನಗಳ ಕಾಲ ಮಾಹಿತಿ ನೀಡುವ ಡಿಜಿಟಲ್ ಮಾಹಿತಿ ಮಳಿಗೆ ಮತ್ತು ವಸ್ತು ಪ್ರದರ್ಶನ ಮಳಿಗೆ

(2ನೇ ಪುಟ ನೋಡಿ)

## ಭಾರತೀಯ ತಾಯಂದಿರಿಗೆ ಮಾಡಿದ ಅವಮಾನ ಪ್ರತಿಪಕ್ಷಗಳಿಗೆ ಮೋದಿ ತಿರುಗೇಟು



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಸೆ.2: ತಾಯಿಯೇ ನಮ್ಮ ಜಗತ್ತು, ತಾಯಿಯೇ ನಮ್ಮ ಸ್ವಾಭಿಮಾನ, ಬಿಹಾರದಂತಹ ಸಾಂಪ್ರದಾಯಿಕ ರಾಜ್ಯದಿಂದ ಆರ್‌ಜೆಡಿ ಮತ್ತು ಕಾಂಗ್ರೆಸ್ ನಾಯಕರು ನನ್ನ ತಾಯಿಯನ್ನು ನಿಂದಿಸಿದರು. ಈ ನಿಂದನೆಗಳು ನನ್ನ ತಾಯಿಗೆ ಮಾಡಿದ ಅವಮಾನ ಮಾತ್ರವಲ್ಲ. ಇದು ದೇಶದ ತಾಯಂದಿರು, ಸಹೋದರಿಯರು ಮತ್ತು ಹೆಣ್ಣುಮಕ್ಕಳಿಗೆ ಮಾಡಿದ ಅವಮಾನವಾಗಿದೆ

(2ನೇ ಪುಟ ನೋಡಿ)

## ಎರಡು ವೋಟರ್ ಐಡಿ: ಕಾಂಗ್ರೆಸ್ ನಾಯಕ ಪವನ್ ಖೇರಾಗೆ ಚುನಾವಣಾ ಆಯೋಗ ನೋಟಿಸ್

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಸೆ.2: ಕಾಂಗ್ರೆಸ್ ವಕ್ತಾರ ಪವನ್ ಖೇರಾ ಅವರು ದೆಹಲಿಯ ಎರಡು ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾರರ ಗುರುತಿನ ಚೀಟಿ ಹೊಂದಿದ್ದಾರೆ ಎಂದು ಭಾರತೀಯ ಜನತಾ ಪಕ್ಷ(ಬಿಜೆಪಿ) ಆರೋಪಿಸಿದ ನಂತರ ಚುನಾವಣಾ ಆಯೋಗವು ಅವರಿಗೆ ನೋಟಿಸ್ ನೀಡಿದೆ.



ಜಂಗ್‌ಪುರ ಮತ್ತು ನವದೆಹಲಿ ವಿಧಾನಸಭಾ ಕ್ಷೇತ್ರಗಳ ಮತದಾರರ ಪಟ್ಟಿಯಲ್ಲಿ ಖೇರಾ ಅವರ ಹೆಸರು ಕಾಣಿಸಿಕೊಂಡಿದೆ.

ಜನತಾ ಪ್ರಾತಿನಿಧ್ಯ ಕಾಯ್ದೆ, 1950ರ ಸೆಕ್ಷನ್ 17 ಮತ್ತು ಸೆಕ್ಷನ್ 18ರ ಅಡಿಯಲ್ಲಿ ಕಾಂಗ್ರೆಸ್ ನಾಯಕನಿಗೆ ನೋಟಿಸ್ ನೀಡಲಾಗಿದೆ. ಈ ಕಾಯ್ದೆ ಪ್ರಕಾರ ಒಬ್ಬ ವ್ಯಕ್ತಿ ಒಂದೇ ಕ್ಷೇತ್ರದಲ್ಲಿ ಮತದಾರರ ಗುರುತಿನ ಚೀಟಿ ಹೊಂದಿರಬೇಕು. ಒಂದಕ್ಕಿಂತ ಹೆಚ್ಚು

(2ನೇ ಪುಟ ನೋಡಿ)

## 7 ವರ್ಷದಿಂದ ಚಿಕ್ಕಮ್ಮನ ಮೇಲೆ ನಿರಂತರ ಅತ್ಯಾಚಾರ ನಡೆಸಿದ ಪೇದೆ ಹಾಗೂ ಜೆಸ್ಕಾಂ ಉದ್ಯೋಗಿ



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:ಸೆ.2: ರಾಜ್ಯದಲ್ಲಿ ಅಸಹ್ಯಕರ ಘಟನೆಯೊಂದು ನಡೆದಿದೆ. ಕಳೆದ 7 ವರ್ಷಗಳಿಂದ ಜೀವ ಬೆದರಿಕೆ ಹಾಕಿ ಚಿಕ್ಕಮ್ಮನ ಮೇಲೆ ಯುವಕರಿಬ್ಬರು ಮೃಗೀಯವಾಗಿ ನಡೆದುಕೊಂಡಿದ್ದಾರೆ.

ಪೊಲೀಸ್ ಪೇದೆ ಹಾಗೂ ಜೆಸ್ಕಾಂ ಉದ್ಯೋಗದಲ್ಲಿರುವ ಯುವಕರು ಪದೇ ಪದೇ ಸಾಮೂಹಿಕ ಅತ್ಯಾಚಾರ ನಡೆಸಿದ್ದಾರೆ. ಯಾದಗಿರಿ ಜಿಲ್ಲೆಯ ಗುರುಮಿಠಕಲ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದ್ದು ಯಾದಗಿರಿ ಸಂಚಾರಿ ಠಾಣೆ ಕಾನ್ಸ್‌ಟೇಬಲ್ ರಮೇಶ್ ಹಾಗೂ ಆತನ ಸಹೋದರ ಜೆಸ್ಕಾಂ ನೌಕರ ಲಕ್ಷ್ಮಣ್ ಇಬ್ಬರೂ ತಮ್ಮ ಚಿಕ್ಕಪ್ಪನ ಪತ್ನಿ ಚಿಕ್ಕಮ್ಮನ ಮೇಲೆಯೇ ನಿರಂತರವಾಗಿ ಅತ್ಯಾಚಾರವೆಸಗಿದ್ದಾರೆ. ಈ ಬಗ್ಗೆ ಸಂತ್ರಸ್ತ ಮಹಿಳೆ ಯಾದಗಿರಿ ಮಹಿಳಾ ಠಾಣೆಯಲ್ಲಿ ದೂರು ದಾಖಲಿಸಿದ್ದು ಪೊಲೀಸರು ತನಿಖೆ ಕೈಗೊಂಡಿದ್ದಾರೆ.

## ಪ್ರೀಮಿಯಂ ಬ್ರ್ಯಾಂಡ್‌ಗಳ ಮದ್ಯದ ದರ ಇಳಿಕೆ ಚಿಂತನೆ :ತಿಮ್ಮಾಪುರ್

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಸೆ.2: ಅಬಕಾರಿ ಇಲಾಖೆಯ ಆದಾಯವು ಎರಡು ತ್ರೈಮಾಸಿಕದಲ್ಲಿ ನಿರೀಕ್ಷೆ ಮೀರಿ ಸಂಗ್ರಹವಾಗಿದೆ. ಜೊತೆಗೆ ಪ್ರೀಮಿಯಂ ಬ್ರ್ಯಾಂಡ್ ಮದ್ಯದ ದರ ಇಳಿಕೆ ಮಾಡುವ ಚಿಂತನೆ ಇದೆ ಎಂದು ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ್ ತಿಳಿಸಿದರು.

ವಿಧಾನಸೌಧದಲ್ಲಿ ಅಬಕಾರಿ ಇಲಾಖೆ ಪ್ರಗತಿ ಪರಿಶೀಲನೆ ಸಭೆ ಬಳಿಕ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಅಬಕಾರಿ ಇಲಾಖೆಯಿಂದ ಆದಾಯದ ನಿರೀಕ್ಷೆ ಇರುತ್ತದೆ. ಎರಡು ತ್ರೈಮಾಸಿಕದಲ್ಲಿ ನಮ್ಮ ಆದಾಯ ನಿರೀಕ್ಷೆಗೂ ಮೀರಿ ಸಂಗ್ರಹವಾಗಿದೆ. 2 ತ್ರೈಮಾಸಿಕದಲ್ಲಿ



ನಮ್ಮ ನಿರೀಕ್ಷೆ 16,290 ಕೋಟಿ ರೂ. ಇತ್ತು. ಆದರೆ ಈಗ 16,358.76 ಕೋಟಿ ರೂ. ಸಂಗ್ರಹವಾಗಿದೆ. ನಿರೀಕ್ಷೆ ಮೀರಿ ಶೇ.142 ಜಾಸ್ತಿ ಸಂಗ್ರಹ ಆಗಿದೆ ಎಂದರು.

ನಮ್ಮ ಇಲಾಖೆಯಲ್ಲಿ ಹೊಸ ಹೊಸ ಬದಲಾವಣೆ ತರಲಾಗಿದೆ. ಮೊದಲ ಬಾರಿಗೆ ಅಬಕಾರಿ ಹುದ್ದೆಗಳ ನೇಮಕ ಕೌನ್ಸಿಲಿಂಗ್ ಮೂಲಕ ಮಾಡಲಾಗ್ತಿದೆ. ಲೈಸೆನ್ಸ್‌ನ್ನು ಪ್ರತಿ ವರ್ಷ ನವೀಕರಣ ಮಾಡಬೇಕಿತ್ತು. ಆದರೆ ಈಗ ಇದನ್ನ 5 ವರ್ಷಕ್ಕೆ ಮಾಡಿದ್ದೇವೆ. ಅಐ-7 ಪರ್ಮಿಷನ್‌ಗೆ ಕಾಲಾವಕಾಶ ಬೇಕಿತ್ತು. ಆದರೆ ಈಗ ಇದರಲ್ಲಿ ಕೆಲವು ಬದಲಾವಣೆ ಮಾಡಿ ಆದಷ್ಟು ಬೇಗ ಅನುಮತಿ ಕೊಡುವ ಕೆಲಸ ಮಾಡ್ತಿದ್ದೇವೆ. ಡ್ರಗ್ಸ್, ಗಾಂಜಾ ಹಾವಳಿ ತಡೆಯಲು ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ್ದೇನೆ. ಅಧಿಕಾರಿಗಳು ಉತ್ತಮವಾಗಿ ಕೆಲಸ ಮಾಡ್ತಿದ್ದಾರೆ ಎಂದು ಹೇಳಿದರು.

ಅಐ2/ಅಐ9 ಅನುಮತಿ ಕೊಡಲು ನಿಯಮ ಬದಲಾವಣೆ ಮಾಡಿ, ಹರಾಜು ಮೂಲಕ ಕೊಡುವ ನಿರ್ಧಾರ ಮಾಡಲಾಗಿದೆ. 571

(2ನೇ ಪುಟ ನೋಡಿ)

## ಒಂದನೇ ಪುಟದಿಂದ

# ಜಗತ್ತನ್ನೇ ಬದಲಿಸಲಿದೆ: ಪ್ರಧಾನಿ ಮೋದಿ

ಇಸ್ರೋ ಅಭಿವೃದ್ಧಿಪಡಿಸಿದ ವಿಕ್ರಮ್ ಚಿಪ್ ಅನ್ನು ಮೊದಲು ಮಾರ್ಚ್‌ನಲ್ಲಿ ಪರಿಚಯಿಸಲಾಯಿತು. ಕಖಐಗಿ–ಅ60 ಕಾರ್ಯಾಚರಣೆಯ ಸಮಯದಲ್ಲಿ ವಿಕ್ರಮ್ 3201 ಸಾಧನದ ಆರಂಭಿಕ ಭಾಗವನ್ನು ಬಾಹ್ಯಾಕಾಶದಲ್ಲಿ ಯಶಸ್ವಿಯಾಗಿ ಪರೀಕ್ಷಿಸಲಾಯಿತು. ಇದು ಭವಿಷ್ಯದ ಬಾಹ್ಯಾಕಾಶ ಯಾತ್ರೆಗಳಿಗೆ ಅದರ ವಿಶ್ವಾಸಾರ್ಹತೆ ಮೂಡಿಸಿದೆ.

ವಿಕ್ರಮ್–32 ಒಂದು ಕಂಪ್ಯೂಟರ್ ಚಿಪ್ ಆಗಿದ್ದು, ಅದು ಹಲವು ವಿಭಿನ್ನ ಕಾರ್ಯಗಳನ್ನು ನಿರ್ವಹಿಸಬಲ್ಲದು. ಇದು ದಶಮಾಂಶಗಳನ್ನು ಹೊಂದಿರುವ ಸಂಖ್ಯೆಗಳೊಂದಿಗೆ ಕಾರ್ಯನಿರ್ವಹಿಸುತ್ತದೆ. 32–ಬಿಟ್ ವಿನ್ಯಾಸವನ್ನು ಬಳಸಿಕೊಂಡು ನಿರ್ಮಿಸಲಾಗಿದೆ. ಅಂದರೆ ಇದು ಏಕಕಾಲದಲ್ಲಿ 32 ಬಿಟ್‌ಗಳ ಭಾಗಗಳಲ್ಲಿ ಡೇಟಾವನ್ನು ಪ್ರಕ್ರಿಯೆಗೊಳಿಸುತ್ತದೆ. ಬಾಹ್ಯಾಕಾಶ ಹಾರಾಟದಲ್ಲಿ ಕಂಡುಬರುವ ತೀವ್ರ ತಾಪಮಾನ ತಡೆದುಕೊಳ್ಳುವಂತೆ ವಿನ್ಯಾಸಗೊಳಿಸಲಾಗಿದೆ. ಇಸ್ರೋ ಪ್ರಕಾರ, ಇದು ಗಣನೀಯ ಪ್ರಮಾಣದ ಸ್ಮರಣೆಯನ್ನು ನಿರ್ವಹಿಸಬಲ್ಲದು. ಉಪಗ್ರಹಗಳು ಮತ್ತು ಬಾಹ್ಯಾಕಾಶ ವಾಹನಗಳನ್ನು ಉಡಾವಣೆ ಮಾಡಲು ಅಗತ್ಯವಾದ ಸಂಕೀರ್ಣ ಸೂಚನೆಗಳನ್ನು ಕಾರ್ಯಗತಗೊಳಿಸಬಲ್ಲದು.

ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವ ಅಶ್ವಿನಿ ವೈಷ್ಣವ್, ಐದು ಹೊಸ ಸೆಮಿಕಂಡಕ್ಟರ್ ಘಟಕಗಳು ನಿರ್ಮಾಣ ಹಂತದಲ್ಲಿವೆ. ಆರು ರಾಜ್ಯಗಳಲ್ಲಿ 1.60 ಲಕ್ಷ ಕೋಟಿ ರೂ.ಗೂ ಹೆಚ್ಚು ಹೂಡಿಕೆಯೊಂದಿಗೆ 10 ಪ್ರಮುಖ ಯೋಜನೆಗಳನ್ನು ಅನುಮೋದಿಸಲಾಗಿದೆ. ಡಿಸೈನ್ ಲಿಂಕ್ಡ್ ಇನ್ಸೆಂಟಿವ್ ಯೋಜನೆಯಡಿಯಲ್ಲಿ 23 ಕ್ಕೂ ಹೆಚ್ಚು ವಿನ್ಯಾಸ ಸ್ಟಾರ್ಟ್‌ಅಪ್‌ಗಳನ್ನು ಬೆಂಬಲಿಸುತ್ತಿದ್ದು, ಭಾರತದಲ್ಲೇ ಉತ್ಪಾದನೆ ತೀವ್ರಗೊಳಿಸುವ ಪ್ರಯತ್ನ ನಡೆದಿದೆ ಎಂದಿದ್ದಾರೆ.

# ಸಲ್ಲಿಕೆಗೆ ಅಧಿಕಾರಿಗಳಿಗೆ ಸೂಚನೆ

ಈ ಸಂದರ್ಭದಲ್ಲಿ ತಹಸೀಲ್ದಾರ್ ಅಂಜುಮ್ ತಬಸುಮ್, ತಾಪಂ. ಇಒ ದೀಪಿಕಾ, ಬಿಇಒ ವೆಂಕಟೇಶ ಗೂಡಾಳ, ಪಶು ಇಲಾಖೆ ಸಹಾಯಕ ನಿರ್ದೇಶಕ ಡಾ. ಗೋವಿಂದ, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಶರಣಕುಮಾರ, ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕಿ ಲಕ್ಷ್ಮಿ ಪಾಟೀಲ್, ಪಿಡಬ್ಲ್ಯೂ ಎಇಇ ವೆಂಕಟ ಸಿಂಧೆ, ಪಿಆರ್ ಇ ಎಇಇ ಪಶುಪತಿ, ಕಂದಾಯ ನಿರೀಕ್ಷಕ ರಾಹುಲ್ ದೇವ, ಅಫ್ಸರಮಿಯ, ಓಂಕಾರ ತುಂಬಾ, ಸಿದ್ದಣ್ಣ ಭೂಶಟ್ಟಿ, ಗುರುಶಾಂತ ಇಟಗಿ, ನಿಜಾಮೋದ್ದಿನ್, ಬಸವರಾಜ ಮೋಳಕೇರಾ, ರವಿಚಂದ್ರನ್, ಜೈರಾಜ ವೈದ್ಯ, ಲಕ್ಷ್ಮಣ ಸಿಂಗೆ, ಶಿವರಾಜ ರೂಗನ್, ಸತೀಷ ಕುಂದನ್, ಆಕಾಶ ಕುಂದನ್, ಸುಭಾಷ ವೈದ್ಯ ಇದ್ದರು.

> ಬೆಳೆ ಹಾನಿ ಕುರಿತು ರೈತರು ಗಾಬರಿಯಾಗದೆ ಧೈರ್ಯದಿಂದ ಇರಬೇಕು. ಸರಕಾರದ ಗಮನಕ್ಕೆ ತರುವ ಮೂಲಕ ರೈತರಿಗೆ ಪರಿಹಾರ ನೀಡಲಾಗುವುದು.
>
> **ಡಾ. ಚಂದ್ರಶೇಖರ ಪಾಟೀಲ್ ವಿಧಾನ ಪರಿಷತ್ ಸದಸ್ಯ**
>
> ಮುಂಗಾರು ಬೆಳೆ ಹಾನಿ ಕುರಿತು ಅಧಿಕಾರಿಗಳು ಸರ್ವೆ ಮಾಡುವ ಮೂಲಕ ವರದಿ ಸಲ್ಲಿಸಬೇಕು. ಜತೆಗೆ ಕೈಗಾರಿಕಾ ಪ್ರದೇಶದ ಕಾರಖಾನೆಗಳ ವಿರುದ್ಧ ಸೂಕ್ತ ಕ್ರಮ ಕೈಗೊಂಡು ಶಾಶ್ವತ ಪರಿಹಾರ ನೀಡಬೇಕು.
>
> **ಭೀಮರಾವ ಪಾಟೀಲ್ ವಿಧಾನ ಪರಿಷತ್ ಸದಸ್ಯ**
>
> ಕೈಗಾರಿಕಾ ಪ್ರದೇಶದ ಕಾರಖಾನೆಗಳ ರಾಸಾಯನಿಕ ತ್ಯಾಜ್ಯ ಹಾಗೂ ಹೊಗೆಯಿಂದ ನೀರು ಮತ್ತು ಗಾಳಿ ಅಶುದ್ಧವಾಗಿ ಜನರ ಆರೋಗ್ಯದ ಮೇಲೆ ಭಾರಿ ದುಷ್ಪರಿಣಾಮ ಬೀರುತ್ತಿದೆ. ಹೀಗಾಗಿ ನಮಗೆ ಶಾಶ್ವತ ಪರಿಹಾರ ಕಲ್ಪಿಸಿಕೊಡಬೇಕು.
>
> **ಓಂಕಾರ ತುಂಬಾ ಸ್ಥಳೀಯ ನಿವಾಸಿ, ಗಡವಂತಿ**

# ರಾಜ್ಯದ 205 ಗ್ರಾಪಂಗಳ ಆಯ್ಕೆ: ಪ್ರಿಯಾಂಕ್ ಖರ್ಗೆ

ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳ ಸದಸ್ಯರನ್ನು ಒಳಗೊಂಡ ಗ್ರಾಮ ಪಂಚಾಯತ್ ಡಿಜಿಟಲ್ ಅಕ್ಸೆಸ್ ಸಮಿತಿ(ಆಂಅ)ಗಳನ್ನು ರಚಿಸಲಾಗುವುದು ಎಂದು ಸಚಿವ ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದ್ದಾರೆ.

ಗ್ರಾಮ ಪಂಚಾಯತಿ ಅಧ್ಯಕ್ಷರು ಅಥವಾ ಚುನಾಯಿತ ಪ್ರತಿನಿಧಿ ಇಲ್ಲದಿದ್ದ ಪಕ್ಷದಲ್ಲಿ ಆಡಳಿತಾಧಿಕಾರಿ ಅಧ್ಯಕ್ಷತೆಯಲ್ಲಿ ಸಮಿತಿಗಳನ್ನು ರಚಿಸಲಾಗುತ್ತಿದ್ದು ಗ್ರಾಮ ಪಂಚಾಯತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸಂಚಾಲಕರಾಗಿ ಕಾರ್ಯನಿರ್ವಹಿಸುತ್ತಾರೆ ಹಾಗೂ ಸಮಿತಿಯಲ್ಲಿ 4 ಮಂದಿ ಸದಸ್ಯರಿರುತ್ತಾರೆ. ಸಮಿತಿ ಸಲಹಾತ್ಮಕ ಸಮಿತಿಯಾಗಿದ್ದು, ಕೆಳಗಿನಂತೆ ಸಮಿತಿಗಳು ಜವಾಬ್ದಾರಿಗಳನ್ನು ನಿರ್ವಹಿಸಲಿವೆ ಎಂದು ಸಚಿವರು ಹೇಳಿದ್ದಾರೆ.

ಗ್ರಾಮೀಣ ಸಮುದಾಯಗಳು, ಸಾರ್ವಜನಿಕ ಮತ್ತು ಖಾಸಗಿ ಸಂಸ್ಥೆಗಳು ಹಾಗೂ ಗ್ರಾಮ ಮಟ್ಟದ ಉದ್ಯಮಿಗಳು/ಸಂಸ್ಥೆಗಳಿಗೆ ಹೆಚ್ಚಿನ ವೇಗದ ಬ್ರಾಡ್‌ಬ್ಯಾಂಡ್ ಸಂಪರ್ಕದ ಪ್ರಯೋಜನಗಳು ಹಾಗೂ ಗ್ರಾಮಗಳ ಸಾಮಾಜಿಕ, ಆರ್ಥಿಕ ಬೆಳವಣಿಗೆಯಲ್ಲಿ ಇದರ ಪಾತ್ರದ ಕುರಿತು ಅರಿವು ಮೂಡಿಸುವುದು ಹಾಗೂ ಬ್ರಾಡ್‌ಬ್ಯಾಂಡ್ ವಿಸ್ತರಣೆ ಹಾಗೂ ಡಿಜಿಟಲ್ ಲಭ್ಯತೆಯನ್ನು ಸುಧಾರಿಸುವತ್ತ ಕಾರ್ಯನಿರ್ವಹಿಸುವುದು. ಹಳ್ಳಿಗಳಲ್ಲಿ ಹೆಚ್ಚಿನ ವೇಗದ ಬ್ರಾಡ್‌ಬ್ಯಾಂಡ್ ಮೂಲಕ ಒದಗಿಸಬಹುದಾದ ಸೇವೆಗಳು ಮತ್ತು ಬಳಕೆಯ ಪ್ರಕರಣಗಳಿಗೆ ಸಂಬಂಧಿಸಿದಂತೆ ಅನ್ವೇಷಣೆ ಮಾಡುವುದು, ಶಾಲೆಗಳು, ಆಸ್ಪತ್ರೆಗಳು ಮತ್ತು ಇತರ ಸಾರ್ವಜನಿಕ ಸ್ಥಳಗಳಲ್ಲಿ ಐಸಿಟಿ ಉಪಕರಣಗಳನ್ನು ಸ್ಥಾಪಿಸುವ ಸಾಧ್ಯತೆಗಳನ್ನು ಪರಿಶೀಲಿಸುವುದು ಸೇರಿದಂತೆ ಸಂಬಂಧಿಸಿದ ಮತ್ತಿತರ ಹೊಣೆಯನ್ನು ಸಮಿತಿಗಳಿಗೆ ನಿಡಲಾಗಿದೆ.

ಜಿಲ್ಲಾ ಪಂಚಾಯತಿಯ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಆಯ್ದ ಗ್ರಾಮ ಪಂಚಾಯತಿಗಳಲ್ಲಿ ಡಿಜಿಟಲ್ ಅಕ್ಸೆಸ್ ಸಮಿತಿ ರಚನೆಯಾಗಿರುವುದರ ಬಗ್ಗೆ ಖಾತರಿಪಡಿಸಿಕೊಳ್ಳಬೇಕು ಎಂದೂ ಸಚಿವರು ಸೂಚನೆ ನಿಡಿದ್ದಾರೆ.

# ಸಿದ್ಧತೆ ಮಾಡಿಕೊಳ್ಳಿ:ನಲಿನ್ ಅತುಲ್

ಪ್ರವಾಸೋದ್ಯಮ ಇಲಾಖೆಯಿಂದ ಆಯೋಜಿಸಬೇಕು. ಪ್ರತ್ಯೇಕವಾಗಿ ಜಿಲ್ಲಾವಾರು ಮಳಿಗೆ ಸ್ಥಾಪಿಸುವುದರ ಜೊತೆಗೆ ಅದರ ಮಾಹಿತಿ ನೀಡುವ ಧ್ವನಿವರ್ಧಕ ವ್ಯವಸ್ಥೆ ಸಹ ಏರ್ಪಾಡು ಮಾಡಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಡಿ.ಸಿ.ಪಿ ಕನಿಕಾ ಸಿಕ್ರಿವಾಲ್, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಹೆಚ್ಚುವರಿ ಎಸ್.ಪಿ.ಮಹೇಶ ಮೇಘಣ್ಣನವರ್, ಕೆ.ಕೆ.ಆರ್.ಟಿ.ಸಿ. ಸಂಸ್ಥೆಯ ಮುಖ್ಯ ಸಂಚಾರಿ ಅಧಿಕಾರಿ ಸಂತೋಷಕುಮಾರ, ಮಂಡಳಿಯ ಉಪ ಕಾರ್ಯದರ್ಶಿ ಮಂಜುನಾಥ ಪ್ರಸಾದ, ಅಪರ ನಿರ್ದೇಶಕಿ ಪ್ರವೀಣಪ್ರಿಯಾ ಡೇವಿಡ್, ಲೋಕೋಪಯೋಗಿ ಇಲಾಖೆಯ ಅಧೀಕ್ಷಕ ಅಭಿಯಂತ ಅಮೀನ್ ಮುಕ್ತಾರ, ಪ್ರವಾಸೋದ್ಯಮ ಇಲಾಖೆಯ ಜಂಟಿ ನಿರ್ದೇಶಕ ಡಾ.ಎಸ್.ತಿಪ್ಪೆಸ್ವಾಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕಿ ಜಗದೀಶ್ವರಿ ನಾಸಿ ಸೇರಿದಂತೆ ಇತರೆ ಜಿಲ್ಲಾ ಮಟ್ಟದ ಅಧಿಕಾರಿಗಳಿದ್ದರು.

# ಪ್ರತಿಪಕ್ಷಗಳಿಗೆ ಮೋದಿ ತಿರುಗೇಟು

ಎಂದ ಪ್ರಧಾನಿ ನರೇಂದ್ರ ಮೋದಿ ಭಾವುಕರಾದರು.

ಬಿಹಾರ ರಾಜ್ಯ ಜೀವಿಕಾ ನಿಧಿ ಸಖ್ ಸಹಕಾರಿ ಸಂಘ ಲಿಮಿಟೆಡ್ ಅನ್ನು ವರ್ಚುವಲ್ ಆಗಿ ಉದ್ಘಾಟಿಸಿ, ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಕಾಂಗ್ರೆಸ್ ಪಕ್ಷದ ಮೇಲೆ ತೀವ್ರ ವಾಗ್ದಾಳಿ ನಡೆಸಿದರು. ಆರ್‌ಜೆಡಿ–ಕಾಂಗ್ರೆಸ್ ತಮ್ಮ ತಾಯಿಯನ್ನು ನಿಂದಿಸಬಹುದು ಎಂದು ಯಾರೂ ಊಹಿಸಿರಲಿಲ್ಲ ಎಂದು ಹೇಳಿದರು.

ಆ ಮಾತುಗಳನ್ನು ಬಿಹಾರದ ಪ್ರತಿಯೊಬ್ಬ ತಾಯಿಯೂ ಕೇಳಿದ ನಂತರ ನೀವೂ ಎಷ್ಟು ಕೆಟ್ಟದಾಗಿ ಭಾವಿಸಿದ್ದೀರಿ. ನನ್ನ ಹೃದಯದಲ್ಲಿ ನನಗೆ ಎಷ್ಟು ನೋವಿದೆಯೋ ಅಷ್ಟೇ ನೋವು ಬಿಹಾರದ ಜನರಲ್ಲೂ ಅಷ್ಟೆ ನೋವಿದೆ ಎಂದು ನನಗೆ ತಿಳಿದಿದೆ. ರಾಜಕೀಯದೊಂದಿಗೆ ಯಾವುದೇ ಸಂಬಂಧವಿಲ್ಲದ ತಮ್ಮ ತಾಯಿಯನ್ನು ಆರ್‌ಜೆಡಿ–ಕಾಂಗ್ರೆಸ್ ಏಕೆ ನಿಂದಿಸಿತು ಎಂದು ಪ್ರಶ್ನಿಸಿದರು.ಕೆಲವು ಸಮಯದ ಹಿಂದೆ, 100 ವರ್ಷಗಳನ್ನು ಪೂರೈಸಿದ ನಂತರ, ನನ್ನ ತಾಯಿ ನಮ್ಮೆಲ್ಲರನ್ನೂ ತೊರೆದರು. ರಾಜಕೀಯದೊಂದಿಗೆ ಯಾವುದೇ ಸಂಬಂಧವಿಲ್ಲದ ಅವರನ್ನು ಈಗ ಆರ್‌ಜೆಡಿ, ಕಾಂಗ್ರೆಸ್‌ನಿಂದ ನಿಂದಿಸಲಾಯಿತು. ಸಹೋದರಿಯರೇ ಮತ್ತು ತಾಯಂದಿರೇ, ನಾನು ನಿಮ್ಮ ಮುಖಗಳನ್ನು ನೋಡಬಲ್ಲೆ. ನೀವು ಅನುಭವಿಸಿದ ನೋವನ್ನು ನಾನು ಊಹಿಸಬಲ್ಲೆ. ಕೆಲವು ತಾಯಂದಿರ ಕಣ್ಣಲ್ಲಿ ಕಣ್ಣೀರು ನನಗೆ ಕಾಣುತ್ತಿದೆ. ಇದು ತುಂಬಾ ದುಃಖಕರ, ನೋವಿನ ಸಂಗತಿ ಎಂದು ಅವರು ಹೇಳಿದರು.

ನನ್ನ ತಾಯಿ ನಮ್ಮೆಲ್ಲರನ್ನೂ ತೀವ್ರ ಬಡತನದಲ್ಲಿ ಬೆಳೆಸಿದರು. ಅವರು ಎಂದಿಗೂ ತನಗಾಗಿ ಹೊಸ ಸೀರೆಯನ್ನು ಖರೀದಿಸಲಿಲ್ಲ ಮತ್ತು ನಮ್ಮ ಕುಟುಂಬಕ್ಕಾಗಿ ಪ್ರತಿ ಪೈಸೆಯನ್ನೂ ಉಳಿಸುತ್ತಿದ್ದರು. ನನ್ನ ತಾಯಿಯಂತೆ, ನನ್ನ ದೇಶದ ಕೋಟ್ಯಂತರ ತಾಯಂದಿರು ಪ್ರತಿದಿನ 'ತಪಸ್ಸು' ಮಾಡುತ್ತಾರೆ ಎಂದು ಭಾವುಕರಾದರು. ಬಿಹಾರ ರಾಜ್ಯ ಜೀವಿಕಾ ನಿಧಿ ಸಖ್ ಸಹಕಾರಿ ಸಂಘ ಲಿಮಿಟೆಡ್ ಜೀವಿಕಾದೊಂದಿಗೆ ಸಂಬಂಧ ಹೊಂದಿರುವ ಸಮುದಾಯದ ಸದಸ್ಯರಿಗೆ ಕೈಗೆಟುಕುವ ಬಡ್ಡಿದರದಲ್ಲಿ ಹಣವನ್ನು ಸುಲಭವಾಗಿ ಪಡೆಯಲು ಅವಕಾಶ ನೀಡುವುದಾಗಿದೆ. ಜೀವಿಕಾದ ಎಲ್ಲಾ ನೋಂದಾಯಿತ ಕ್ಲಸ್ಟರ್ ಮಟ್ಟದ ಒಕ್ಕೂಟಗಳು ಸೊಸೈಟಿಯ ಸದಸ್ಯರಾಗುತ್ತವೆ. ಈ ಸಂಸ್ಥೆಯ ಕಾರ್ಯಾಚರಣೆಗಾಗಿ, ಬಿಹಾರ ಸರ್ಕಾರ ಮತ್ತು ಕೇಂದ್ರ ಸರ್ಕಾರವು ಹಣವನ್ನು ಕೊಡುಗೆ ನೀಡುತ್ತವೆ. ಇದಕ್ಕೆ ಪ್ರಧಾನಿ ಮೋದಿ 105 ಕೋಟಿ ರೂ. ನೆರವು ವರ್ಗಾಯಿಸಿದರು. ಇದು ಸಂಪೂರ್ಣವಾಗಿ ಡಿಜಿಟಲ್ ವ್ಯವಸ್ಥೆಯಾಗಿದೆ.

# ಇಳಿಕೆ ಚಿಂತನೆ :ತಿಮ್ಮಾಪುರ್

ಹರಾಜು ಹಾಕಿ ಅನುಮತಿ ಕೊಡ್ತೀವಿ. ಆದಷ್ಟೂ ಬೇಗ ಈ ಪ್ರಕ್ರಿಯೆ ಮಾಡ್ತೀವಿ. ಜನಸಂಖ್ಯೆ ಅನುಗುಣವಾಗಿ ಜಾಸ್ತಿ ಅನುಮತಿ ಕೊಡುವ ಕೆಲಸ ಮಾಡ್ತೀವಿ ಎಂದು ಮಾಹಿತಿ ನೀಡಿದರು.ನಮ್ಮ ಸಂಘಗಳಿಗೆ ಸಮಸ್ಯೆ ಆಗದಂತೆ ಕ್ರಮ ತೆಗೆದುಕೊಳ್ತೀವಿ. ನಮಗೆ ಆದಾಯ ಕಡಿಮೆ ಆಗಬಾರದು. ಆನ್‌ಲೈನ್ ಅರ್ಜಿಗೂ ಕೂಡ ವ್ಯವಸ್ಥೆ ಮಾಡಿದ್ದೇವೆ. ನಕಲಿ ಮದ್ಯ ಮಾರಾಟ, ಗೋವಾ ಡ್ರಿಂಕ್ಸ್ ಮಾರಾಟ ಮಾಡ್ತಾರೆ. ಹೀಗಾಗಿ ಈ ಬಗ್ಗೆ ನಿಗಾ ಇಡಲಾಗಿದೆ. ನಮ್ಮ ಮದ್ಯ ಸ್ಲ್ಯಾಬ್ 5ರ ಮೇಲಿನ ಪ್ರೀಮಿಯಂ ಬ್ರ್ಯಾಂಡ್ ಮೇಲೆ ದರ ಜಾಸ್ತಿ ಇದೆ. ಹೊಸ ಎಂಎಸ್‌ಐಎಲ್ ಮಳಿಗೆ ಕೊಡುವುದಿಲ್ಲ. ಇರುವ ಮಳಿಗೆ ಹರಾಜು ಹಾಕಿ ಕೊಡ್ತೀವಿ ಅಷ್ಟೇ ಎಂದು ಸ್ಪಷ್ಟಪಡಿಸಿದರು.ಪ್ರೀಮಿಯಂ ಬ್ರ್ಯಾಂಡ್‌ಗಳ ಮದ್ಯದ ದರ ಕಡಿಮೆ ಮಾಡೋ ಬಗ್ಗೆ ಚಿಂತನೆ ಇದೆ. ಸದ್ಯಕ್ಕೆ ಈಗಲೇ ಆಗುವುದಿಲ್ಲ. ಅಕ್ಕ ಪಕ್ಕದ ರಾಜ್ಯಗಳ ವಿವರ ನೋಡಿ, ಮುಂದಿನ ದಿನಗಳಲ್ಲಿ ನಾವು ಈ ಬಗ್ಗೆ ತೀರ್ಮಾನ ಮಾಡ್ತೀವಿ. ಅಬಕಾರಿ ಇಲಾಖೆಯಲ್ಲಿ ಯಾರು ತರದ ಬದಲಾವಣೆ ಮಾಡ್ತೀನಿ, ಇದು ತಿಮ್ಮಾಪುರ್ ಸ್ಟೈಲ್ ಎಂದರು

# ಪವನ್ ಖೇರಾಗೆ ಚುನಾವಣಾ ಆಯೋಗ ನೋಟಿಸ್

ಕ್ಷೇತ್ರಗಳಲ್ಲಿ ಅಥವಾ ಒಂದಕ್ಕಿಂತ ಹೆಚ್ಚು ಬಾರಿ ನೋಂದಾಯಿಸುವುದನ್ನು ನಿಷೇಧಿಸುತ್ತದೆ.ಚುನಾವಣಾ

ಆಯೋಗ ಖೇರಾ ಅವರಿಗೆ ನೀಡಿದ ನೋಟಿಸ್‌ನಲ್ಲಿ, "ನಿಮಗೆ ತಿಳಿದಿರುವಂತೆ, ಒಂದಕ್ಕಿಂತ ಹೆಚ್ಚು ಕ್ಷೇತ್ರಗಳಲ್ಲಿ ಮತದಾರರ ಪಟ್ಟಿಯಲ್ಲಿ ನೋಂದಾಯಿಸಿಕೊಳ್ಳುವುದು ಜನತಾ ಪ್ರಾತಿನಿಧ್ಯ ಕಾಯ್ದೆ, 1950 ರ ಅಡಿಯಲ್ಲಿ ದಂಡನೀಯ ಅಪರಾಧವಾಗಿದೆ.ಆದ್ದರಿಂದ ಈ ಕಾಯ್ದೆಯಡಿಯಲ್ಲಿ ನಿಮ್ಮ ವಿರುದ್ಧ ಏಕೆ ಕ್ರಮ ಕೈಗೊಳ್ಳಬಾರದು ಎಂಬುದಕ್ಕೆ ಕಾರಣ ತಿಳಿಸಲು ನಿಮಗೆ ನಿರ್ದೇಶಿಸಲಾಗಿದೆ."

ಚುನಾವಣಾ ಕಾನೂನಿನಡಿಯಲ್ಲಿ, ಒಂದಕ್ಕಿಂತ ಹೆಚ್ಚು ಸಕ್ರಿಯ ಮತದಾರರ ಗುರುತಿನ ಚೀಟಿಗಳನ್ನು ಹೊಂದಿರುವುದು ಒಂದು ವರ್ಷದವರೆಗೆ ಜೈಲು ಶಿಕ್ಷೆ, ದಂಡ ಅಥವಾ ಎರಡನ್ನೂ ವಿಧಿಸಬಹುದು.ನಿಮ್ಮ ಉತ್ತರವನ್ನು ಸೆಪ್ಟೆಂಬರ್ 8 ರಂದು ಬೆಳಗ್ಗೆ 11 ಗಂಟೆಯೊಳಗೆ ಪೂರಕ ದಾಖಲೆಗಳೊಂದಿಗೆ ವಿವರಣೆ ಸಲ್ಲಿಸುವಂತೆ ಖೇರಾ ಅವರಿಗೆ ಸೂಚಿಸಲಾಗಿದೆ. ಅಲ್ಲದೆ ಗಡುವಿನೊಳಗೆ ಪ್ರತಿಕ್ರಿಯಿಸಲು ವಿಫಲವಾದರೆ ಕಾನೂನಿನ ಪ್ರಕಾರ ಮುಂದುವರಿಯುವುದಾಗಿ ಚುನಾವಣಾ ಆಯೋಗ ಎಚ್ಚರಿಸಿದೆ.ಬಿಜೆಪಿಯ ಆರೋಪಗಳು ಮತ್ತು ಚುನಾವಣಾ ಆಯೋಗದ ನೋಟಿಸ್‌ಗೆ ಪ್ರತಿಕ್ರಿಯಿಸಿದ ಖೇರಾ, ಎರಡು ವಿಧಾನಸಭಾ ಕ್ಷೇತ್ರಗಳಲ್ಲಿ ತಮ್ಮ ಹೆಸರು ಕಾಣಿಸಿಕೊಂಡಿರುವುದಕ್ಕೆ ಚುನಾವಣಾ ಆಯೋಗವೇ ಕಾರಣ ಎಂದು ತಿರುಗೇಟು ನೀಡಿದ್ದಾರೆ.ಖೇರಾ ಅವರು 2016 ರಲ್ಲಿ ನವದೆಹಲಿ ಕ್ಷೇತ್ರದಿಂದ ಹೊರಗೆ ಹೋಗಿದ್ದರು ಮತ್ತು ಅಲ್ಲಿಂದ ತಮ್ಮ ಹೆಸರನ್ನು ತೆಗೆದು ಹಾಕಲು ಅರ್ಜಿ ಸಲ್ಲಿಸಿರುವುದಾಗಿ ಹೇಳಿದ್ದಾರೆ.

"ನವದೆಹಲಿ ಕ್ಷೇತ್ರದಲ್ಲಿ ನನ್ನ ಹೆಸರಿನಲ್ಲಿ ಯಾರಿಗೆ ಮತ ಚಲಾಯಿಸುವಂತೆ ಒತ್ತಾಯಿಸಲಾಗುತ್ತಿದೆ ಎಂದು ಚುನಾವಣಾ ಆಯೋಗದಿಂದ ತಿಳಿದುಕೊಳ್ಳಲು ನಾನು ಬಯಸುತ್ತೇನೆ. ನನಗೆ ಸಿಸಿಟಿವಿ ದೃಶ್ಯಾವಳಿ ಬೇಕು.

ನಾನು 2016 ರಲ್ಲಿ ಅಲ್ಲಿಂದ ಸ್ಥಳಾಂತರಗೊಂಡೆ. ಅಲ್ಲಿಂದ ನನ್ನ ಹೆಸರನ್ನು ತೆಗೆದು ಹಾಕಲು ನಾನು ಕಾರ್ಯವಿಧಾನವನ್ನು ಅನುಸರಿಸಿ ಅರ್ಜಿ ಸಲ್ಲಿಸಿದ್ದೇನೆ. ಆದರೂ ನನ್ನ ಹೆಸರು ಇನ್ನೂ ಏಕೆ ಇದೆ?" ಎಂದು ಖೇರಾ ಪ್ರಶ್ನಿಸಿದ್ದಾರೆ.

## ಬುಡಕಟ್ಟು ಸಮುದಾಯದ ಪರಿಶಿಷ್ಟ ವರ್ಗಗಳು ಸರ್ಕಾರದ ಯೋಜನೆಯ ಸೌಲಭ್ಯ ಪಡೆಯಬೇಕು



ಕಲಬುರಗಿ:ಸೆ. 02: ಬುಡಕಟ್ಟು ಸಮುದಾಯದ ಪರಿಶಿಷ್ಟ ವರ್ಗಗಳಿಗೆ ಸಮಾಜದ ಮುಖ್ಯವಾಹಿನಿಗೆ ತರುವ ಉದ್ದೇಶದಿಂದ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಮಹಾತ್ವಕಾಂಕ್ಷಿ ಯೋಜನೆಗಳ ಸೌಲಭ್ಯಗಳನ್ನು ಒದಗಿಸುವ ಮುಖ್ಯ ಉದ್ದೇಶದಿಂದ ಆದಿ ಕರ್ಮಯೋಗಿ ಅಭಿಯಾನದ ಮುಖಾಂತರ ಸರ್ಕಾರದ ಸೌಲಭ್ಯಗಳನ್ನು ತಲುಪಿಸಲು ಪ್ರತಿಯೊಬ್ಬ ಅಧಿಕಾರಿಗಳು ಪ್ರಾಮಾಣಿಕವಾಗಿ ಪ್ರಯತ್ನ ಮಾಡಬೇಕೆಂದು ಜಿಲ್ಲಾಧಿಕಾರಿಗಳ ಬಿ ಫೌಜಿಯಾ ತರನ್ನುಮ್ ಅವರು ಹೇಳಿದರು.

ಮಂಗಳವಾರದಂದು ರಾಮಮಂದಿರ ಹತ್ತಿರವಿರುವ ಅಥರ್ವ ಹೋಟೆಲ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ

ಕಲಬುರಗಿ ಜಿಲ್ಲೆ ಧರ್ತಿ ಅಭಾ ಜನಜಾತೀಯ ಗ್ರಾಮ ಉತ್ಕರ್ಷ ಅಭಿಯಾನದಡಿ, ಆದಿ ಕರ್ಮಯೋಗಿ ಅಭಿಯಾನ:ಪ್ರಕ್ರಿಯೇ ಪ್ರಯೋಗಾಲಯ ತಾಲ್ಲೂಕಾ ಮಟ್ಟದ ಅಧಿಕಾರಿಗಳಿಗೆ ಮೂರು ದಿನದ ತರಬೇತಿ ಕಾರ್ಯಾಗಾರದಲ್ಲಿ ಮಹರ್ಷಿ ವಾಲ್ಮೀಕಿ ಮತ್ತು ಬಿರ್ಸಾ ಮುಂಡಾ ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಬುಡಕಟ್ಟು ಸಮುದಾಯದ ಪರಿಶಿಷ್ಟ ವರ್ಗಗಳು ಸಮಾಜದಲ್ಲಿ ತಮ್ಮ ಸ್ಥಾನಮಾನಗಳನ್ನು ಉತ್ತಮ ಪಡಿಸಿಕೊಳ್ಳಲು ಭಾರತದಲ್ಲಿ 30 ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳು,550 ಜಿಲ್ಲೆಗಳು ಒಂದು ಲಕ್ಷ ಗ್ರಾಮಗಳು ಮತ್ತು 3000 ಬಾಕ್ಲಗಳು ಒಳಗೊಂಡು ಹೆಚ್ಚಿನ ಗಮನವನ್ನು ಕೇಂದ್ರೀಕರಿಸಿ ಸರ್ಕಾರದ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು ಎಂದು ಅವರು ಹೇಳಿದರು.

ಈಗಾಗಲೆ ತರಬೇತಿಯನ್ನು ಪಡೆದ ಮಾಸ್ಟರ್ ಟ್ರೇನರ್ಸ್‌ಗಳಿಂದ ಐದು ಇಲಾಖೆಯ 30

ತಾಲ್ಲೂಕುಮಟ್ಟದ ಅಧಿಕಾರಿಗಳಿಗೆ ಮೂರು ದಿನಗಳ ತರಬೇತಿ ನೀಡುವ ಮುಖ್ಯ ಉದ್ದೇಶಗಳನೇಂದರೆ ಬುಡಕಟ್ಟು ಸಮುದಾಯ ಪರಿಶಿಷ್ಟ ವರ್ಗಗಳ ಉನ್ನತ

ಶಿಕ್ಷಣವನ್ನು ಪಡೆದುಕೊಂಡು ಸಮಾಜದ ಮುಖ್ಯವಾಹಿನಿಗೆ ತರಲು ತರಬೇತಿ ಪಡೆದ ಅಧಿಕಾರಿಗಳು ನಾಗರಿಕರಿಗೆ ಸ್ವಯಂ ಸೇವಾ ಸಂಸ್ಥೆಯವರಿಗೆ ಯುವ ನೇತರಾರಿಗೆ ಶಿಕ್ಷಣ ತಜ್ಞರಿಗೆ ಆಧಿ ಕರ್ಮಯೋಗಿ ಅಭಿಯಾನದ ಕುರಿತು ಮತ್ತು ಬುಡಕಟ್ಟು ಸಮುದಾಯಗಳಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳ ಕುರಿತು ತಿಳುವಳಿಕೆ ಮೂಡಿಸಲು ಪ್ರತಿಯೊಬ್ಬ ಅಧಿಕಾರಿಗಳು ಶ್ರಮಿಸಬೇಕೆಂದು ತಿಳಿಸಿದರು.

ಅಧಿ ಕರ್ಮಯೋಗಿ ಅಭಿಯಾನ ಹಾಗೂ ವಿಭಾಗಾಧಿಕಾರಿ ಬುಡಕಟ್ಟು ವ್ಯವಹಾರದ

ಸಚಿವಾಲಯ ಭಾರತ ಸರ್ಕಾರ ಕಲಬುರಗಿ ಜಿಲ್ಲಾ ಪ್ರಭಾರ ಅಧಿಕಾರಿಯಾದ ಕುಂದನ ಕುಮಾರ ಮಾತನಾಡಿ, ಬುಡಕಟ್ಟು ಸಮಾಜವು ನಮ್ಮ ಸಮಾಜದಿಂದ ಅತ್ಯಂತ ವಂಚಿತ ವರ್ಗದಲ್ಲಿ ಒಂದಾಗಿದೆ ಅವರಿಗೆ ಸರ್ಕಾರದ ಯೋಜನೆಗಳ ಬಗ್ಗೆ ತಿಳಿದಿರುವುದಿಲ್ಲ ಎಂದರು.

ಸರ್ಕಾರಿ ಯೋಜನೆಗಳ ಪಡೆಯಲು ದಾಖಲೆಗಳು ಅವಶ್ಯಕತೆ ಮತ್ತು ಹೇಗೆ ಅರ್ಜಿ ಸಲ್ಲಿಸಬೇಕು ಅರಿವಿನ ಕೊರತೆಯಿಂದಾಗಿ ಅವರು ಯೋಜನೆ ಪ್ರಯೋಜನೆಗಳನ್ನು ಪಡೆಯಲು ಸಾಧ್ಯವಾಗುವುದಿಲ್ಲ. ಆದಿ ಕರ್ಮಯೋಗಿಗಳೆಂದರೆ ತರಬೇತಿ ಪಡೆದ

ಅಧಿಕಾರಿಳಲ್ಲದೆ ನಮಲ್ಲಿ ಅದಿ ಸಂಯೋಗಿ ಮತ್ತು ಶಿಕ್ಷಕರು ವೈದ್ಯರು ಮತ್ತು ಸ್ವಹಾಯ

ಗುಂಪುಗಳಿವೆ ಆದಿ ಕರ್ಮಯೋಗಿ ಅಭಿಯಾನ ಯಶಸ್ವಿಗೊಳಿಸಲು ಪ್ರತಿಯೊಬ್ಬರು ಸೇವಾ ಕೇಂದ್ರಗಳ ಸಮುದಾಯಗಳ ತಲುಪುವ ಮೂಲಕ ಸಬಲೀಕರಣಗೊಳಿಸಲು ಶ್ರಮಿಸಬೇಕೆಂದು ಹೇಳಿದರು.

ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪ್ರೀತಿ ದೊಡ್ಡಮನಿ ಕಾರ್ಯಕ್ರಮದ ಕುರಿತು ಪ್ರಸ್ತಾವಿಕವಾಗಿ

ಮಾತನಾಡಿದರು.

ವೇದಿಕೆಮೇಲೆ ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಅಭಿಯಂತರಾದ ಜಗದೇವ ಜೀವನಗಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಾಜಕುಮಾರ ರಾಠೋಡ, ನೆಲಸನ್ ಮಂಡೆಲಾ ಗ್ರಾಮೀಣಾಭಿವೃದ್ಧಿ ಸೇವಾ ಸಂಸ್ಥೆಯ ಸುಭಾಷ.ಸಿ.ಎಸ್.ಓ.

ಕಲಬುರಗಿ ಶಿಕ್ಷಣಾಧಿಕಾರಿ ಶಂಕರಮ್ಮ ಡವಳಗಿ ಕಾರ್ಯಕ್ರಮ

ನಿರೂಪಿಸಿ, ಜೇವರ್ಗಿ ಸಾಮಾಜಿಕ ಅರಣ್ಯವಲಯ ಅಧಿಕಾರಿ ಸಂತೋಷ ಕುಮಾರ ಯಾಚೆ,

ಜಿಲ್ಲಾ ಸಮಾಜ ಕಲ್ಯಾಣ ಸಹಾಯಕ ನಿರ್ದೇಶಕ ಚೇತನ್ ಗುರುಕರ್ ವಂದಿಸಿದ್ದರು.

# "ಕೆಂಭಾವಿ" ಪಟ್ಟಣದಲ್ಲಿ ಎಲ್ಲರ ಮನಸ್ಸು ಗೆಲ್ಲಿಸಿತು. "ಹಿಂದೂ" ಪಂಚಮುಖಿ ಗಣಪತಿ.!



ಸುರಪುರ : ಸೆ. 02 : ತಾಲೂಕಿನ ಕೆಂಭಾವಿ ಪಟ್ಟಣದಲ್ಲಿ

ರೈತರಿಗೆಸಮೃದ್ಧಿಯಆಶಯದೊಂದಿಗೆ ಮಹಾಗಣಪತಿಯ ಮೆರವಣಿಗೆ: ಕೆಂಭಾವಿಯಲ್ಲಿ ಭಕ್ತಿ ಹಾಗೂ ಭಾವನೆಯ ವೈಭವ

ಕೆಂಭಾವಿ ಪಟ್ಟಣದಲ್ಲಿ ನಡೆದ ಮಹಾಗಣಪತಿಯ ಮೆರವಣಿಗೆಯಲ್ಲಿ ರೈತರ ಪಾತ್ರ ಪ್ರಮುಖವಾಗಿತ್ತು. ಪಂಚಮುಖಿ ಗಣಪತಿಯನ್ನು ಎತ್ತುಗಳ ಬಂಡೆಯಲ್ಲಿ ಅಲಂಕರಿಸಿ ಪ್ರತಿಷ್ಠಾಪಿಸಿದ್ದು, ರೈತ ಸಮುದಾಯದ ಸಂಕೇತವಾಗಿದ್ದ ಎತ್ತುಗಳು ಈ ಮೆರವಣಿಗೆಯ ಸಾಂಸ್ಕೃತಿಕ ಭಾವನೆಯನ್ನು ಹುರಿದುಂಬಿಸಿತು.

ಈ ಬಾರಿಯ ಗಣೇಶೋತ್ಸವವನ್ನು ವಿಶೇಷವಾಗಿ ರೈತರ ಸುಖ–ಸಮೃದ್ಧಿಗೆ ಅರ್ಪಿಸಲಾಗಿದೆ. ಮೆರವಣಿಗೆಯ ಆಯೋಜಕರು ಹಾಗೂ ಗ್ರಾಮಸ್ಥರು, ಬೆಳೆದ ಬಿತ್ತನೆ, ಧಾನ್ಯದ ಬೆಳವಣಿಗೆ, ಮಳೆಮಟ್ಟ ಮತ್ತು ಕೃಷಿ ಬೆಳವಣಿಗೆ ಎಲ್ಲರಿಗೂ ಅನುಕೂಲವಾಗುವಂತೆ ಮಹಾಗಣಪತಿಯ ಕೃಪೆಯ ಆಶಯವನ್ನು ಹೊಂದಿದ್ದರು.ಗಣೇಶನನ್ನು "ರೈತನ ಬಾಳಿಗೆ ಬೆಳಕು ತರಲಿ, ಸಾಲ ಮುಕ್ತ ಜೀವನಕ್ಕೆ ದಾರಿ ಮಾಡಲಿ, ಹೊಲದಲ್ಲಿ ಹೊಳೆ ಹಬ್ಬಲಿ" ಎಂಬ ಭಾವನಾತ್ಮಕ ಸಂಕಲ್ಪದೊಂದಿಗೆ ಮೆರವಣಿಗೆಯು ರೂಪಿಸಿಲಾಗಿತ್ತು. ಈ ಸಂದರ್ಭದಲ್ಲಿ ಹಲವರು ಗಣೇಶನಿಗೆ ಪೂಜೆ ಸಮರ್ಪಿಸಿ, ತಮ್ಮ ಭಕ್ತಿಭಾವನೆಯ ಅಭಿವ್ಯಕ್ತಿ ನೀಡಿದರು.ಎತ್ತುಗಳ ಪೋಷಣೆ, ಅಲಂಕಾರ ಹಾಗೂ ಸಂಚಲನ ವ್ಯವಸ್ಥೆಯಲ್ಲಿ ಪ್ರಮುಖ ಪಾತ್ರವಹಿಸಿದ್ದವು. ಎತ್ತುಗಳನ್ನು ಈ ಮೆರವಣಿಗೆಯ ಮುಖ್ಯ ಕೇಂದ್ರಬಿಂದುಗಾಗಿಯೇ ಪರಿಗಣಿಸಲಾಗಿದ್ದು, ಅವರು ನಮ್ಮ ಕೃಷಿ ಸಂಸ್ಕೃತಿಯ ಜೀವಾಳ ಎಂಬ ಸಂದೇಶವನ್ನೂ ನೀಡಲಾಯಿತು.

ಮೆರವಣಿಗೆಯಲ್ಲಿ ಭಾಗವಹಿಸಿದ ಹಲವಾರು ರೈತರು, ತಮ್ಮ ಶ್ರಮ, ನಿಷ್ಠೆ ಮತ್ತು ಧಾರ್ಮಿಕ ಭಾವನೆಗಳೊಂದಿಗೆ ಗಣೇಶನ ದರ್ಶನ ಪಡೆದು, ಭವಿಷ್ಯದಲ್ಲಿ ಉತ್ತಮ ಬೆಳವಣಿಗೆಗೆ ಹಾರೈಸಿದರು. "ಈ ವರ್ಷ ಉತ್ತಮ ಮಳೆ ಆಗಲಿ, ಬೆಳೆ ಬೇಗ ಬೆಳೆದು ನಾಳೆಗೆ ಆಶಾಕಿರಣ ತರಲಿ" ಎಂಬ ಆಶಯ.

ಈ ವರ್ಷದ ಗಣೇಶೋತ್ಸವ, ಕೇವಲ ಧಾರ್ಮಿಕ ಆಚರಣೆ ಮಾತ್ರವಲ್ಲದೆ, ರೈತರ ಜೀವಮಾನಕ್ಕೆ ಬೆಳಕು ನೀಡುವ ಹೋರಾಟ, ಭಕ್ತಿ ಹಾಗೂ ಭರವಸೆಯ ಸಂಕೇತವಾಗಿ ರೂಪುಗೊಂಡಿತು. ಈ ಮಾದರಿಯ ಮೆರವಣಿಗೆಗಳು ನಮ್ಮ ಗ್ರಾಮೀಣ ಜೀವರೀತಿಗೆ ಹೊಸ ಉತ್ಸಾಹ ನೀಡುತ್ತವೆ.. ಕೆಂಭಾವಿ ಪಟ್ಟಣದಲ್ಲಿ ಹಿಂದೂ ಪಂಚಮುಖಿ ಗಣಪತಿ ವಿಶೇಷವಾಗಿ ಕಾಣಿಸಿತು.!

# ಅತಿವೃಷ್ಟಿ: ವಿಶೇಷ ಪ್ಯಾಕೇಜ್‌ಗೆ ಒತ್ತಾಯ



ಬೀದರ.ಸೆ.02:ಅತಿವೃಷ್ಟಿಯಿಂದ ಬೆಳೆ, ಸಾರ್ವಜನಿಕ ಆಸ್ತಿ ಪಾಸ್ತಿ ಹಾನಿಗೀಡಾದ ಬೀದರ್ ತಾಲ್ಲೂಕಿಗೆ ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆಯ ಬೀದರ್ ತಾಲ್ಲೂಕು ಘಟಕ ಒತ್ತಾಯಿಸಿದೆ.

ತಾಲ್ಲೂಕು ಘಟಕದ ಪದಾಧಿಕಾರಿಗಳು ನಗರದಲ್ಲಿ ಮಂಗಳವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬರೆದ ಮನವಿ ಪತ್ರವನ್ನು ತಹಶೀಲ್ದಾರ್ ರವೀಂದ್ರ ದಾಮಾ ಅವರಿಗೆ ಸಲ್ಲಿಸಿದರು.

ಬೆಳೆ ನಷ್ಟಕ್ಕೆ ಹೆಕ್ಟೇರ್‌ಗೆ ರೂ. 50 ಸಾವಿರ ಪರಿಹಾರ, ಹಿಂಗಾರು ಹಂಗಾಮಿಗೆ ಉಚಿತ ಬೀಜ, ಮನೆ ಹಾನಿಗೆ ರೂ. 30 ಸಾವಿರ ಮುಂಗಡ ಪರಿಹಾರ, ವಿಧಾನಸಭಾ ಕ್ಷೇತ್ರ–ಕ್ಕೆ ರೂ. 50 ಕೋಟಿ ವಿಶೇಷ ಅನುದಾನ, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಕಳೆದ ವರ್ಷಕ್ಕಿಂತ ಶೇ 30 ರಷ್ಟು ಹೆಚ್ಚು ಅನುದಾನ ಒದಗಿಸಬೇಕು ಎಂದು ಆಗ್ರಹಿಸಿದರು.

ವೇದಿಕೆಯ ಬೀದರ್ ತಾಲ್ಲೂಕು ಘಟಕದ ಅಧ್ಯಕ್ಷ

ವೀರಶೆಟ್ಟಿ ಗೌಸಪುರೆ ನಿಯೋಗದ ಮುಂದಾಳತ್ವವಹಿಸಿದ್ದರು. ತಾಲ್ಲೂಕು ಘಟಕದ ಗೌರವಾಧ್ಯಕ್ಷ ಶಿವಪ್ಪ, ಉಪಾಧ್ಯಕ್ಷ ಉತ್ತಮ ಕೆಂಪೆ, ಪ್ರಮುಖರಾದ ನಾಗೇಶ, ಅಶೋಕ್, ಅಲ್‌ಬಾಷಕ್, ವಿಷ್ಣು ಕೆಂಪೆ ಮತ್ತಿತರರು ಇದ್ದರು.

# ಬೆಳೆಹಾನಿ ಸಂಸದರು,ಶಾಸಕರೊಂದಿಗೆ ಸಚಿವ ಪ್ರಿಯಾಂಕ್ ಚರ್ಚೆ



ಕಲಬುರಗಿ:ಸೆ.3:ಜಿಲ್ಲೆಯಲ್ಲಿ ಈ ಬಾರಿ ವಾಡಿಕೆಗಿಂತಲೂ ಹೆಚ್ಚು ಮಳೆಯಾಗಿದ್ದು, ಅತಿವೃಷ್ಟಿಯಿಂದ ಆಗಿರುವ ಬೆಳೆಹಾನಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳ ವರದಿಯನ್ನು ನಿರೀಕ್ಷಿಸಲಾಗುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ವಿಕಾಸಸೌಧದ ಸಚಿವರ ಕಚೇರಿಯಲ್ಲಿ ಇಂದು ನಡೆದ ಕಲಬುರಗಿ ಜಿಲ್ಲಾ ಸಂಸದರ ಹಾಗೂ ಶಾಸಕರ ಸಭೆಯಲ್ಲಿ ಅವರು ಮಾತನಾಡುತ್ತಿದ್ದರು.

ಕಲಬುರಗಿ ಜಿಲ್ಲೆಯಲ್ಲಿ ಸುರಿದ ಅಧಿಕ ಮಳೆಯಿಂದಾಗಿ ಆಗಿರುವ ಬೆಳೆಹಾನಿ ಹಾಗೂ ಈ ತಿಂಗಳ 17ರಂದು ನಡೆಯಲಿರುವ ಕಲ್ಯಾಣ ಕರ್ನಾಟಕ ಉತ್ಸವಕ್ಕೆ ಮುಖ್ಯಮಂತ್ರಿಗಳು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಕಾರ್ಯಕ್ರಮದ ರೂಪುರೇಷೆಗಳನ್ನು ಸಭೆಯಲ್ಲಿ ಸಚಿವರು ಶಾಸಕರೊಂದಿಗೆ ಚರ್ಚಿಸಿದರು.

ಕಲಬುರಗಿ ಜಿಲ್ಲೆಯಲ್ಲಿ ಈ ವರ್ಷ ಜನವರಿಯಿಂದ ಆಗಸ್ಟ್ ತಿಂಗಳ ಅಂತ್ಯದವರೆಗೆ 699 ಮಿ.ಮಿ ಮಳೆಯಾಗಿದ್ದು, ವಾಡಿಕೆಗಿಂತಲೂ ಶೇ.49ರಷ್ಟು ಹೆಚ್ಚು ಮಳೆಯಾಗಿದೆ, ಸಾಮಾನ್ಯವಾಗಿ ಈ ಅವಧಿಯಲ್ಲಿ 468 ಮಿ.ಮಿ ಮಳೆ ಆಗಬೇಕಿತ್ತು, ಜುಲೈ ಹಾಗೂ ಆಗಸ್ಟ್ ಮಾಹೆಯಲ್ಲಿ ಹೆಚ್ಚು ಮಳೆ ಆಗಿರುವುದರಿಂದ ಬೆಳೆಹಾನಿಯಾಗಿದ್ದು, ಜಿಲ್ಲಾಧಿಕಾರಿಗಳು ಜಂಟಿ ಸಮೀಕ್ಷೆಗೆ ಆದೇಶ ನೀಡಿದ್ದಾರೆ, ಒಂದೆರಡು ದಿನಗಳಲ್ಲಿ ವರದಿ ಕೈ ಸೇರಲಿದ್ದು, ನಂತರ ಪರಿಹಾರ ನೀಡುವ ಬಗ್ಗೆ ನಿರ್ಧರಿಸಲಾಗುವುದು ಎಂದು ಸಚಿವರು ಹೇಳಿದರು. ಬೆಳೆ ನಷ್ಟದ ಬಗ್ಗೆ ವರದಿ ಬಂದ ನಂತರ ಪರಿಹಾರ ಬಿಡುಗಡೆ ಮಾಡಲು ಮುಖ್ಯಮಂತ್ರಿಗಳ ಬಳಿ ಚರ್ಚಿಸಲಾಗುವುದೆಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಕಲ್ಯಾಣ ಕರ್ನಾಟಕ ಉತ್ಸವಕ್ಕೆ ಆಗಮಿಸಲಿರುವ ಮುಖ್ಯಮಂತ್ರಿಗಳು ವಿವಿಧ ಯೋಜನೆಗಳಿಗೆ ಉದ್ಘಾಟನೆ, ಶಂಕುಸ್ಥಾಪನೆ ನೆರವೇರಿಸಲಿದ್ದು ಸಭೆಯಲ್ಲಿ ಕೂಲಂಕುಷವಾಗಿ ಚರ್ಚಿಸಲಾಯಿತು.

ಸಭೆಯಲ್ಲಿ ಕಲಬುರಗಿ ಲೋಕಸಭಾ ಸದಸ್ಯರಾದ ರಾಧಾಕೃಷ್ಣ ದೊಡ್ಡಮನಿ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಜಯ್ ಸಿಂಗ್, ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್.ಪಾಟೀಲ್, ಶಾಸಕರಾದ ಅಲ್ಲಮಪ್ರಭು ಪಾಟೀಲ್, ಎಂ.ವೈ.ಪಾಟೀಲ್, ಶ್ರೀಮತಿ ಕನೀಜ್ ಫಾತಿಮಾ ಸಭೆಯಲ್ಲಿ ಪಾಲ್ಗೊಂಡಿದ್ದರು.

# ಗುರು ಅಗಾಧತೆಯ ಆಗರ – ಹಾರಕೂಡ ಶ್ರೀ



(ವರದಿ. ಡಿ. ಕೆ. ಪ್ರಹ್ಲಾದ ಜಿ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ;ಸೆ 2– ಗುರು ವ್ಯಕ್ತಿಯಾಗಿರದೇ ಸರ್ವಶಕ್ತಿಯ ಮೂರ್ತ ರೂಪವಾಗಿದ್ದು, ಅಗಾಧತೆಯ ಆಗರ ವಾಗಿರುತ್ತಾನೆ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು. ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಶ್ರಾವಣ ಮಾಸದ ಭಜನೆ ಮಹಾಮಂಗಲ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಭಕ್ತಿಯಿಂದ ಜಪಿಸಿ ನೆಮ್ಮದಿ ಪಡೆಯುವುದಕ್ಕಾಗಿ ಭಗವಂತನಲ್ಲಿ ಸಾಮೂಹಿಕವಾಗಿ ಪ್ರಾರ್ಥನೆ ಮಾಡುವ ವಿಧಾನವೇ ಭಜನೆ ಆಗಿದ್ದು, ಇದರಲ್ಲಿ ರಾಗ, ತಾಳ, ಲಯ, ಶ್ರುತಿ ಒಂದಾಗಿ ಏರ್ಪಡುತ್ತದೆ. ಗುರು ಪೀಠದಲ್ಲಿ ದೀರ್ಘಕಾಲದ ವರೆಗೆ ನಿತ್ಯವೂ ಮಾಡುವ ಭಜನೆಯಿಂದ ದೇಹ ಮನಸ್ಸುಗಳಲ್ಲಿ ಸಮತೋಲನ ಮೂಡಿ ಸಮಚಿತ್ತ ಸಿದ್ದಿಸುತ್ತದೆ. ಭಜಿಸುವ ವಿಧಾನಗಳು ಬೇರೆ ಬೇರೆಯಾದರೂ ಅಂತರಂಗದ ಪ್ರಾರ್ಥನೆ ಒಂದೇ ಆಗಿರುತ್ತದೆ.

ಅಧ್ಯಾತ್ಮ ಸಿರಿ ಸಂಪಾದನೆಗೆ ಪರ್ವಕಾಲವಾದ ಶ್ರಾವಣ ಮಾಸದಲ್ಲಿ ಭಕ್ತರು ಮಾಡಿರುವ ಭಜನೆಯಿಂದ ಹಾರಕೂಡದ ಚನ್ನಬಸವ ಶಿವಯೋಗಿಗಳು ಎಲ್ಲರಿಗೂ ನೆಮ್ಮದಿಯ ಬಾಳು, ನಿತ್ಯ ತೃಪ್ತಿಯ ಮೌಲಿಕ ಭಾವ ಕರುಣಿಸಲಿ, ಸರ್ವರಿಗೂ ಸನ್ಮಂಗಳವಾಗಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಎಪಿಎಂಸಿ ಮಾಜಿ ಅಧ್ಯಕ್ಷರಾದ ಸಿದ್ರಾಮಪ್ಪ ಗುದಗೆ, ಶಿವಶರಣಯ್ಯ ಕಂಬಳಿಮಠ, ಪೃಥ್ವಿರಾಜ ದೇಗಾಂವ, ರಾಮಲಿಂಗ ರೆಡ್ಡಿ, ಮಹದೇವ ದೇಗಾಂವ, ಚನ್ನಪ್ಪ ದಾಮ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಅರುಣ ಗುದಗೆ ಸ್ವಾಗತಿಸಿದರು.

ಶ್ರೀನಿವಾಸ ಶಿಂಧೆ ಪ್ರಾರ್ಥನಾ ಗೀತೆ ಹಾಡಿದರು. ವಿಜಯಕುಮಾರ ಕುಲಕರ್ಣಿ ಸಂಗೀತ ಸೇವೆ. ವಿಠಲ ಹೂಗಾರ ನಿರೂಪಿಸಿದರು. ಶಿವಪುತ್ರ ಶೀಲವಂತ ವಂದಿಸಿದರು. ಈ ವೇಳೆ ಹಾರಕೂಡದ ಶ್ರೀ ಚನ್ನಬಸವೇಶ್ವರ ಭಜನಾ ಸಂಘದಿಂದ ಭಜನೆ ಸೇವೆ ಸಲ್ಲಿಸಿದರು.



ಬಸವಕಲ್ಯಾಣ:– ತಾಲೂಕಿನ ಸುಕ್ಷೇತ್ರ ಹಾರಕೂಡ ಶ್ರೀ ಚನ್ನಬಸವೇಶ್ವರ ಸಂಸ್ಥಾನ ಹಿರೇಮಠದಲ್ಲಿ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರ ಪಾವನ ಸಾನಿಧ್ಯದಲ್ಲಿ ಶ್ರಾವಣ ಮಾಸದ ಭಜನಾ ಮಹಾಮಂಗಲ ಕಾರ್ಯಕ್ರಮ ಜರುಗಿತು. ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಎಪಿಎಂಸಿ ಮಾಜಿ ಅಧ್ಯಕ್ಷರಾದ ಸಿದ್ರಾಮಪ್ಪ ಗುದಗೆ, ಶಿವಶರಣಯ್ಯ ಕಂಬಳಿಮಠ, ಪೃಥ್ವಿರಾಜ ದೇಗಾಂವ, ರಾಮಲಿಂಗ ರೆಡ್ಡಿ, ಮಹದೇವ ದೇಗಾಂವ, ಚನ್ನಪ್ಪ ದಾಮ ಸೇರಿದಂತೆ ಶ್ರೀ ಚನ್ನಬಸವೇಶ್ವರ ಭಜನಾ ಸಂಘದ ಸದಸ್ಯರು ಮತ್ತು ಶ್ರೀಮಠದ ಭಕ್ತರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಗರ್ಭಿಣಿ ಮತ್ತು ಬಾಣಂತಿಯರು ಪೌಷ್ಠಿಕ ಆಹಾರ ಸೇವಿಸಿ – ಸಿಂಧು



ಮಲ್ಲಮ್ಮ ನುಡಿ ವಾರ್ತೆ

ವಿಜಯನಗರ: ಗರ್ಭಿಣಿ ಮತ್ತು ಬಾಣಂತಿಯರು ತಾವೂ ಸೇರಿದಂತೆ ತಮ್ಮ ಮಕ್ಕಳಿಗೆ ಪೌಷ್ಠಿಕ ಆಹಾರವನ್ನೇ ಸೇವಿಸಲು ಪ್ರೇರೇಪಿಸಬೇಕು. ಮಹಿಳೆಯರು ತಮ್ಮ ಮತ್ತು ಮಕ್ಕಳ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸಿಂಧು ಅವರು ಸಲಹೆ ನೀಡಿದರು.

ಹೊಸಪೇಟೆ ತಾಲೂಕಿನ ಗಾದಿಗನೂರು ಪಂಚಾಯಿತಿ ಹಾಗೂ ಅಂಗನವಾಡಿ ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಪೋಷಣ ಮಾಸಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆ ಗರ್ಭಾವಸ್ಥೆಯಿಂದ ಮಗುವಿನ ಆರೈಕೆ ಮಾಡುವುದರಿಂದ, ಪೌಷ್ಟಿಕಾಂಶಯುಕ್ತ ಆಹಾರ ಸೇವನೆಯಿಂದ ಅಪೌಷ್ಟಿಕತೆಯನ್ನು ತಡೆಯಬಹುದು ಎಂದು ಹೇಳಿದರು.

ಗ್ರಾಮಪಂಚಾಯಿತಿ ಅಧ್ಯಕ್ಷೆ ಎನ್ ಪಾರ್ವತಮ್ಮ ಮಾತನಾಡಿ, ಅಂಗನವಾಡಿ ಕೇಂದ್ರದಲ್ಲಿ ಸಿಗುವಂತ ಎಲ್ಲಾ ಸೌಲಭ್ಯಗಳನ್ನು ಮಕ್ಕಳ ತಾಯಂದಿರು ಸದುಪಯೋಗಪಡಿಸಿಕೊಳ್ಳಬೇಕು, ಹೆಚ್ಚಾಗಿ ಮನೆಯಲ್ಲಿ ಪೌಷ್ಠಿಕಾಂಶ ಇರುವಂತ ಆಹಾರ ಸೇವಿಸಬೇಕು ಎಂದರು,

ಮೇಲ್ವಿಚಾರಕಿಯಾದ ಎಂ ಲಕ್ಷ್ಮೀದೇವಿ, ಶಾಲಾಪೂರ್ವ ಶಿಕ್ಷಣದ ಸಂಯೋಜಕರಾದ ಕೊಟ್ರೇಶ್ ಅವರು ಮಾತನಾಡಿ, ಮಕ್ಕಳಿಗೆ ಆಹಾರ ಆರೋಗ್ಯ ಎಷ್ಟು ಮುಖ್ಯವೊ ಅಷ್ಟೇ ಶಿಕ್ಷಣವು ತುಂಬ ಮುಖ್ಯವಾದದ್ದು. ಮಕ್ಕಳುಳ್ಳ ತಾಯಂದಿರು ಸಹ ಮಕ್ಕಳ ಆಟದ ಜೊತೆಗೆ ಪಾಠವನ್ನು ಕಲಿಸುವಲ್ಲಿ, ಅಂಗನವಾಡಿ ಶಿಕ್ಷಕಿಯರಿಗೆ ಸಹಕಾರ ನೀಡಬೇಕು, ಮನೆಯಲ್ಲಿ ಮಕ್ಕಳ ಚಟುವಟಿಕೆಗೆ ಒತ್ತು ನೀಡಬೇಕೆಂದು ತಿಳಿಸಿದರು,

ಪೂಜಾ ಅವರು ಮತ್ತು ಆರೋಗ್ಯ ಶಿಕ್ಷಣಾಧಿಕಾರಿಯಾದ ಎಂಪಿ ದೊಡ್ಡಮನಿ ಅವರು ಮಾತನಾಡಿ, ಎಲ್ಲಾ ಮಕ್ಕಳ ತಾಯಂದಿರು ಮುಖ್ಯವಾಗಿ ತಮ್ಮ ಮಕ್ಕಳ ಆರೋಗ್ಯದ ಬಗ್ಗೆ ಗಮನ ಕೊಡಬೇಕು. ಎಲ್ಲಾ ಚುಚ್ಚು ಮದ್ದು ಲಸಿಕೆಯನ್ನು ಹಾಕಿಸಬೇಕು. ಮೂಢ ನಂಬಿಕೆಗಳನ್ನ ಇಟ್ಟುಕೊಳ್ಳದೇ ಗರ್ಭಿಣಿ ಬಾಣಂತಿಯರ ಆರೋಗ್ಯ ಕಾಳಜಿ ವಹಿಸಬೇಕು ಎಂದು ತಿಳಿಸಿದರು.

ಅಂಗನವಾಡಿ ಶಿಕ್ಷಕಿ ಸುರೇಖಾ ಸೇರಿದಂತೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲ ಅಂಗನವಾಡಿ ಶಿಕ್ಷಕಿಯರು ಮತ್ತು ಸಹಾಯಕಿಯರು, ಎ.ಎನ್.ಎಂ. ಆಶಾ ಕಾರ್ಯಕರ್ತೆ–ಯರು, ಮಕ್ಕಳ ತಾಯಂದಿರು, ಗರ್ಭಿಣಿಯರು ಈ ಒಂದು ಪೋಷಣ ಮಾಸಾಚರಣೆ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು,

## ರಾಯಚೂರು ವಾರ್ತಾ ಇಲಾಖೆಯಿಂದ
# ಬಾಪೂಜಿ ಪ್ರಬಂಧ ಸ್ಪರ್ಧೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಸೆಪ್ಟೆಂಬರ್ 02–: ಅಕ್ಟೋಬರ್ 2ರಂದು ನಡೆಯುವ ರಾಷ್ಟ್ರಪಿತ ಮಹಾತ್ಮಗಾಂಧೀಜಿಯವರ 156ನೇ ಜಯಂತಿಯ ಅಂಗವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ರಾಯಚೂರ ಕಚೇರಿಯಿಂದ ಬಾಪೂಜಿ ಪ್ರಬಂಧ ಸ್ಪರ್ಧೆ ಆಯೋಜಿಸಲಾಗಿದೆ.

ವಿದ್ಯಾರ್ಥಿ ಯುವಜನರಲ್ಲಿ ಗಾಂಧೀಜಿಯವರ ಬದುಕು, ಸ್ವಾತಂತ್ರ್ಯದ ಚಳವಳಿ, ಸರಳತೆ, ಅಹಿಂಸಾ ಮಾರ್ಗ, ಸಹಬಾಳ್ವೆ, ಅಸ್ಪೃಶ್ಯತೆ ನಿವಾರಣೆಗಾಗಿ ನಡೆಸಿದ ಪ್ರಯೋಗಗಳು ಮೊದಲಾದ ವಿಷಯಗಳ ಕುರಿತು ಪ್ರೌಢಶಾಲೆ, ಪದವಿ ಪೂರ್ವ ಶಿಕ್ಷಣ ಹಾಗೂ ಪದವಿ–ಸ್ನಾತಕೋತ್ತರ ಪದವಿ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ವಿಭಾಗಗಳಲ್ಲಿ ಜಿಲ್ಲಾ ಮತ್ತು ರಾಜ್ಯಮಟ್ಟದಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆ ಏರ್ಪಡಿಸಲಾಗಿದೆ.

ಪ್ರೌಢಶಾಲಾ ವಿದ್ಯಾರ್ಥಿಗಳು 1.ಸ್ವಚ್ಛತೆಯ ಪಾಠ–ಗಾಂಧೀಜಿಯವರ ಸಂದೇಶ, 2.ಮಕ್ಕಳ ಭವಿಷ್ಯ ನಿರ್ಮಾಣದಲ್ಲಿ ಗಾಂಧೀಜಿಯವರ ಪಾತ್ರ, 3.ಗಾಂಧೀಜಿಯವರ ಸ್ವಾತಂತ್ರ್ಯದ ಕನಸು– ನನ್ನ ಕಲ್ಪನೆ ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು 700 ರಿಂದ 800 ಪದಗಳು ಮೀರದಂತೆ ಪ್ರಬಂಧ ಬರೆಯಬೇಕು.

ಪಿಯುಸಿ ವಿದ್ಯಾರ್ಥಿಗಳು 1.ಅಸ್ಪೃಶ್ಯತೆ ನಿವಾರಣೆಯಲ್ಲಿ ಗಾಂಧೀಜಿಯವರ ಹೋರಾಟ, 2.ಇಂದಿನ ಸಮಾಜದಲ್ಲಿ ಸರ್ವೋದಯ ಮತ್ತು ಅಂತ್ಯೋದಯದ ಪ್ರಾಸಂಗಿಕತೆ ಮತ್ತು 3.ಬದಲಾವಣೆ ನನ್ನಿಂದಲೇ ಆರಂಭ–ಗಾಂಧೀಜಿಯವರ ಪಾಠ ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು 900 ರಿಂದ 100 ಪದಗಳು ಮೀರದಂತೆ ಪ್ರಬಂಧ ಬರೆಯಬೇಕು.

ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದ ವಿದ್ಯಾರ್ಥಿಗಳು 1.ಗಾಂಧೀಜಿಯವರು ಕಂಡ ನ್ಯಾಯಸಮ್ಮತ ರಾಜಕೀಯ ವ್ಯವಸ್ಥೆ, 2.ಗಾಂಧೀಜಿ ಮತ್ತು ಡಾ. ಬಿ.ಆರ್. ಅಂಬೇಡ್ಕರ್ – ತತ್ವಗಳ ಹೋಲಿಕೆ, 3.ಮೌಲ್ಯಾಧಾರಿತ ನಾಯಕತ್ವ ಹಾಗೂ ನೈತಿಕ ರಾಜಕಾರಣ – ಯುವಕರಿಗೆ ಗಾಂಧೀಜಿಯವರ ಪಾಠ ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು 1400 ರಿಂದ 1500 ಪದಗಳು ಮೀರದಂತೆ ಪ್ರಬಂಧ ಬರೆಯಬೇಕು.

ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು., ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿಯೇ ಶುದ್ಧ ಕೈಬರಹದಲ್ಲಿ ಪ್ರಬಂಧ ಬರೆಯಬೇಕು., ಆಕಾರವಾಗಿ ಬಳಸಿದ ಪರಾಮರ್ಶನ/ಆಧಾರ ಗ್ರಂಥಗಳ ವಿವರಗಳನ್ನು ಪ್ರಬಂಧದ ಕೊನೆಯಲ್ಲಿ ನಮೂದಿಸಬೇಕು. ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿ ಪರಾಮರ್ಶನ/ಆಧಾರಗ್ರಂಥಗಳು/ಮೊಬೈಲ್‌ಗಳ ಬಳಕೆಗೆ ಅವಕಾಶ ವಿರುವುದಿಲ್ಲ., ಪ್ರಬಂಧಕಾರರ ಹೆಸರು, ವಿಳಾಸ, ಮೊಬೈಲ್ ಸಂಖ್ಯೆ ನಮೂದಿಸಿರಬೇಕು., ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು. ಆಯ್ದ ಪ್ರಬಂಧಗಳ ಪ್ರಕಟಣೆಯ ಹಕ್ಕನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊಂದಿರುತ್ತದೆ.

ಪ್ರೌಢಶಾಲಾ, ಪದವಿ ಪೂರ್ವ, ಪದವಿ ಹಾಗೂ ಸ್ನಾತಕೋತ್ತರ ಪದವಿ ಮೂರು ಪ್ರತ್ಯೇಕ ವಿಭಾಗಗಳ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಅಕ್ಟೋಬರ್ 2ರ ಮಹಾತ್ಮಗಾಂಧೀಜಿ ಜಯಂತಿ ಸಮಾರಂಭದಲ್ಲಿ ಜಿಲ್ಲಾಮಟ್ಟದಲ್ಲಿ ತಲಾ ಮೂರು ವಿಭಾಗಗಲ್ಲಿ ಪ್ರಥಮ 3000 ರೂ, ದ್ವಿತೀಯ 2000 ರೂ. ಮತ್ತು ತೃತೀಯ 1000 ರೂ. ನೀಡಲಾಗುತ್ತದೆ. ರಾಜ್ಯಮಟ್ಟದಲ್ಲಿ ತಲಾ ಮೂರು ವಿಭಾಗಗಳಲ್ಲಿ ಪ್ರಥಮ 31000 ರೂ, ದ್ವಿತೀಯ 21,000 ರೂ. ಮತ್ತು ತೃತೀಯ 11,000 ರೂ. ನೀಡಲಾಗುತ್ತದೆ.

ಈ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ಆಯಾ ಪ್ರೌಢಶಾಲೆಗಳು, ಪಿಯು ಕಾಲೇಜುಗಳು ಮತ್ತು ಪದವಿ ಕಾಲೇಜು ಹಾಗೂ ಸ್ನಾತಕೋತ್ತರ ಕೇಂದ್ರಗಳಲ್ಲಿ ಸೆಪ್ಟೆಂಬರ್ 10ರೊಳಗೆ ನಡೆಸಿ ವಿಜೇತರ ಪಟ್ಟಿಯನ್ನು ಮತ್ತು ಎಲ್ಲ ಪ್ರಬಂಧಗಳನ್ನು ಜಿಲ್ಲಾ ವಾರ್ತಾಧಿಕಾರಿಗಳು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಪತ್ರಿಕಾ ಭವನ, ಜಿಲ್ಲಾ ರಂಗಮಂದಿರದ ಹಿಂದುಗಡೆ ಇಲ್ಲಿಗೆ ಸಲ್ಲಿಸಲು ಶಾಲಾ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ಕಾಲೇಜು ಶಿಕ್ಷಣ ಇಲಾಖೆ ಮತ್ತು ವಿಶ್ವವಿದ್ಯಾಲಯದ ಕುಲಪತಿಗಳಿಗೆ ಪತ್ರ ಬರೆದು ತಿಳಿಸಲಾಗಿದ್ದು, ಆಸಕ್ತ ವಿದ್ಯಾರ್ಥಿಗಳು ಈ ಪ್ರಬಂಧ ಸ್ಪರ್ಧೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಕೋರಿದೆ.

ಈ ಪ್ರಬಂಧ ಸ್ಪರ್ಧೆಯು ಸೆ.10ರೊಳಗೆ ವಸತಿ ನಿಲಯಗಳಲ್ಲಿ ಸಹ ನಡೆ–ಯುತ್ತಿದ್ದು, ಶಾಲಾ–ಕಾಲೇಜುಗಳಲ್ಲಿ ನಡೆಯುವ ಪ್ರಬಂಧ ಸ್ಪರ್ಧೆಯಲ್ಲಿ ಭಾಗಿಯಾಗದ ವಿದ್ಯಾರ್ಥಿಗಳು ಆಯಾ ವಸತಿ ನಿಲಯಗಳಲ್ಲಿ ನಡೆಯುವ ಸ್ಪರ್ಧೆಯಲ್ಲಿ ಪ್ರಬಂಧ ಬರೆದು, ಹೆಸರು, ಶಾಲಾ–ಕಾಲೇಜಿನ ಹೆಸರು, ತರಗತಿ, ವಿಳಾಸ ಬರೆದು ಆಯಾ ವಸತಿ ನಿಲಯಗಳ ಮೇಲ್ವಿಚಾರಕರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗೆ ವಾರ್ತಾ ಸಹಾಯಕರಾದ ಗವಿಸಿದ್ದಪ್ಪ ಹೊಸಮನಿ ಮೊ.9008462236 ಅಥವಾ ಪ್ರಥಮ ದರ್ಜೆ ಸಹಾಯಕರಾದ ಲಿಂಗರಾಜ್ ಮೊ:9743892080 ಇವರಿಗೆ ಸಂಪರ್ಕಿಸಬಹುದಾಗಿದೆ ಎಂದು ರಾಯಚೂರು ವಾರ್ತಾ ಇಲಾಖೆಯ ಕಚೇರಿ ಪ್ರಕಟಣೆ ತಿಳಿಸಿದೆ.

ಜಾಹೀರಾತಿಗಾಗಿ
ಇಂದೇ ಸಂಪರ್ಕಿಸಿ:
7795896664

# ಮೊಳಕೇರಾ:ಬಾಲಕನ ನೆರವಿಗೆ ಬರಲು ಭೀಮರೆಡ್ಡಿ ಸಿಂಧನಕೇರಾರವರು ಉಪ ತಹಸೀಲ್ದಾರರಿಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ತಾಲ್ಲೂಕಿನ ಮೊಳಕೇರಾ ಗ್ರಾಮದ 5 ವರ್ಷದ ಬಾಲಕ ಭದ್ರೋದ್ದಿನ್‌ಗೆ ಏಪ್ರಿಲ್ 28 ರಂದು ಸಾಯಂಕಾಲ 5 ಗಂಟೆ ಸುಮಾರಿಗೆ ಮನೆಯ ಎದುರುಗಡೆ ಆಟ ಆಡುತ್ತಿದ್ದ ಸಮಯದಲ್ಲಿ ಆಕಸ್ಮೀಕವಾಗಿ ಸ್ಪೋಟಗೊಂಡು ತನ್ನ ಒಂದು ಕಾಲಿನ ಪಾದ ಛಿದ್ರವಾಗಿ ಗಾಯಗೊಂಡು ಅಂಗವಿಕವಾಗಿರುತ್ತಾನೆ.

ಗಾಯಗೊಂಡ ಬಾಲಕನಿಗೆ ಜಿಲ್ಲಾಸ್ಪತ್ರೆಗೆ ಒಂದು ತಿಂಗಳ ಕಾಲ ಚಿಕಿತ್ಸೆ ನೀಡಲಾಗಿದೆ. ಚಿಕಿತ್ಸೆ ಸಮಯದಲ್ಲಿ ಬಾಲಕನ ಒಂದು ಕಾಲಿನ ಶಸ್ತ್ರ ಚಿಕಿತ್ಸೆಯಿಂದ ತೆಗೆಯಲಾಯಿತ್ತು. ಇದಾದ ನಂತರ ಸುಮಾರು 2 ಸಲ ಇದೇ ತರಹ ಆಕಸ್ಮೀಕವಾಗಿ ಸ್ಫೂಟದ ಶಬ್ದ ಕೇಳಿ ಬಂದಿತ್ತು. ಒಬ್ಬ ಐದು ವರ್ಷದ ಬಾಲಕ ತನ್ನ ಕಾಲು ಕಳೆದುಕೊಂಡು ಶಾಶ್ವತವಾಗಿ ಅಂಗವಿಕಲನಾಗಿದ್ದಾನೆ. ಆದರೆ ಇನ್ನೂ ವರೆಗೆ ಸರಕಾರದ ವತಿಯಿಂದ ಅಥವಾ ಆಡಳಿತ ವರ್ಗದಿಂದ ಯಾವುದೇ ಸಹಾಯಧನ ಹಾಗೂ ಸರಕಾರದ ಸೌಲತ್ತುಗಳನ್ನು ಈ ಬಾಲಕನಿಗೆ ದೊರಕುತ್ತಿಲ್ಲ. ಯಾವುದೇ ಜನಪ್ರತಿನಿಧಿಗಳು ಮತ್ತು ಸರಕಾರಿ ಅಧಿಕಾರಿಗಳು ಆ ಗಾಯಗೊಂಡಿರುವ ಬಾಲಕನ ಮನೆಗೆ ಭೇಟಿ ನೀಡಿ ವಿಚಾರಣೆ ಮಾಡಿರುವುದಿಲ್ಲ,ಆದ್ದರಿಂದ ಆಕಸ್ಮಿಕವಾಗಿ ಸ್ಫೂಟಗೊಂಡು ಬಾಲಕನ ಕಾಲು ಕಳೆದುಕೊಂಡಿರುತ್ತಾನೆ, ತಾಲ್ಲೂಕಾಡಳಿತ ಅಥವಾ ಜಿಲ್ಲಾಡಳಿತ ಬಾಲಕನ ನೆರವಿಗೆ ಬಂದು ಸವಲತ್ತುಗಳನ್ನು ಸರಕಾರದ ನಿಧಿಯಿಂದ ಸಹಾಯ ಮಾಡಬೇಕೆಂದು ಆಶ್ರಯ ದೀಪ ಟ್ರಸ್ಟ್ (ರಿ) ಅಧ್ಯಕ್ಷ ಭೀಮರೆಡ್ಡಿ ಸಿಂಧನಕೇರಾ, ಉಪಾಧ್ಯಕ್ಷ ಅರವಿಂದ ಜೋಗಿರೆ ಹಾಗೂ ಸದಸ್ಯರು ಪ್ರತಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಧರ್ಮಸ್ಥಳದ ವಿರುದ್ಧ ಬಿಜೆಪಿಯಿಂದಲೇ ಷಡ್ಯಂತ್ರ: ಡಿ.ಕೆ ಶಿವಕುಮಾರ್



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಈ ಹಿಂದೆ ಧರ್ಮಸ್ಥಳ ಸಮಾಧಿ ಪ್ರಕರಣದಲ್ಲಿ ಷಡ್ಯಂತ್ರ ನಡೆದಿದೆ ಎಂದು ಬಾಂಬ್ ಸಿಡಿಸಿದ್ದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಧರ್ಮಸ್ಥಳ ವಿರುದ್ಧದ "ಅಪಪ್ರಚಾರ"ದ ಹಿಂದೆ ಬಿಜೆಪಿ ಮತ್ತು ಅದರ ಸಹಚರರ ಕೈವಾಡವಿದೆ ಎಂದು ಸೋಮವಾರ ಆರೋಪಿಸಿದ್ದಾರೆ. ಅಲ್ಲದೆ ಕೇಸರಿ ಪಕ್ಷದೊಳಗಿನ ಆಂತರಿಕ ಬಿರುಕು ಇದಕ್ಕೆ ಕಾರಣ ಎಂದು ಹೇಳಿದ್ದಾರೆ.

ಧರ್ಮಸ್ಥಳದ ವಿರುದ್ಧ ಷಡ್ಯಂತ್ರ ನಡೆಯುತ್ತಿದೆ ಎಂಬ ಡಿಕೆ ಶಿವಕುಮಾರ್ ಅವರ ಹೇಳಿಕೆ ರಾಜ್ಯ ರಾಜಕಾರಣದಲ್ಲಿ ಭಾರೀ ಸಂಚಲನ ಸೃಷ್ಟಿಸಿತ್ತು ಮತ್ತು ಷಡ್ಯಂತ್ರ ಯಾರದ್ದು ಎಂದು ಹೇಳಬೇಕೆಂದು ಪ್ರತಿಪಕ್ಷ ನಾಯಕರು ಬಿಗಿಪಟ್ಟು ಹಿಡಿದಿದ್ದರು. ಅಲ್ಲದೇ ಈ ಬಗ್ಗೆ ಅಧಿವೇಶನದಲ್ಲೂ ಆಗ್ರಹಿಸಿದ್ದರು.

ಆದರೂ ಬಾಯ್ಬಿಡದ ಡಿಕೆ ಶಿವಕುಮಾರ್, ಇಂದು ಷಡ್ಯಂತ್ರದ ಗುಟ್ಟು ಬಿಚ್ಚಿಟ್ಟಿದ್ದು, ಧರ್ಮಸ್ಥಳ ಪ್ರಕಣದಲ್ಲಿ ಬಿಜೆಪಿ ಮೂಲ ಕಾರ್ಯಕರ್ತರೇ ಷಡ್ಯಂತ್ರ ಮಾಡಿರುವುದು ಎಂದು ಗಂಭೀರ ಆರೋಪ ಮಾಡಿದ್ದಾರೆ.

ಇಂದು ಕೆಪಿಸಿಸಿ ಕಚೇರಿಯಲ್ಲಿ ವರದಿಗಾರರ ಪ್ರಶ್ನೆಗೆ ಉತ್ತರಿಸಿದ ಡಿಸಿಎಂ, ಪ್ರಸ್ತುತ ಎಸ್‌ಐಟಿ ಮಾಡಿರುವ ತನಿಖೆ ಬಗ್ಗೆ ಅವರಿಗೆ(ಬಿಜೆಪಿ) ಸಮಾಧಾನ ಇಲ್ಲವೇ? ಬಿಜೆಪಿಯಲ್ಲಿ ಆಂತರಿಕವಾಗಿ ಎರಡು ಬಣಗಳು ಕಚ್ಚಾಡುತ್ತಿವೆ. ಇದೆಲ್ಲವೂ ಅವರದ್ದೇ ಷಡ್ಯಂತ್ರ. ಎಸ್‌ಐಟಿ ರಚನೆಯನ್ನು ಸ್ವಾಗತ ಮಾಡಿದವರೂ ಅವರೇ, ಈಗ ನಾಟಕ ಮಾಡುತ್ತಿರುವವರು ಅವರೇ ಎಂದರು.

ಎನ್‌ಐಎ ತನಿಖೆಗೆ ಬಿಜೆಪಿಯವರು ಒತ್ತಾಯಿಸಿರುವ ಬಗ್ಗೆ ಪ್ರತಿಕ್ರಿಯಿಸಿದ ಡಿಕೆಶಿ, ಧರ್ಮಸ್ಥಳಕ್ಕೆ ನ್ಯಾಯ ಸಿಗಬೇಕು ಎಂದು ಬಿಜೆಪಿಯವರು ಎಂದೂ ಹೇಳಿಲ್ಲ. ಬಿಜೆಪಿಯ ಮೂಲ ಕಾರ್ಯಕರ್ತರೇ ಧರ್ಮಸ್ಥಳದ ವಿರುದ್ಧ ಕೆಟ್ಟ ಹೆಸರು ತರಬೇಕು ಎಂದು ಮಾಡಿರುವ ಕೆಲಸವಿದು ಎಂದು ನೇರವಾಗಿ ಆರೋಪಿಸಿದ್ದಾರೆ.

# ತ್ರಯಂಬಿಕೆಯರನ್ನು ಸ್ಮರಿಸಿದ ಸರ್ಕಾರಿ ಪ್ರಥಮದರ್ಜೆ ಕಾಲೇಜು



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಈ ದೇಶದ ಸ್ವಾಭಿಮಾನ ಕಾಪಾಡಲು ತ್ರಿಕರಣಪೂರ್ವಕವಾಗಿ ಹೋರಾಡಿ ಮಹಿಳಾ ಸಾಮರ್ಥ್ಯದ ಸಾಫಲ್ಯತೆ ಮೆರೆದ ಭಾರತ ವರ್ಷದ ಮೂವರು ಮಹಾನ್ ಮಹಿಳಾ ಯೋಧರು, ಅದಮ್ಯ ಚೇತನಾಶೀಲರು, ಧೈರ್ಯ ಮತ್ತು ಪರಹಿತ ಚಿಂತನೆಯ ಚಿನ್ಮೂರ್ತಿ ತ್ರಯಂಬಿಕೆಯರಾದ ರಾಣಿ ಅಬ್ಬಕ್ಕ ಚೌಟ, ಕಿತ್ತೂರು ರಾಣಿ ಚೆನ್ನಮ್ಮ ಮತ್ತು ಝಾನ್ಸಿಯ ರಾಣಿ ಲಕ್ಷ್ಮೀಬಾಯಿ ಇವರನ್ನು ಇಲ್ಲಿನ ರಾಜಾಜಿನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸ್ಮರಿಸಿ ಗೌರವ ಸಮರ್ಪಣೆ ಮಾಡಲಾಯಿತು.

"ಭಾರತ ವರ್ಷಾದ ಮೂವರು ಮಹಾನ್ ಮಹಿಳಾ ಯೋಧರ ಅದಮ್ಯ ಚೈತನ್ಯ, ಧೈರ್ಯ ಮತ್ತು ಪರಹಿತಚಿಂತನೆಯ ಆಚರಣೆ" ಅಂಗವಾಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆಂತರಿಕ ಗುಣಮಟ್ಟ ಭರವಸೆ ಕೋಶ (ಐಕ್ಯೂಎಸಿ), ಮಹಿಳಾ ಸಬಲೀಕರಣ ಕೋಶ ಮತ್ತು ಲೈಂಗಿಕ ಕಿರುಕುಳ ತಡೆ ಸಮಿತಿ, ಅಖಿಲ ಭಾರತೀಯ ರಾಷ್ಟ್ರೀಯ ಶೈಕ್ಷಣಿಕ ಮಹಾಸಂಘ (ಎಬಿಆರ್‌ಎಸ್‌ಎಂ)ಸಹಯೋಗದೊಂದಿಗೆ ಏರ್ಪಡಿಸಲಾಗಿತ್ತು.

"ಭಾರತ ವರ್ಷಾದ ಮೂವರು ಮಹಾನ್ ಮಹಿಳಾ ಯೋಧರಾದ ರಾಣಿ ಅಬ್ಬಕ್ಕ ಚೌಟ, ಕಿತ್ತೂರು ರಾಣಿ ಚೆನ್ನಮ್ಮ ಮತ್ತು ಝಾನ್ಸಿಯ ರಾಣಿ ಲಕ್ಷ್ಮಿಬಾಯಿ ಅವರ ಅದಮ್ಯ ಚೈತನ್ಯ, ಧೈರ್ಯ ಮತ್ತು ಪರಹಿತಚಿಂತನೆಯ ಆಚರಣೆ" ಎಂಬ ವಿಶೇಷ ಕಾರ್ಯಕ್ರಮವನ್ನು ಜಂಟಿಯಾಗಿ ಆಯೋಜಿಸಿದ್ದು ತಮ್ಮ ಭೂಮಿ ಮತ್ತು ಜನರ ರಕ್ಷಣೆಗೆ ಗಮನಾರ್ಹ ಕೊಡುಗೆಗಳನ್ನು ನೀಡಿದ ಈ ಮೂವರು ದಂತಕಥೆಯ ಮಹಿಳಾ ಯೋಧರ ಶೌರ್ಯ, ಸ್ಥಿತಿಸ್ಥಾಪಕತ್ವ ಮತ್ತು ಪರಹಿತಚಿಂತನೆಯ ನಾಯಕತ್ವವನ್ನು ಗೌರವಿಸುವ ಮತ್ತು ನೆನಪಿಸಿಕೊಳ್ಳಲಾಯಿತು. ಈ ಕಾರ್ಯಕ್ರಮವು ವಿದ್ಯಾರ್ಥಿಗಳು, ವಿಶೇಷವಾಗಿ ಯುವತಿಯರು, ಈ ಮಹಾನ್ ಯೋಧರು ಸಾಕಾರಗೊಳಿಸಿದ ಧೈರ್ಯ, ನಿಸ್ವಾರ್ಥತೆ ಮತ್ತು ದೇಶಭಕ್ತಿಯ ಮೌಲ್ಯಗಳನ್ನು ಅನುಕರಿಸಲು ಪ್ರೇರೇಪಿಸುವ ವೇದಿಕೆಯಾಗಿ ಕಾರ್ಯನಿರ್ವಹಿಸಿತು.

ಎಬಿಆರ್‌ಎಸ್‌ಎಂನ ರಾಷ್ಟ್ರೀಯ ಜಂಟಿ ಸಂಘಟನಾ ಕಾರ್ಯದರ್ಶಿ ಗುಂತಾ ಲಕ್ಷ್ಮಣ್ ಅವರು ಮಾತನಾಡಿ, ಪೋರ್ಚುಗೀಸ್ ಆಕ್ರಮಣಕಾರರ ವಿರುದ್ಧ ಧೈರ್ಯದಿಂದ ಹೋರಾಡಿದ ಉಳ್ಳಾಲದ ನಿರ್ಭೀತ ರಾಣಿ ರಾಣಿ ಅಬ್ಬಕ್ಕ ಚೌಟ; ಬ್ರಿಟಿಷ್ ಈಸ್ಟ್ ಇಂಡಿಯಾ ಕಂಪನಿಯ ವಿರುದ್ಧ ಸಶಸ್ತ್ರ ದಂಗೆಯನ್ನು ಮುನ್ನಡೆಸಿದ ಕರ್ನಾಟಕದ ಯೋಧೆ ಕಿತ್ತೂರು ರಾಣಿ ಚೆನ್ನಮ್ಮ; ಮತ್ತು 1857 ರ ದಂಗೆಯಲ್ಲಿ ಅವರ ಧೈರ್ಯ ವಸಾಹತುಶಾಹಿ ಆಳ್ವಿಕೆಯ ವಿರುದ್ಧದ ಪ್ರತಿರೋಧದ ಶಾಶ್ವತ ಸಂಕೇತವಾಗಿ ಮುಂದುವರೆದಿರುವ ಝಾನ್ಸಿಯ ರಾಣಿ ಲಕ್ಷ್ಮಿಬಾಯಿ ಅವರ ಐತಿಹಾಸಿಕ ಪಾತ್ರಗಳನ್ನು ಭವಪರವಶರಾಗಿ ಬೋಧಿಸಿದರು.

ಕರ್ನಾಟಕರಾಜ್ಯದ ಎಬಿಆರ್‌ಎಸ್‌ಎಂನ ಸಂಚಾಲಕ ಡಾ. ಶಿವಪೂಜಿ ಕೋಟಿ ಅವರು ಮಾತನಾಡಿ, ಮಾತೃ ಭೂಮಿಗಾಗಿ ಈ ಮಹಾರಾಣಿಯರು ಮಾಡಿದ ತ್ಯಾಗ, ಬಲಿದಾನದದ ಬಗ್ಗೆ ಕಲಿಯಲು ಮತ್ತು ಇತಿಹಾಸದಲ್ಲಿ ಮಹಾನ್ ಮಹಿಳೆಯರ ಗುಣಗಳನ್ನು ಅಳವಡಿಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಸಲಹೆಗಳನ್ನು ನೀಡಿದರು.

ಇದೇವೇಳೆ ವೀರವನಿತೆಯರಿಗೆ ಮೀಸಲಾದ ವೀಡಿಯೊ ಪ್ರಸ್ತುತಿಯೂ ನಡೆಯಿತು. ಇದರಿಂದ ಯುವತಿಯರು ಮತ್ತು ವಿದ್ಯಾರ್ಥಿಗಳಲ್ಲಿ ಮತ್ತಷ್ಟು ಉತ್ಸಾಹ ಉತ್ಕೃಷ್ಟಗೊಳಿಸಿತು. ಅಧ್ಯಾಪಕರು, ವಿದ್ಯಾರ್ಥಿಗಳು ಮತ್ತು ಅತಿಥಿಗಳು ಸಕ್ರಿಯವಾಗಿ ಭಾಗವಹಿಸಿದ್ದು ಶೈಕ್ಷಣಿಕ ಮತ್ತು ಸ್ಫೂರ್ತಿದಾಯಕವಾಗಿಸಿದ್ದ ಈ ಕಾರ್ಯಕ್ರಮದಲ್ಲಿ ತಮ್ಮ ಸಮಾರೋಪ ಭಾಷಣ ಮಾಡಿದ ಕಾಲೇಜಿನ ಪ್ರಾಂಶುಪಾಲರಾದ ಮೇಜರ್ ಡಾ. ವನಜಾಕ್ಷಿ ಆರ್. ಹಳ್ಳಿಯವರ್ ಅವರು ಮಾತನಾಡಿದರು.

ಇಂದಿನ ಸಮಾಜದಲ್ಲಿ ಈ ಮಹಿಳಾ ಯೋಧರ ಪ್ರಸ್ತುತತೆಯನ್ನು ತಿಳಿಸಿದ ಪ್ರಾಂಶುಪಾಲರು ವಿದ್ಯಾರ್ಥಿಗಳು, ಯುವಕರು ಈ ವೀರವನಿತೆಯರ ಧೈರ್ಯ, ದೃಢನಿಶ್ಚಯ ಮತ್ತು ಪರಹಿತಚಿಂತನೆಯ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕೆಂದು ತಿಳಿಸಿದರು.

ಜಗದೀಶಯ್ಯ ಐಸಿ ಕಾಲೇಜಿನ ದೈಹಿಕ ಶಿಕ್ಷಣ ಮತ್ತು ಕ್ರೀಡಾ ನಿರ್ದೇಶಕರಾದ ಗೆಜೆಟೆಡ್ ವ್ಯವಸ್ಥಾಪಕರಾದ ಮೋಹನ್ ರಾಜ್, ಇಂಗ್ಲಿಷ್ ವಿಭಾಗದ ಮುಖ್ಯಸ್ಥರಾದ ಡಾ. ಬಸವರಾಜು. ಕನ್ನಡ ವಿಭಾಗದ ಮುಖ್ಯಸ್ಥರಾದ ಯಶೋಧಾ ಎಸ್ಪಿ ಮತ್ತು ಸಂಯೋಜಕರಾದ ಡಾ. ಭಾರತಿ ಎ ಅವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಧರ್ಮಸ್ಥಳ ಪ್ರಕರಣ: ಬಿಜೆಪಿ–ಜೆಡಿಎಸ್ ಯಾತ್ರೆಗೆ ಕಾಂಗ್ರೆಸ್‌ನಿಂದಲೂ ಕೌಂಟರ್ ಯಾತ್ರೆಗೆ ಪ್ಲ್ಯಾನ್..!

ಮಲ್ಲಮ್ಮ ನುಡಿ ವಾರ್ತೆ

ಮೈಸೂರು: ಧರ್ಮಾಧಿಕಾರಿ ವೀರೇಂದ್ರಹೆಗ್ಗಡೆ ಅವರಿಗೆ ಬೆಂಬಲ ವ್ಯಕ್ತಪಡಿಸಲು ಧರ್ಮಸ್ಥಳಕ್ಕೆ ಭೇಟಿ ನೀಡಿರುವ ಬಿಜೆಪಿ ಮತ್ತು ಜೆಡಿಎಸ್ ನಾಯಕರು, ಈ ಮೂಲಕ ರಾಜಕೀಯ ಲಾಭ ಪಡೆಯಲು ಯತ್ನಿಸುತ್ತಿದ್ದು, ಇದರ ಬೆನ್ನಲ್ಲೇ ತಿರುಗೇಟು ನೀಡಲು ಕಾಂಗ್ರೆಸ್ ಮುಂದಾಗಿದೆ. ಪ್ರಕರಣ ಸಂಬಂಧ **ಎಸ್‌ಐಟಿ** ರಚಿಸಿದ ಬಳಿಕ ಧಾರ್ಮಿಕ ಕ್ಷೇತ್ರಕ್ಕೆ ಭೇಟಿ ನೀಡದೆ ದೂರ ಉಳಿದಿದ್ದ ಆಡಳಿತ ಪಕ್ಷದ ನಾಯಕರು, ಇದೀಗ ತಮ್ಮ ಪಕ್ಷವು ಹಿಂದೂ ಧಾರ್ಮಿಕ ಕೇಂದ್ರಗಳನ್ನು ವಿರೋಧಿಸುವುದಿಲ್ಲ ಎಂಬ ಸಂದೇಶ ಸಾರಲು, ಬಿಜೆಪಿ ಹಾಗೂ ಜೆಡಿಎಸ್ ಯಾತ್ರೆಗೆ ಕೌಂಟರ್ ನೀಡಲು ತಾವೂ ಕೂಡ ಯಾತ್ರೆಗೆ ನಡೆಸಲು ಮುಂದಾಗಿದೆ. ಯೋಜನೆಯ ಭಾಗವಾಗಿ, ಶಾಸಕ ಕೆ. ಹರೀಶ್ ಗೌಡ ನೇತೃತ್ವದಲ್ಲಿ 2,000 ಕ್ಕೂ ಹೆಚ್ಚು ಕಾಂಗ್ರೆಸ್ ಮುಖಂಡರು ಮತ್ತು ಕಾರ್ಯಕರ್ತರು ಸೆಪ್ಟೆಂಬರ್ 3 ರಂದು 'ಶಾಂತಿ ಯಾತ್ರೆ' ಅಡಿಯಲ್ಲಿ ಧರ್ಮಸ್ಥಳಕ್ಕೆ ಭೇಟಿ ನೀಡಲಿದ್ದಾರೆಂದು ತಿಳಿದುಬಂದಿದೆ.

ನಗರದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ನಗರ ಕಾಂಗ್ರೆಸ್ ಸಮಿತಿ (ಚಾಮರಾಜ ವಿಭಾಗ) ಅಧ್ಯಕ್ಷ ರವಿ ಮಂಚೇಗೌಡನಕೊಪ್ಪಲು ಅವರು, ಧರ್ಮಸ್ಥಳಕ್ಕೆ ಬೆಂಬಲ ನೀಡಲು ಆಗಮಿಸುವವರಿಗೆ ಸುಮಾರು 30 ಬಸ್ಸುಗಳು ಮತ್ತು ಹಲವಾರು ಖಾಸಗಿ ವಾಹನಗಳ ಮೂಲಕ ಧರ್ಮಸ್ಥಳ ದೇವಸ್ಥಾನಕ್ಕೆ ಕರೆದೊಯ್ಯಲಾಗುವುದು ಎಂದು ಹೇಳಿದರು.

# ಗಣಪನ ವಿಸರ್ಜನೆ ಮೇರವಣಿಗೆಯಲ್ಲಿ ಹೆಲ್ಮೆಟ್ ಜಾಗೃತಿ



ಮಲ್ಲಮ್ಮ ನುಡಿ ವಾರ್ತೆ

ಔರಾದ(ಬಾ) :ಸೆ.3: ತಾಲ್ಲೂಕಿನ ಸುಂಧಾಳ ಗ್ರಾಮದಲ್ಲಿ ಶ್ರೀ ಕಾಳಿಕಾ ಮಾತಾ ಗಣೇಶ ಮಂಡಳಿಯ ವತಿಯಿಂದ ಪ್ರತಿಷ್ಠಾಪಿಸಿದ ಗಣೇಶನ ವಿಸರ್ಜನೆಯು ಸಂಭ್ರಮದಿಂದ ಜರುಗಿತು.

ಪೂಜೆ ಸಲ್ಲಿಸಿದ ಬಳಿಕ ಮಾತನಾಡಿದ ಚಿಂತಾಕಿ ವಲಯದ ಆರಕ್ಷಕಠಾಣೆಯ ಸಹಾಯಕ ಪೊಲೀಸ್ ಉಪನಿರೀಕ್ಷಕರಾದ ಕುಂದಾರವರು 18 ವರ್ಷ ತುಂಬದ ಅಪ್ರಾಪ್ತ ಮಕ್ಕಳಿಗೆ ಬೈಕ್ ನೀಡುವುದು ಅಪರಾಧವೆಂದು ಪಾಲಕರಿಗೆ ಕಾನೂನಿನ ಅರಿವನ್ನು ಮೂಡಿಸಿರುವುದರ ಜತೆಗೆ ಹೆಲ್ಮೆಟ್ ಧರಿಸದೇ ದ್ವಿಚಕ್ರವಾಹನ ಚಲಾಯಿಸಿ ತಮ್ಮ ಅಮೂಲ್ಯವಾದ ಪ್ರಾಣವನ್ನು ಕಳೆದುಕೊಳ್ಳುತ್ತಿರುವವರನ್ನು ನೆನೆದು ಕಳವಳ ವ್ಯಕ್ತಪಡಿಸುತ್ತಾ, ಕಡ್ಡಾಯವಾಗಿ ಬೈಕ್ ಸವಾರರು ಹೆಲ್ಮೆಟ್ ಧರಿಸುವಂತೆ ಸಲಹೆ ನೀಡಿದರು.

ಗ್ರಾಮದ ಪ್ರಮುಖ ಬೀದಿಗಳಲ್ಲಿ 'ಗಣಪತಿ ಬಪ್ಪಾ ಮೋರಯಾ' ಜೈಕಾರಗಳನ್ನು ಹಾಕುತ್ತಲೇ, ಹೆಲ್ಮೆಟ್ ಜಾಗೃತಿ ಅಭಿಯಾನದ ಘೋಷ ವಾಕ್ಯಗಳನ್ನು ಮೊಳಗಿಸಿ ಗ್ರಾಮಸ್ಥರಿಗೆ ಅರಿವು ಮೂಡಿಸಿರುವ ಮಂಡಳಿಯ ಪದಾಧಿಕಾರಿಗಳ ನಡೆಗೆ ಶಿಕ್ಷಕರಾದ ಬಾಲಾಜಿ ರಣವೀರಕರ್ ಪ್ರಶಂಸಿದರು.

ಗಣೇಶನಿಗೆ ಪೂಜೆ ಸಲ್ಲಿಸಿದ ಬಳಿಕ 'ಹೆಲ್ಮೆಟ್ ಧರಿಸಿ, ಜೀವ ಉಳಿಸಿ' ಎಂಬ ವಿಶಿಷ್ಟ, ವಿನೂತನ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಿ ಮಂಡಳಿಯ ಸದಸ್ಯರು ಎಲ್ಲರಿಂದಲೂ ಮೆಚ್ಚುಗೆಗೆ ಪಾತ್ರರಾಗಿ ಇಡೀ ಜಿಲ್ಲೆಗೆ ಮಾದರಿಯಾಗಿದ್ದಾರೆ. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಮಾರುತಿ ಸಿಂಗೋಡಿ, ಶ್ರೀಕಾಳಿಕಾಮಾತಾಗಣೇಶಮಂಡಳಿಯ ಅಧ್ಯಕ್ಷ ಅಂಬಾದಾಸ್ ಎಮ್ಮೆಕರ್ ಹಾಗೂ ಸದಸ್ಯರಾದ ಕಪೀಲ್ ದಾಸರವಾರ್, ಸತೀಶ್ ಎಮ್ಮೆಕರ್, ಗೋವಿಂದ ರಣವೀರಕರ್, ಸುನಿಲ್ ಟೋಪಾಜಿ ಸೇರಿದಂತೆ ಗ್ರಾಮದ ಸಹಸ್ರಾರು ಭಕ್ತಾದಿಗಳು ಮೇರವಣಿಗೆಯಲ್ಲಿ ಪಾಲ್ಗೊಂಡು ಇಷ್ಟಾರ್ಥ ಸಿದ್ಧಿಗಳೆಲ್ಲವೂ ನೆರವೇರಿಸುವಂತೆ ಗಣಪನಲ್ಲಿ ಪ್ರಾರ್ಥಿಸಿದರು. ಈ ಜನಜಾಗೃತಿ ಕಾರ್ಯಕ್ರಮವನ್ನು ಯಾವುದೇ ರೀತಿಯ ಅಹಿತಕರ ಘಟನೆಗಳು ಸಂಭವಿಸದೆ ಯಶಸ್ವಿಗೊಳಿಸಿದ್ದಕ್ಕಾಗಿ ಸರ್ವರಿಗೂ ಮಂಡಳಿಯವರು ಕೃತಜ್ಞತೆ ಸಲ್ಲಿಸಿದರು.

# ಶಾಲಾ ಶೌಚಾಲಯದಲ್ಲಿ 9ನೇ ತರಗತಿ ಬಾಲಕಿಗೆ ಹೆರಿಗೆ ತೀವ್ರ ಖಂಡನೀಯ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಸೆ.2: ಯಾದಗಿರಿ ಜಿಲ್ಲೆಯ ಶಹಾಪುರ ನಗರದ ವಸತಿ ಶಾಲೆಯೊಂದರಲ್ಲಿ 9ನೇ ತರಗತಿ ವಿದ್ಯಾರ್ಥಿನಿ ಹೆರಿಗೆಯಾದ ಘಟನೆ ಅಘಾತಕಾರಿಯಾಗಿದೆ ಎಂದು ಬೀದರ್‌ನ ಕೆಎಲ್‌ಇ ಸಂಸ್ಥೆಯ ನಿರ್ದೇಶಕಿ, ಹೋರಾಟಗಾರ್ತಿ ಕ್ರಾಂತಿ ಕಲವಾಡಿಕರ್ ಅವರು ತೀವ್ರವಾಗಿ ಖಂಡಿಸಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು, 'ವಸತಿ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿದ್ದ ಬಾಲಕಿಗೆ ಹೆರಿಗೆಯಾಗಿದೆ ಅಂದರೆ ಬಾಲಕಿ ಮೇಲೆ ಈ ಹಿಂದೆ ಅತ್ಯಾಚಾರ ನಡೆದಿರುವ ಬಗ್ಗೆ ಅನುಮಾನ ವ್ಯಕ್ತವಾಗುತ್ತಿದೆ. ಮಕ್ಕಳ ಮೇಲೆ ನಿಗಾವಹಿಸಬೇಕಾದ ವಸತಿ ಶಾಲೆಯ ಪ್ರಾಚಾರ್ಯರು, ಸಿಬ್ಬಂದಿ ಹಾಗೂ ವಾರ್ಡನ್ ಅವರ ನಿರ್ಲಕ್ಷ್ಯವೇ ಈ ಘಟನೆಗೆ ಕಾರಣವಾಗಿದೆ' ಎಂದು ದೂರಿದ್ದಾರೆ.

'ಮುಗ್ಧ ಮನಸ್ಸಿನ ಅಪ್ರಾಪ್ತೆಗೆ ಹೆರಿಗೆಯಾಗಿ ಗಂಡು ಮಗು ಜನಿಸಿದ್ದು, ಇಡೀ ಸಮಾಜವೇ ತಲೆತಗ್ಗಿಸುವಂತಾಗಿದೆ. ಇಂತಹ ಅಮಾನವಿಯ ಕೃತ್ಯ ನಾಗರಿಕ ಸಮಾಜಕ್ಕೆ ಕಳಂಕವನ್ನುಂಟು ಮಾಡುತ್ತದೆ. ಕೂಡಲೇ ಇದನ್ನು ಗಂಭೀರವಾಗಿ ಪರಿಗಣಿಸಿ ತಪ್ಪಿತಸ್ಥರ ಮೇಲೆ ಕಠಿಣ ಕಾನೂನು ಕ್ರಮ ಜರುಗಿಸಬೇಕು' ಎಂದರು.

'ವಸತಿ ಶಾಲೆಯ ಸಿಬ್ಬಂದಿಗೆ ಅಮಾನತು ಮಾಡಿದ್ದರೆ ಅಷ್ಟೇ ಸಾಲದು, ಅವರ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕು. ರಾಜ್ಯ ಮಹಿಳಾ ಆಯೋಗ ಮಧ್ಯೆ ಪ್ರವೇಶಿಸಿ ಆರೋಪಿಗಳ ಪತ್ತೆ ಹಚ್ಚಿ ಕಠಿಣ ಶಿಕ್ಷೆ ವಿಧಿಸಲು ಸಂಬಂಧಪಟ್ಟ ಇಲಾಖೆಗೆ ನಿರ್ದೇಶಿಸಬೇಕು' ಎಂದು ಅವರು ಆಗ್ರಹಿಸಿದ್ದಾರೆ.

# ಭಾಲ್ಕಿಯಲ್ಲಿ ಗೊಂಡ(ಕುರುಬ) ಸರಕಾರಿ ನೌಕರರ ಸಹಕಾರಿ ಬ್ಯಾಂಕನ 13ನೇ ವಾರ್ಷಿಕ ಮಹಾಸಭೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಸೆ.2: ಗೊಂಡ (ಕುರುಬ) ಸರಕಾರಿ ನೌಕರರ/ನಿವೃತ್ತ ನೌಕರರ ಪತ್ತಿನ ಸೌಹಾರ್ದ ಸಹಕಾರಿ ನಿಯಮಿತ, ಬ್ಯಾಂಕ್ ನ್ಯೂ ಸೋನಾರ ಮಾರ್ಕೆಟ, ಗಂಜ ಏರಿಯಾ, ಭಾಲ್ಕಿ ಇದರ 13ನೇ ವಾರ್ಷಿಕ ಸಾಮಾನ್ಯ ಮಹಾಸಭೆ ಸೆಪ್ಟೆಂಬರ್ 14, 2025 ರಂದು ಭಾನುವಾರ ಬೆಳಿಗ್ಗೆ 10:30 ಕ್ಕೆ ಭಾಲ್ಕಿ ನಗರದ ಉದಗೀರ ರಸ್ತೆಯ ಕನಕ ಭವನದಲ್ಲಿ ನಡೆಯಲಿದೆ.

ಸಭೆಯಲ್ಲಿ ಸಹಕಾರಿಯ ಬ್ಯಾಂಕಿನ ಸರ್ವ ಸದಸ್ಯರು ಸಮಯಕ್ಕೆ ಸರಿಯಾಗಿ ಭಾಗವಹಿಸುವಂತೆ ಬ್ಯಾಂಕನ ಅಧ್ಯಕ್ಷರಾದ ಶಿವಾಜಿ ದಂಡಿನ ಕೋರಲಾಗಿದೆ.

ಇದೆ ಸಂದರ್ಭದಲ್ಲಿ ಬ್ಯಾಂಕ್ ವತಿಯಿಂದ, ಎಸ್.ಎಸ್.ಎಲ್.ಸಿ ಹಾಗೂ ಪಿ.ಯು.ಸಿ. ಪರೀಕ್ಷೆಯಲ್ಲಿ ಶೇಕಡಾ 90% ಕ್ಕಿಂತ ಹೆಚ್ಚು ಪ್ರತೀಶತ ಅಂಕ ಗಳಿಸಿದ ಗೊಂಡ ಕುರುಬ ಸಮಾಜದ ಪ್ರತಿಭಾವಂತ ಮಕ್ಕಳಿಗೆ ಸನ್ಮಾನ ಕಾರ್ಯಕ್ರಮ ಏರ್ಪಡಿಸಲಾಗಿದೆ. ಪ್ರತಿಭಾವಂತ ವಿದ್ಯಾರ್ಥಿಗಳು ತಮ್ಮ ವಿವರಗಳನ್ನು ಸೆಪ್ಟೆಂಬರ್ 10, 2025 ರ ಒಳಗೆ ಬ್ಯಾಂಕ್‌ಗೆ ಖುದ್ದಾಗಿ ಸಲ್ಲಿಸಬೇಕೆಂದು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ 9480461235, 9740492329 ಸಂಬಂಧಪಟ್ಟ ದೂರವಾಣಿ ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಬ್ಯಾಂಕನ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಕ್ಷ ಬಲವರ್ಧನೆಗೆ ಪ್ರಾಮಾಣಿಕ ಪ್ರಯತ್ನ ಅತಿ ಅವಶ್ಯಕ: ಬಸವರಾಜ ಜಾಬಶೆಟ್ಟಿ




ಬೀದರ. ಸೆ. 02 : ಪಕ್ಷ ಬಲವರ್ಧನೆಗೆ ಪ್ರಾಮಾಣಿಕ ಪ್ರಯತ್ನ ಅತಿ ಅವಶ್ಯಕವಾಗಿದೆ. ಈ ಕುರಿತು ಪ್ರತಿಯೊಬ್ಬರು ಕಾರ್ಯಪ್ರವೃತ್ತರಾಗಬೇಕೆಂದು ಜಿಲ್ಲಾ ಕಾಂಗ್ರೆಸ್ ಸಮಿತಿಯ ಜಿಲ್ಲಾಧ್ಯಕ್ಷ ಬಸವರಾಜ ಜಾಬಶೆಟ್ಟಿ ಕರೆನೀಡಿದರು. ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರ ಜಿಲ್ಲಾ ಕಾಂಗ್ರೆಸ್ ಸಮಿತಿ (ಪದವೀಧರ ವಿಭಾಗ) ದ ವತಿಯಿಂದ ಹಮ್ಮಿಕೊಂಡ ಕಾರ್ಯಕರ್ತರ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಪಕ್ಷ ಎಂದರೆ ತಾಯಿ ಇದ್ದಂತೆ. ವ್ಯಕ್ತಿಗಿಂತ ಪಕ್ಷ ಮುಖ್ಯ ಎನ್ನುವ ಭಾವನೆ ಪ್ರತಿಯೊಬ್ಬರಲ್ಲೂ ಬರಬೇಕು. ಪಕ್ಷದಿಂದಲೇ ನಾವೆಲ್ಲರೂ ಎನ್ನುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು. ಜಿಲ್ಲಾ ಕಾಂಗ್ರೆಸ್ ಸಮಿತಿಯ ಪದವೀಧರ ವಿಭಾಗದ ಅಧ್ಯಕ್ಷರಾದ ಚಂದ್ರಕಾಂತ ಪಾಟೀಲ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಮುಂಬರುವ ದಿನಗಳಲ್ಲಿ ಗ್ರಾಮ ಮಟ್ಟದಲ್ಲಿ ಸಂಘಟನೆಯನ್ನು ಬೆಳೆಸುವದಾಗಿ ಹೇಳಿದರು. ಸಭೆಯಲ್ಲಿ ಕಾಂಗ್ರೆಸ್ ಪಕ್ಷದ ರಾಜ್ಯ ಉಪಾಧ್ಯಕ್ಷ ಜಾನ್ ವೇಸ್ಲಿ ಪಕ್ಷ ಬಲವರ್ಧನೆ ಕುರಿತು ತಮ್ಮ ಸಲಹೆ ಸೂಚನೆಗಳನ್ನು ನೀಡಿದರು. ಸಭೆಯಲ್ಲಿ ಪದವೀಧರ ವಿಭಾಗದ ಪ್ರಮುಖರಾದ ಶಶಿಧರ್ ಭೂಷಣ್, ಜಗದೀಶ್ ಕುಂಟೆಗಾವೆ, ಪ್ರೇಮನಾಥ್, ಈಶ್ವರ್, ಖಾಜಾ ಮೋಹಿನೋದ್ದಿನ್, ರಾಜಕುಮಾರ್ ಮುತ್ತಂಗಿಕರ್, ಉಮೇಶ್ ಸೋಪಾನ ಮತ್ತಿತರರು ಉಪಸ್ಥಿತರಿದ್ದರು.

# ಈರಮ್ಮಾ ಆಣದೂರೆ (ಕೋರಿ) ನಿಧನ



ಬೀದರ. ಸೆ. 02: ಹುಮನಾಬಾದ ತಾಲೂಕಿನ ಬೆನಚಿಂಚೋಳಿ ಗ್ರಾಮದ ಹಿರಿಯ ಜೀವಿ ಈರಮ್ಮಾ ಗಂಡ ಭೀಮರಾವ ಆಣದೂರೆ (ಕೋರಿ), ವಯಸ್ಸು 101 ಇವರು ಸೆ.2 ರಂದು ನಿಧನರಾಗಿದ್ದಾರೆ. ಮೃತರಿಗೆ 4 ಗಂಡು, ಮೂರು ಹೆಣ್ಣು ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗ ಅಗಲಿದ್ದಾರೆ.

ಇವರ ಅಂತ್ಯಕ್ರೀಯೆ ಸೆ. 3 ರಂದು ಬೆಳಗ್ಗೆ 11 ಗಂಟೆಗೆ ಹುಮನಾಬಾದ ತಾಲೂಕಿನ ಬೆನಚಿಂಚೋಳಿ ಗ್ರಾಮದ ಅವರ ತೋಟದಲ್ಲಿ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿದ್ದಾರೆ.

# ಸ್ತ್ರೀಗೆ ಸಮಾನತೆ ಕೊಟ್ಟವರು ಬಸವಾದಿ ಶರಣರು :ಡಾ. ವಿಜಯಶ್ರೀ ಬಸಟ್ಟಿ



ಮಲ್ಲಮ್ಮನುಡಿ ವಾರ್ತೆ ಬೀದರ. ಸೆ. 02 : ಸ್ತ್ರೀ ಮತ್ತು ಪುರುಷರು ಪ್ರಕೃತಿಯ ಪ್ರತಿರೂಪಗಳು. ಸೃಷ್ಟಿಯ ಸಮಷ್ಟಿಗೆ ಇವೆರಡೂ ಶಕ್ತಿಗಳು ಸಮಾನವಾಗಿರಬೇಕೆಂಬ ತತ್ವದಡಿಯಲ್ಲಿ, ಭಾರತದ ಮೂಲಪುರುಷ ಆದಿ ಶಿವನು ಸ್ತ್ರೀಯನ್ನು ತಲೆಯ ಮೇಲೆ ಮತ್ತು ತೊಡೆಯ ಮೇಲೆ ಸ್ಥಾನಕೊಟ್ಟ. ಅರ್ಧನಾರೀಶ್ವರನಾದ. ಸ್ತ್ರೀಯನ್ನು ಪಾದದಡಿಯಲ್ಲಿ ಕುಳ್ಳಿರಿಸಿ ಅವಮಾನಿಸಲಿಲ್ಲ. ಬಸವಾದಿ ಶರಣರು ಇನ್ನೂ ಮುಂದುವರೆದು ಮಹಿಳೆಗೆ ಮಹಾದೇವಿ ಎಂದು ಗೌರವಿಸಿ, ಪುರುಷನಿಗೆ ಇರುವ ಎಲ್ಲಾ ಅಧಿಕಾರಗಳನ್ನು ಸಮಾನವಾಗಿ ಹಂಚಿದರು ಎಂದು ತಿಳಿಸಿದರು.

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಬೀದರ್ ತಾಲೂಕು ವತಿಯಿಂದ ಶಿವನಗರದ ನಿಶ್ಚಿಂತ ನಿಲಯದಲ್ಲಿ ನಡೆದ ಪರಿಷತ್ತಿನ ಸಂಸ್ಥಾಪನ ದಿನ ಹಾಗೂ ಡಾ. ಶಿವರಾತ್ರಿರಾಜೇಂದ್ರಮಹಾಸ್ವಾಮಿಗಳ ಜನ್ಮದಿನದ ಅಂಗವಾಗಿ ಆಯೋಜಿಸಿದ ವಚನ ದಿನದ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಮಾತನಾಡಿದರು.

ಜನರಲ್ಲಿ ಮೌಢ್ಯ ತುಂಬಿ, ದುಡಿದು ತಿನ್ನುವ ವರ್ಗಕ್ಕೆ ಬಹುದೇವ ಉಪಾಸನೆ ಮೂಲಕ ಒಡೆದು, ಕುಳಿತು ತಿನ್ನಲು ಮಾಡಿದ ಹುನ್ನಾರಕ್ಕೆ ಕೊಡಲಿ ಪೆಟ್ಟು ಕೊಟ್ಟವರು ಬಸವೇಶ್ವರರು. ಎಲ್ಲರೂ ದುಡಿಯಲೇ ಬೇಕು. ಬಂದ ಆದಾಯದಲ್ಲಿ ದೀನ– ದಲಿತರಿಗೆ ದಾಸೋಹ ಮಾಡಬೇಕೆಂದು ಕಾಯಕವೇ ಕೈಲಾಸ ತತ್ವ ಕೊಟ್ಟರು. ಇದರಿಂದ ಮೋಸ, ವಂಚನೆ ಕಡಿಮೆಯಾಗುತ್ತದೆ. ಆದ್ದರಿಂದ ಕಾಲ್ಪನಿಕ ದೇವತೆಗಳಿಂದ ದೂರ ಇದ್ದು. ಎಲ್ಲರಿಗೂ ಪಿತನಾಗಿರುವ ಶಿವನನ್ನು ಇಷ್ಟಲಿಂಗ ರೂಪದಲ್ಲಿ ಪೂಜಿಸಿ ಎಂದು ಸುವರ್ಣಾ ಚಿಮಕೋಡೆ ತಿಳಿಸಿದರು.

ಕೋಣಮೇಳಕುಂದಾದ ಮಹಾಲಿಂಗಪ್ಪ ಚಕೋತೆ, ಸರೋಜಿನಿ ಗುಣವಂತರಾವ್ ಮಂಗಳೂರೆ ಮತ್ತು ಸಂಗಮ್ಮಾ ಶಿವಪ್ಪ ಪಾಟೀಲ್ ಅಮದಲ್ಪಾಡ್ ಇವರ ದತ್ತಿ ಉಪನ್ಯಾಸ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮಾತನಾಡಿದ ಪ್ರಭುಶೆಟ್ಟಿ ಮೂಲಗೆ, ಮೈಸೂರು ಶಿವರಾತ್ರಿರಾಜೇಂದ್ರಮಹಾಸ್ವಾಮಿಗಳ ಜೀವನ ಚರಿತ್ರೆ ಮೇಲೆ ಬೆಳಕು ಚೆಲ್ಲಿ, ನೂರು ವರ್ಷದ ಹಿಂದೆಯೇ ಸರ್ವಜಾತಿ ಜನಾಂಗದವರಿಗೆ ಅನ್ನ – ಅಕ್ಷರ ಕೊಟ್ಟರು. ಆ ಪರಂಪರೆ ಮುಂದು ವರಿಸಿಕೊಂಡು ಹೋಗುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಎಂದು ಕರೆ ಕೊಟ್ಟರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ. ಎಸ್. ಚಾಳಕಾಪೂರೆ, ವಚನ ದಿನದ ಅವಶ್ಯಕತೆ ಮತ್ತು ದತ್ತಿ ಉಪನ್ಯಾಸಕ್ಕಾಗಿ ಸಂಸ್ಥೆಯಲ್ಲಿ ಒಂದು ಲಕ್ಷ ಹಣವನ್ನು ಎಫ್. ಡಿ ಮಾಡಿದ್ದಲ್ಲಿ ವರ್ಷಕ್ಕೊಂದು ಉಪನ್ಯಾಸ ನಿಮ್ಮ ಹಿರಿಯರ ಹೆಸರಿನಲ್ಲಿ ನಡೆಸಿ ಮುಂದಿನ ಜನಾಂಗಕ್ಕೆ ಅನ್ನ–ಅಕ್ಷರ ಕಾರ್ಯ ಮುಂದುವರಿಸಲು ಮುಂದೆ ಬರಬೇಕೆಂದು ಕರೆಕೊಟ್ಟರು. ಸಂಗಪ್ಪ ಹಿಪ್ಪಳಗಾವೆ ಅಧ್ಯಕ್ಷತೆ ವಹಿಸಿದರೆ, ಪ್ರೊಫೆಸರ್ ಲೀಲಾವತಿ ಚಕೋತೆ ನೇತೃತ್ವ ವಹಿಸಿದ್ದರು.

ರೇವಣಪ್ಪ ಮೂಲಗೆ ಮತ್ತು ವಿರೂಪಾಕ್ಷದೇವರು ವಚನ ಗಾಯನ ಮಾಡಿದರು. ಇದೇ ಸಂದರ್ಭದಲ್ಲಿ ನಿವೃತ್ತ ಅಭಿಯಂತರರು ಶಶಿಧರ್ ಪಾಟೀಲ್, ಡಾ. ಸಂತೋಷ್ ಅಣ್ಣಪ್ಪನವರ್ ಮತ್ತು ಶರಣಯ್ಯಸ್ವಾಮಿ ಅವರನ್ನು ಸತ್ಕರಿಸಿ ಗೌರವಿಸಲಾಯಿತು. ಸೂಗಮ್ಮ ನಾವದಗೆರೆ ಪ್ರಾರ್ಥನೆಗೈದರು.

ಕಾರ್ಯಕ್ರಮದ ಮೊದಲಿಗೆ ಲಿಂಗಾರತಿ ನಾವದಗೆರೆ ಸ್ವಾಗತಿಸಿದರೆ, ಕೊನೆಯಲ್ಲಿ ಜಿಲ್ಲಾ ಕದಳಿ ವೇದಿಕೆ ಅಧ್ಯಕ್ಷೆ ಮಂಗಲಾ ಪಾಟೀಲ ವಂದಿಸಿದರು. ಧನರಾಜ ಅಣಕಲೆಯವರು ಅಚ್ಚುಕಟ್ಟಾಗಿ ನಿರೂಪಿಸಿದರು.

# ಪೈಗಂಬರ್ ಮುಹಮ್ಮದ್ ಸೀರತ್ ಅಭಿಯಾನ ಇಂದಿನಿಂದ: ನಿಝಾಮುದ್ದಿನ್




ಬೀದರ. ಸೆ. 02 : ನಗರದಲ್ಲಿ ಸೆ. 3 ರಿಂದ 14 ರ ವರೆಗೆ 'ನ್ಯಾಯದ ಹರಿಕಾರ ಪೈಗಂಬರ್ ಮುಹಮ್ಮದ್' ಸೀರತ್ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಜಮಾ ಅತೆ ಇಸ್ಲಾಮಿ ಹಿಂದ್ ರಾಜ್ಯ ಸಲಹಾ ಮಂಡಳಿ ಸದಸ್ಯ ಮುಹಮ್ಮದ್ ಆಸಿಫುದ್ದೀನ್ ಹಾಗೂ ಬೀದರ್ ಘಟಕದ ಹಿರಿಯ ಸದಸ್ಯ ಮುಹಮ್ಮದ್ ನಿಝಾಮುದ್ದೀನ್ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆಸಿದ ಜಂಟಿ ಸುದ್ದಿಗೋಷ್ಠಿಯಲ್ಲಿ ಅವರು ಈ ಮಾಹಿತಿ ನೀಡಿದರು.

ಪ್ರವಾದಿ ಮುಹಮ್ಮದ್(ಸ) ರು ಚಂದ್ರಮಾನ ಕ್ಯಾಲೆಂಡರ್ ಪ್ರಕಾರ, ರಬೀವುಲ್ ಅವ್ವಲ್ ತಿಂಗಳಲ್ಲಿ ಜನಿಸಿದರು. ಅವರ ಸಾರ್ವತ್ರಿಕ ಬೋಧನೆಗಳನ್ನು ಜನರಿಗೆ ತಿಳಿಸುವುದು, ಪ್ರವಾದಿ ಅವರ ಬಗೆಗಿನ ತಪ್ಪು ಕಲ್ಪನೆಗಳನ್ನು ಹೋಗಲಾಡಿಸುವುದು ಹಾಗೂ ವಿವಿಧ ಧರ್ಮೀಯರ ನಡುವಿನ ಸಂಬಂಧ ಗಟ್ಟಿಗೊಳಿಸುವುದು ಅಭಿಯಾನದ ಉದ್ದೇಶವಾಗಿದೆ ಎಂದು ತಿಳಿಸಿದರು. ರಾಜ್ಯದಾದ್ಯಂತ ನಡೆಯಲಿರುವ ಅಭಿಯಾನದ ನಿಮಿತ್ತ ನಗರದಲ್ಲೂ ಮುಸ್ಲಿಮ್ ಗಣ್ಯರ ಸಮಾಲೋಚನಾ ಸಭೆ, ಗಣ್ಯರು–ಧಾರ್ಮಿಕ ಮುಖಂಡರ ಭೇಟಿ, ವೈಯಕ್ತಿಕ ಭೇಟಿ, ಕ್ಯಾಂಪಸ್ ಉಪನ್ಯಾಸ, ಜುಮಾ ಪ್ರವಚನ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದು ಹೇಳಿದರು. ಸೆ. 13 ಮತ್ತು 14 ರಂದು ಜಾಮಾ ಮಸೀದಿಯಲ್ಲಿ ಜರುಗುವ ಸೀರತ್ ಕಾರ್ಯಕ್ರಮದಲ್ಲಿ ಜಮಾ ಅತೆ ಇಸ್ಲಾಮಿ ಹಿಂದ್‌ನ ತೆಲಂಗಾಣ ರಾಜ್ಯ ಘಟಕದ ಮಾಜಿ ಅಧ್ಯಕ್ಷ ಮೌಲಾನಾ ಹಾಮೇದ್ ಮುಹಮ್ಮದ್ ಖಾನ್ ಪಾಲ್ಗೊಳ್ಳುವರು ಎಂದು ತಿಳಿಸಿದರು.

14 ರಂದು ಸಂಜೆ 7ಕ್ಕೆ ಹೋಟೆಲ್ ಬೀದರ್ ಗೇಟ್ ವೇನಲ್ಲಿ ಗಣ್ಯರ ಸಂವಾದ ಕಾರ್ಯಕ್ರಮ ನಡೆಯಲಿದೆ. ಜಮಾ ಅತೆ ಇಸ್ಲಾಮಿ ಹಿಂದ್‌ನ ಕೇಂದ್ರ ಸಲಹಾ ಮಂಡಳಿಯ ಸದಸ್ಯ ಮೌಲಾನಾ ಮುಹಮ್ಮದ್ ಇಕ್ಬಾಲ್ ಮುಲ್ಲಾ ಭಾಗವಹಿಸುವರು ಎಂದು ಹೇಳಿದರು. ಸಮಾಜ ಸೇವೆಯ ಭಾಗವಾಗಿ ಜಿಲ್ಲಾ ಆಸ್ಪತ್ರೆಯಲ್ಲಿ ರೋಗಿಗಳನ್ನು ಭೇಟಿ ಮಾಡಿ ಸಾಂತ್ವನ ಹೇಳಿ, ಹಣ್ಣು ಹಂಪಲು ವಿತರಿಸಲಾಗುವುದು. ಜಿಲ್ಲಾ ಕಾರಾಗೃಹದಲ್ಲಿ ಕೈದಿಗಳಿಗೆ ಹಣ್ಣು ಹಂಪಲು ವಿತರಣೆ ಮಾಡಲಾಗುವುದು ಎಂದು ತಿಳಿಸಿದರು. ಜಮಾ ಅತೆ ಇಸ್ಲಾಮಿ ಹಿಂದ್‌ನ ಬೀದರ್ ಘಟಕದ ಉಪಾಧ್ಯಕ್ಷ ಮುಹಮ್ಮದ್ ಆರಿಫುದ್ದೀನ್ ಸುದ್ದಿಗೋಷ್ಠಿಯಲ್ಲಿ ಇದ್ದರು.

# ಯಾಂತ್ರಿಕ ಜಗತ್ತಿನಲ್ಲಿ ಮಕ್ಕಳಿಗೆ ಸಂಸ್ಕೃತಿ ಕಲಿಸಿ: ಡಾ ಎಸ್ ವ್ಹಿ ಪಾಟೀಲ



ಬೀದರ. ಸೆ. 02 : ಮಕ್ಕಳಲ್ಲಿ ಅನೇಕ ಪ್ರತಿಭೆಗಳಿವೆ. ಪ್ರೋತ್ಸಾಹಗಳಿರದ ಕಾರಣ ಮಕ್ಕಳು ಬೆಳೆಯಲು ಅನಾನೂಲ. ಇಂದಿನ ವ್ಯವಸ್ಥೆಯಲ್ಲಿ ಮಕ್ಕಳು ಎಲ್ಲ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರಲು ಇಂಥ ವೈವಿಧ್ಯಮಯ ಸಾಂಸ್ಕೃತಿಕ ಸ್ಪರ್ಧೆಗಳು ಅನಿವಾರ್ಯ ಎಂದು ತೋಟಗಾರಿಕೆ ಕಾಲೇಜ್ ನ ಡೀನರಾದ ಡಾ. ಎಸ್ ವ್ಹಿ ಪಾಟೀಲ ಅಭಿಪ್ರಾಯ ಪಟ್ಟರು. ವಚನ ಚಾರಿಟೇಬಲ್ ಸೊಸೈಟಿ ವತಿಯಿಂದ ಶ್ರಾವಣ ಮಾಸ ನಿಮಿತ್ತ ಹಮ್ಮಿಕೊಂಡ ಕಂಠ ಪಾಠ, ನಿಭಂಧ, ಭಾಷಣ ಹಾಗೂ ತಪ್ಪುರಹಿತ ಕನ್ನಡ ಶುದ್ಧ ಬರಹ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಸಸಿಗೆ ನೀರೆರೆದು ಉದ್ಘಾಟಿಸಿ ಡಾ ಎಸ್ ವ್ಹಿ ಪಾಟೀಲ ಮುಂದುವರೆದು ಮಾತನಾಡುತ್ತ ವಚನಗಳು ಬದುಕಿನ ದಾರಿದೀಪ. ಹನ್ನೆರಡನೆ ಶತಮಾನದ ಬಸವಾದಿ ಶರಣರ ಕಾಯಕ ಇಡೀ ಜಗತ್ತಿಗೆ ಮಾದರಿಯಾಗಿದೆ. ಕಾಯಕವೇ ಕೈಲಾಸವಾದರೆ ಇಂದಿನ ಅನೇಕ ಸಮಸ್ಯೆಗಳು ಹೇಳ ಹೆಸರಿಲ್ಲದೆ ಮಾಯವಾಗುತ್ತವೆ. ಪ್ರಾರಂಭದಲ್ಲಿ ಮಕ್ಕಳಿಗೆ ಕನಿಷ್ಠ ಐದಾದರೂ ವಚನ ಬರಲೇ ಬೇಕು, ಮಗು ದೊಡ್ಡದಾದ ಮೇಲೆ ಅಥವಾ ತಿಳುವಳಿಕೆ ಬಂದಮೇಲೆ ಅದು ಅರಿತುಕೊಳ್ಳುತ್ತದೆ. ಇಂದು ವಚನ ಚಾರಿಟೇಬಲ್ ಸೊಸೈಟಿ ಅವರು ಪ್ರಾಥಮಿಕ, ಪ್ರೌಢ, ಪಿಯುಸಿ, ಪದವಿ ಮಕ್ಕಳಿಗೆ ಅನುಗುಣವಾಗಿ ಸ್ಪರ್ಧೆ ಏರ್ಪಡಿಸಿ ಅವರಿಗೆಲ್ಲರಿಗೆ ಪ್ರಥಮ ಬಹುಮಾನ ರೂ.3000/, ದ್ವಿತೀಯ ಬಹುಮಾನ ರೂ.2000/ ತೃತೀಯ ಬಹುಮಾನ ರೂ.1000/ ಕೊಡುತ್ತಿರುವುದು ನಿಜವಾಗಲೂ ಶ್ಲಾಘನೀಯ ವಿಷಯವಾಗಿದೆ.

ವಚನ ಚಾರಿಟೇಬಲ್ ಸಾಮಾಜಿಕ ಕೆಲಸ ಎಲ್ಲರೂ ಮೆಚ್ಚಲೇಬೇಕೆಂದು ಹೇಳಿದರು. ಮುಖ್ಯ ಅತಿಥಿಗಳಾದ ಹಲಬರ್ಗಾ ಕೆ.ಪಿ.ಎಸ್. ಶಾಲೆಯ ಶಿಕ್ಷಕಿಯರು ಹಾಗೂ ಕವಿಗಳಾದ ಧನಲಕ್ಷ್ಮಿ ಪಾಟೀಲ ಮಾತನಾಡಿ ಮಕ್ಕಳಲ್ಲಿಯ ಸುಪ್ತ ಭಾವನೆ ಇಂಥ ಸ್ಪರ್ಧೆಗಳಿಂದ ಹೊರ ಹೊಮ್ಮಲು ಒಂದು ಪ್ರೇರಣೆ ನೀಡಬಲ್ಲದು. ಇಂದಿನ ಮಕ್ಕಳು ಮೊಬೈಲ್ ದಿಂದಾಗಿ ನೋಡಬಾರದನ್ನು ಗ್ರಹಿಸಿ ಸಂಸ್ಕೃತಿ ಹಾಳಾಗಿ ಅನೇಕ ಮಕ್ಕಳ ಜೀವನ ಜರ್ಝರಿತಗೊಂಡಿರುವುದು ನಾವು ಬಲ್ಲೆವು. ಇಂದು ಶಿಕ್ಷಣದ ಜೊತೆಗೆ ಮಾನವೀಯ ಮೌಲ್ಯ ಪ್ರತಿಪಾದಿಸುವ ವಚನಗಳು ಪಠ್ಯಕ್ರಮದಲ್ಲಿ ಅಳವಡಿಸಿದರೆ ತುಂಬಾ ಒಳ್ಳೆಯದು. ಒಂಬತ್ತು ನೂರು ವರ್ಷಗಳ ಹಿಂದೆ ಅಕ್ಕಮಹಾದೇವಿ ಉಡುತಡಿಯಿಂದ ಬಸವ ಕಲ್ಯಾಣಕ್ಕೆ ಎಂಥ ಆತ್ಮ ವಿಶ್ವಾಸ ಇಟ್ಟು ಕೊಂಡು ಬಂದಿದ್ದು ಅರ್ಥೈಸಿಕೊಂಡರೆ ಮನ ಮೈ ರೋಮಾಂಚನಗೊಳ್ಳುತ್ತದೆಂದು ನುಡಿದರು. ಇಂಥ ಕಾರ್ಯಕ್ರಮದಿಂದ ಮಕ್ಕಳಲ್ಲಿ ಓದುವ ಹವ್ಯಾಸ ಜೊತೆಗೆ ಸ್ಪರ್ಧಾತ್ಮಕ ಮನೋಭಾವ ಬೇರೂರಲು ಸಾಧ್ಯ ಎಂದು ನುಡಿದರು. ಅನುಭವ ಎಜ್ಯುಕೇಷನ್ ಆಯಿಂಡ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷರಾದ ಲಿಂಗಾರತಿ ನಾವದಗೇರೆ ಪ್ರಾಸ್ತಾವಿಕ ಮಾತನಾಡಿ... ದಿನೇ ದಿನೇ ನಮ್ಮ ಸಂಸ್ಕೃತಿ ಹಾಳಾಗುತ್ತಿದೆ. ಪಾಲಕರಾದ ನಾವೆ ಕಾರಣರು. ನಾವೆಲ್ಲರೂ ಹೀಗೆ ಕುಳಿತರೆ ಇಡೀ ಸುಂದರ ಸಮಾಜ ಹಾಳಾಗಿ ಮಕ್ಕಳು ಅಧೋಗತಿ ತಲುಪುವುದನ್ನು ತಪ್ಪಿಸಲು ನಾವಿಂದು ಇಂಥ ವೈಚಾರಿಕ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ ಎಂದು ನುಡಿದರು. ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷರಾದ ಡಾ ಸುರೇಶಪಾಟೀಲ ಅಧ್ಯಕ್ಷತೆ ವಹಿಸಿ.. ಸಮಾನ ಮನಸ್ಕರೂ ಸೇರಿ ಕೊಂಡು ಪ್ರತಿ ತಿಂಗಳು ಅನುದಾನ ಕ್ರೋಢಿಕರಣ ಮಾಡಿಕೊಂಡು ತಕ್ಕ ಮಟ್ಟಿಗೆ ಸಮಾಜ ಕಟ್ಟುವ ಕೆಲಸದಲ್ಲಿ ಕಳೆದ ಐದು ವರ್ಷಗಳಿಂದ ನಾವೆಲ್ಲರೂ ದಾಪುಗಾಲು ಹಾಕುತ್ತಿದ್ದೇವೆ, ಸಮಾಜದ ಪ್ರತಿಯೊಬ್ಬರು ಧನಾತ್ಮಕವಾಗಿ ಸ್ಪಂದನೆ ನೀಡಿ ಪ್ರೋತ್ಸಾಹ ನೀಡುತ್ತಿರುವುದರಿಂದಲೇ ನಮ್ಮ ಸಂಸ್ಥೆ ಇಂದು ಬೆಳಕಿಗೆ ಬಂದಿದೆ, ತಮ್ಮೆಲ್ಲರ ಸಹಕಾರ ಮರೆಯಲಾಗದು ಎಂದು ನುಡಿದರು. ಸನ್ಮಾನಿತರ ಪರವಾಗಿ ಎಂಟನೇ ವರ್ಷದ ಮಗು ಅಕ್ಕಮಹಾದೇವಿ ಬಗ್ಗೆ ಮೂರು ನಿಮಿಷದಲ್ಲಿ ಅತ್ಯುತ್ತಮ ಮಾತನಾಡಿದರು ಜೊತೆಗೆ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಬಗ್ಗೆ ಸೃಷ್ಟಿ ಸೋಮನಾಥ ಜೊನ್ನಿಕೇರಿ ಮಾತನಾಡಿ ಎಲ್ಲರಿಗೆ ಅಚ್ಚರಿಗೊಳಿಸಿದರು. ಮೊದಲಿಗೆ ವೈಜಿನಾಥ ಸಜ್ಜನಶೆಟ್ಟಿ ವಚನಗಳು ಹಾಡಿದರು. ನಿರ್ದೇಶಕರಾದ ಡಾ ಸಿ ಆರ್ ಕೊಂಡ ಸ್ವಾಗತಿಸಿದರೆ, ಸಂಗಾರೆಡ್ಡಿ ಕೊತ್ತ ನಿರೂಪಣೆ ಮಾಡಿದರೆ ದಾನಾ ಸಂತೋಷ ವಂದಿಸಿದರು.

# ರೈತರ ಬೆಳೆ ಹಾನಿಗೆ ಕೂಡಲೆ ಪರಿಹಾರಕ್ಕೆ ಆಗ್ರಹ




ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಸೆ.2: ಒಂದು ವಾರದಿಂದ ನಿರಂತರ ಮಳೆಯಿಂದ ರೈತ ಬೆಳೆ ಸಂಪೂರ್ಣ ಹಾನಿಯಾಗಿ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಕರವೇ ತಾಲೂಕ ಘಟಕದಿಂದ ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರಿಗೆ ಬರೆದ ಮನವಿ ಪತ್ರ ಗ್ರೇಡ2 ತಹಸೀಲ್ದಾರ ರಮೇಶ ಪೆದ್ದೆ ಅವರಿಗೆ ಸಲ್ಲಿಸಿದರು.

ಬಳಿಕ ಮಾತನಾಡಿದ, ಕರವೇ ತಾಲೂಕ ಘಟಕದ ಅಧ್ಯಕ್ಷ ಮಂಜುನಾಥ ಸ್ವಾಮಿ, ತಾಲೂಕಿನಲ್ಲಿ ಅತಿವೃಷ್ಟಿಯಿಂದ ರೈತರು ತಮ್ಮ ಕೈಗೆ ಬಂದ ತುತ್ತು ಬಾಯಿಗೆ ಬರದಂತೆ ಮಾಡಿದ, ಹಿಂತಹ ಸಮಯದಲ್ಲಿ ಸರಕಾರ ರೈತರಿಗೆ ಪರಿಹಾರ ನೀಡಿ ಅವರ ಸಹಾಯಕ್ಕೆ ನಿಲ್ಲಬೇಕು ಎಂದು ಆಗ್ರಹಿಸಿದರು. ಪ್ರತಿ ಹೆಕ್ಟೇರಿಗೆ ಸರ್ಕಾರ ಕನಿಷ್ಠ ನೇರವಾಗಿ ರೈತರಿಗೆ 50,000 ರೂಪಾಯಿ ಪರಿಹಾರ ನೀಡಬೇಕು.

ತಾಲೂಕಿನ ಖಾಸಗಿ ಶಾಲಾ ಕಾಲೇಜುಗಳಲ್ಲಿ ರೈತರ ಮಕ್ಕಳ ಈ ವರ್ಷದ ಶುಲ್ಕ 70% ರಿಯಾಯಿತಿ ನೀಡಲು ಜಿಲ್ಲಾ ಆಡಳಿತ ಕ್ರಮ ಕೈಗೊಳ್ಳಬೇಕು.

ಮಳೆಯಿಂದಾಗಿ ತಾಲೂಕಿನಲ್ಲಿ ರಸ್ತೆಗಳು ಸಂಪೂರ್ಣ ಕೆಟ್ಟುಹೋಗಿವೆ ಆದ್ದರಿಂದ ರಾಜ್ಯ ಸರ್ಕಾರ ಕೂಡಲೇ ವಿಧಾನಸಭಾ ಕ್ಷೇತ್ರಕ್ಕೆ 50 ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಬೇಕು.

2025–26 ನೇ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ವತಿಯಿಂದ ನಮ್ಮ ವಿಧಾನಸಭಾ ಕ್ಷೇತ್ರಕ್ಕೆ ಕಳೆದ ವರ್ಷಕ್ಕಿಂತ ಈ ವರ್ಷ 30% ಹೆಚ್ಚಿನ ಅನುದಾನ ನೀಡಬೇಕು. ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಗ್ರಾಮ ಮಟ್ಟದ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿ ವಾಸ್ತವ್ಯ ಮಾಡುವ ಹಾಗೆ ಜಿಲ್ಲಾ ಆಡಳಿತ ಕಠಿಣ ಕ್ರಮ ಕೈಗೊಳ್ಳಬೇಕು. ಜಾನುವಾರು ಕಳೆದುಕೊಂಡ ರೈತರಿಗೆ ಸರ್ಕಾರ ಕೂಡಲೇ ಪ್ರತಿ ಜಾನುವಾರುಗಳಿಗೆ 50,000 ರೂಪಾಯಿ ಪರಿಹಾರ ನೀಡಬೇಕು. ಮಳೆಯಿಂದಾಗಿ ಮನೆ ಕಳೆದುಕೊಂಡ ಜನರಿಗೆ ವಸತಿ ಇಲಾಖೆಯಿಂದ ಕೂಡಲೇ ಮನೆ ಮಂಜೂರು ಮಾಡಿ ಮಾರ್ಣ ಮಾಡಿಕೊಳ್ಳಲು ಮುಂಗಡವಾಗಿ 30,000 ರೂಪಾಯಿ ಬಿಡುಗಡೆ ಮಾಡಬೇಕು ಎಂಬ ಪ್ರಮುಖ ಬೇಡಿಕೆಗಳ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಆಯುಬ ಖುರೇಷಿ, ಪ್ರಶಾಂತ ಖಾನಾಪುರೆ, ಸಂಗಮನಾಥ ಬಿರಾದಾರ, ಸುನಿಲ ಮೆಹತ್ರೆ, ಓಂಕಾರ ಡೋಂಗ್ರೆ, ಆಕಾಶ ದೇವರ್ಸೆ, ಸಾಯಿನಾಥ ಕಾಂಬಳೆ, ಸುಭಾಷ ಗಾಯಕವಾಡ ಸೇರಿದಂತೆ ಇನ್ನಿತರರು ಇದ್ದರು.

## ಅಲೆಮಾರಿಗಳಿಗೆ 1% ಮೀಸಲಾತಿ– ಬಸವರಾಜ ರಾಯರೆಡ್ಡಿ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ರಾಜ್ಯದಲ್ಲಿ ಒಳ ಮೀಸಲಾತಿ ವಿಷಯವಾಗಿ ಅಲೆಮಾರಿ ದಲಿತರಿಗೆ ಅನ್ಯಾಯವಾಗುತ್ತಿದೆ ಅವರಿಗೆ ಮೀಸಲಾತಿಯಲ್ಲಿ 1% ನೀಡಲಾಗುವುದು ಎಂದು ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಹೇಳಿದರು.

ಕುಕನೂರು ಪಟ್ಟಣದ ಕುಂತಾಳ ನಗರದಲ್ಲಿ ಸುಡುಗಾಡು ಸಿದ್ಧರ ನೂತನ ಸಮುದಾಯ ಭವನದ ಅಡಿಗಲ್ಲು ಸಮಾರಂಭ ವೇದಿಕೆ ಕಾರ್ಯಕ್ರಮ ನಂತರ ತೆರಳುತ್ತಿರುವ ವೇಳೆ ಅಲೆಮಾರಿಗಳು ಮೀಸಲಾತಿಯಲ್ಲಿ ತಮಗೆ ಅನ್ಯಾಯವಾಗುತ್ತಿದೆ ಎಂದು ಹೇಳುತ್ತಿದ್ದಂತೆ ತಮಗೆ 1% ಮೀಸಲಾತಿ ನೀಡಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ತಮಗೆ ಅನ್ಯಾಯವಾಗಲು ಬಿಡುವುದಿಲ್ಲ ತಾವು ಸಹ ಸಮಾಜದ ಅಂಗವಾಗಿದ್ದು ಸೌಲಭ್ಯ ರಹಿತರಾಗಿರುವುದು ಮುಖ್ಯಮಂತ್ರಿಗಳ ಗಮನಕ್ಕೆ ಬಂದಿದ್ದು ತಮಗೆ ಸರ್ಕಾರದ ಸೌಲಭ್ಯ ಒದಗಿಸುವ ಚಿಂತನೆ ನಡೆದಿದೆ ಘೋಷಣೆ ಮಾಡಲಾಗುವುದು ಎಂದು ಹೇಳಿದರು.

## ಪೌಷ್ಟಿಕ ಆಹಾರ ಮತ್ತು ಆರೋಗ್ಯಕರ ಜೀವನಶೈಲಿಯಿಂದ ಸದೃಢರಾಗಿ:ದರಗದ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಪೌಷ್ಟಿಕ ಆಹಾರ ಮತ್ತು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಂಡು ಎಲ್ಲರೂ ಸದೃಢರಾಗಿರಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ದರಗದ ಅವರು ಹೇಳಿದರು.

ಮಂಗಳವಾರದಂದು ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ, ಕೊಪ್ಪಳ ಇವರ ಸಂಯುಕ್ತಾಶ್ರದಲ್ಲಿ ಕೊಪ್ಪಳ ನಗರದ ದೇವರಾಜ ಅರಸ ಕಾಲೋನಿ ಅಂಗನವಾಡಿ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಪೌಷ್ಟಿಕ ಆಹಾರ ದಿನ ಹಾಗೂ ಪೌಷ್ಟಿಕ ಸಪ್ತಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪೌಷ್ಟಿಕ ಆಹಾರ ಹಾಗೂ ಉತ್ತಮ ಜೀವನ ಶೈಲಿಯನ್ನು ಎಲ್ಲರೂ ಅಳವಡಿಸಿಕೊಳ್ಳಬೇಕು. ಮುಖ್ಯವಾಗಿ ಎಲ್ಲಾ ಗರ್ಭಿಣಿ, ಬಾಣಂತಿಯರು ಆರೋಗ್ಯಕರ ಮಗುವಿಗೆ ಜನ್ಮ ನೀಡುವಲ್ಲಿ ಪೌಷ್ಟಿಕ ಆಹಾರ ಮತ್ತು ಆರೋಗ್ಯಕರ ಜೀವನಶೈಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಪರಶುರಾಮ ಶೆಟ್ಟೆಪ್ಪನವರ, ಕೊಪ್ಪಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ರೋಹಿಣಿ ಕೋಟಗಾರ, ಗರ್ಭಿಣಿ, ಬಾಣಂತಿಯರು, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ವಲಯದ ಮೇಲ್ವಿಚಾರಕಿಯರು, ಅಂಗನವಾಡಿ ಕಾರ್ಯಕರ್ತೆಯರು ಹಾಜರಿದ್ದರು.

ಜಾಹೀರಾತಿಗಾಗಿ ಇಂದೇ
ಸಂಪರ್ಕಿಸಿ: 9449732000

## ಹೆಚ್.ಐ.ವಿ. ಏಡ್ಸ್: ಬೈಕ್ ರ‍್ಯಾಲಿ ಮೂಲಕ ಜಾಗೃತಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಹೆಚ್.ಐ.ವಿ. ಏಡ್ಸ್ ಕುರಿತು ಬೈಕ್ ರ‍್ಯಾಲಿ ಮೂಲಕ ಕೊಪ್ಪಳದಲ್ಲಿ ಶನಿವಾರದಂದು ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಯಿತು.

ಜಿಲ್ಲಾ ಮಟ್ಟದ ತೀವ್ರಗೊಂಡ ಐಇಸಿ ಅಭಿಯಾನ (ಖಟಿಣಜಟಿಸಿಜಿಜಜ ಖಇಅ ಅಚಿಟಕಿಚಿರಟಿ) ಅಂಗವಾಗಿ "ಬೈಕ್ ರ‍್ಯಾಲಿ" ಕಾರ್ಯಕಮವನ್ನು ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಸೊಸೈಟಿ, ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಕೊಪ್ಪಳ ಇವರ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿತ್ತು. ಈ ಬೈಕ್ ರ‍್ಯಾಲಿಗೆ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಎ. ಶಶಿಧರ ಅವರು ಜಿಲ್ಲಾಡಳಿತ ಭವನದ ಆಚರಣದಲ್ಲಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಕೊಪ್ಪಳ ಕೆ.ಎಸ್. ಆಸ್ಪತ್ರೆಯ ನಿರ್ವಾಹಕ ಪ್ರದೀಪ್ ಸೋಮಲಾಪುರ, ಸನಾತನ ಹಿಂದೂ ಮಹಾಮಂಡಳಿ ಕೊಪ್ಪಳದ ಗೌರವ ಅಧ್ಯಕ್ಷರಾದ ಶೇಖರಪ್ಪ ಮುತ್ತೇನವರ್ ಸೇರಿದಂತೆ ವಿವಿಧ ಸಂಸ್ಥೆಯವರು ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿ ಉಪಸ್ಥಿತರಿದ್ದರು.

ಬೈಕ್ ರ‍್ಯಾಲಿಯು ಜಿಲ್ಲಾಧಿಕಾರಿಗಳ ಕಾರ್ಯಾಲಯದಿಂದ ಪ್ರಾರಂಭಗೊಂಡು ಗಂಜ್ ಸರ್ಕಲ್, ಅಶೋಕ ಸರ್ಕಲ್, ಬಸ್‌ಸ್ಟ್ಯಾಂಡ್ ಮಾರ್ಗವಾಗಿ ಲೇಬರ್ ಸರ್ಕಲ್ ಮುಖಾಂತರ ಗಡಿಯಾರ ಕಂಬ, ಶ್ರೀ ಗವಿಸಿದ್ದೇಶ್ವರ ಪದವಿ ಮಹಾವಿದ್ಯಾಲಯದಿಂದ ಪುನಃ ಜಿಲ್ಲಾಧಿಕಾರಿಗಳ ಕಾರ್ಯಾಲಯದವರೆಗೆ ನಡೆಯಿತು.

ಈ ಬೈಕ್ ರ‍್ಯಾಲಿಯಲ್ಲಿ 120 ಕ್ಕೂ ಹೆಚ್ಚು ಬೈಕ್ ಸವಾರರು ಬೈಕ್‌ಗಳೊಂದಿಗೆ ಹಾಜರಾಗಿದ್ದರು. ಡ್ಯಾಪ್ಕೂ, ಐಸಿಟಿಸಿ, ಎ.ಆರ್.ಟಿ., ಡಿ.ಎಸ್.ಆರ್.ಸಿ. ಎನ್.ಟಿ.ಇ.ಪಿ. ಸಿಬ್ಬಂದಿಗಳು, ಕೊಪ್ಪಳದ ಸ್ನೇಹಾ ಮಹಿಳಾ ಸಂಘ (ಎಫ್.ಎಸ್.ಡಬ್ಲ್ಯೂ ಮತ್ತು ಎಂ.ಎಸ್.ಎಂ.ಟಿಐ), ಚೈತನ್ಯ ನಗರ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ, ಸಂರಕ್ಷ ಸಂಸ್ಥೆ, ಇನ್ವಾಲ್ವ್ ಲರ್ನಿಂಗ್ ಸಲ್ಯೂಷನ್ ಫೌಂಡೇಷನ್ ಮತ್ತು ಸನಾತನ ಹಿಂದೂ ಮಹಾಮಂಡಳಿಯ ಯುವಕರು, ವಿವಿಧ ಇಲಾಖೆಯ ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

## ವೃದ್ಧಾಶ್ರಮದಲ್ಲಿ ನಟ ಕಿಚ್ಚ ಸುದೀಪ್ ಹುಟ್ಟು ಹಬ್ಬ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರ : ಪಟ್ಟಣದ ಮಹಾತ್ಮಗಾಂಧಿ ವೃದ್ಧಾಶ್ರಮದಲ್ಲಿ ಖ್ಯಾತ ನಟ ಸುದೀಪ್ ಅವರ ಹುಟ್ಟು ಹಬ್ಬವನ್ನು ಆಚರಣೆ ಮಾಡಲಾಯಿತು.

ಅಖಿಲ ಕರ್ನಾಟಕ ಅಭಿನಯ ಕಿಚ್ಚ ಸುದೀಪ್ ಸೇನಾ ಸಮಿತಿ ಲಿಂಗಸುಗೂರ ಸಮಿತಿಯಿಂದ ಹುಟ್ಟು ಹಬ್ಬದ ನಿಮಿತ್ತವಾಗಿ ಕೇಕ್ ಕತ್ತರಿಸಿ ಸರಳವಾಗಿ ಆಚರಣೆ ಮಾಡಲಾಯಿತು.

ಈ ವೇಳೆ ಅಧ್ಯಕ್ಷ ಗಂಗಾಧರ ಗುಂತಗೋಳ ಮಾತನಾಡಿ, ಕನ್ನಡ ಚಿತ್ರರಂಗದಲ್ಲಿ ಬಹುಬೇಡಿಕೆ ಹೊಂದಿದ ನಟ ಸುದೀಪ್ ಹುಟ್ಟು ಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಲು ವೃದ್ಧಾಶ್ರಮದ ಜನರಿಗೆ ದವಸ ಧಾನ್ಯಗಳನ್ನು ನೀಡುವ ಮೂಲಕ ಆಚರಣೆ ನಡೆದಿದ್ದು ಅಲ್ಲದೇ ಸತತವಾಗಿ ನಾಲ್ಕು ವರ್ಷಗಳ ಕಾಲ ಒಂದೊಂದು ಕ್ಷೇತ್ರದಲ್ಲಿ ಜನರಿಗೆ ಸಹಾಯ ಮಾಡಿದೇವೆ. ಇನ್ನೂ ಬಹಳ ಕ್ಷೇತ್ರದಲ್ಲಿ ನಮ್ಮ ಸಂಘಟನೆ ಅಭಿವೃದ್ಧಿ ಕಾರ್ಯ ಮಾಡಲಿದೇವೆ. ನಟ ಸುದೀಪ್ ಅವರಿಗೆ ದೇವರು ಆರೋಗ್ಯ ಆಯುಷ್ಯ ಕೊಟ್ಟು ಕಾಪಾಡಲಿ ಎಂದು ಹೇಳಿದರು.

ನಂತರ ಹಿರಿಯ ಪತ್ರಕರ್ತರು, ವೃದ್ಧಾಶ್ರಮ ಸಂಚಾಲಕರಾದ ಅಮರೇಶ ಕೆಲ್ಲೂರು ಮಾತನಾಡಿ, ನಟ ಸುದೀಪ್ ಸಂಘಟನೆಯ ನಮ್ಮ ವೃದ್ಧಾಶ್ರಮದಲ್ಲಿ ಹುಟ್ಟು ಹಬ್ಬ ಆಚರಣೆ ಮಾಡಿದ್ದು ಸಮಾಜಮುಖಿ ಕಾರ್ಯಕ್ಕೆ ಮುಂದಾಗಿದೆ ಇದು ನಮ್ಮ ವೃದ್ಧಾಶ್ರಮದ ಜನರಿಗೆ ಅನುಕೂಲವಾಗಲಿದೆ ನಿಮ್ಮ ಸೇವೆ ಇನ್ನೂ ಹೆಚ್ಚಾಗಲಿ ನಟ ಸುದೀಪ್ ಅವರಿಗೆ ದೇವರು ದೀರ್ಘಕಾಲದ ಆರೋಗ್ಯ ನೀಡಲಿ ಎಂದು ಹೇಳಿದರು. ಅಧ್ಯಕ್ಷ, ಪದಾಧಿಕಾರಿಗಳ ನೇತೃತ್ವದಲ್ಲಿ ಅಕ್ಕಿ, ಎಣ್ಣೆ, ಸಾಬಾನು, ಹಣ್ಣುಗಳು, ದವಸ ಧಾನ್ಯಗಳನ್ನು ವೃದ್ಧಾಶ್ರಮಕ್ಕೆ ನೀಡಲಾಯಿತು.

ಈ ವೇಳೆ ಕಾರ್ಯದರ್ಶಿ ಅಮರೇಶ ಪೂಲಭಾವಿ, ಶಿವರಾಜ ಯರಗುಂಟಿ, ಉಪಾಧ್ಯಕ್ಷರಾದ ಗಣೇಶ ಹಲಕವಾಟಗಿ, ಕುಪ್ಪೇಶ ಚಿತ್ತಾಪುರ, ಅಮರೇಶ ಗೆಜ್ಜಲಗಟ್ಟಾ, ಹನುಮಂತ ದೇವರಭೂಪುರ, ಗದ್ದೇಶ ಹುಲಿಗುಡ್ಡ, ಬಸವರಾಜ ಬೈಲಗುಡ್ಡ, ಕೆಂಚಣ್ಣ ಉಪ್ಪೇರಿ, ಸೇರಿದಂತೆ ಅಭಿಮಾನಿಗಳು ಭಾಗವಹಿಸಿದ್ದರು.

# ಜಿಲ್ಲಾ ಮಟ್ಟದ ಅಪೆಕ್ಸ್ ಸಮಿತಿ ಸಭೆ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ: ಜಿಲ್ಲೆಯ ಸಂಬಂಧಿಸಿದ ಇಲಾಖೆಗಳು, ಗ್ರಾಮ ಪಂಚಾಯತ್ ಹಾಗೂ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಜಲಮೂಲಗಳ ಗುರುತಿಸುವಿಕೆ ಮತ್ತು ರಕ್ಷಣೆ ಮಾಡಲು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಕರೆದ ಜಿಲ್ಲೆಯಲ್ಲಿನ ಕೆರೆಗಳ ಒತ್ತುವರಿ ತೆರವು, ಕೆರೆ ಅಭಿವೃದ್ಧಿ ಹಾಗೂ ಕೆರೆಗಳ ಸಂರಕ್ಷಣೆ ಕುರಿತು ಜಿಲ್ಲಾ ಮಟ್ಟದ ಅಪೆಕ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಣ್ಣ ನೀರಾವರಿ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಗ್ರಾಮ ಪಂಚಾಯತ್, ಅರಣ್ಯ ಇಲಾಖೆ, ಸ್ಥಳೀಯ ಸಂಸ್ಥೆಗಳು ಹಾಗೂ ಕಂದಾಯ ಇಲಾಖೆ ವ್ಯಾಪ್ತಿಯಲ್ಲಿ ಬರುವ ಕೊಪ್ಪಳ ಜಿಲ್ಲೆಯಲ್ಲಿರುವ ಕೆರೆಗಳ ಒತ್ತುವರಿ ತೆರವುಗೊಳಿಸಬೇಕು. ಶೇ.30 ಕ್ಕಿಂತ ಕಡಿಮೆ ನೀರು ಸಂಗ್ರಹಗೊಂಡಿರುವ ಕೆರೆಗಳ ವಿವರ, ಕೆರೆಗಳ ನೀರಿನ ಗುಣಮಟ್ಟ ಮತ್ತು ನೀರು ಮಲಿನಗೊಂಡಿರುವ ಕೆರೆಗಳ ವಿವರನ್ನು ಸಹ ಸಲ್ಲಿಸಬೇಕು. ಎಲ್ಲಾ ಕೆರೆಗಳ ಅಭಿವೃದ್ಧಿ ಮತ್ತು ಅವುಗಳ ಸಂರಕ್ಷಣೆಗೆ ಆದ್ಯತೆ ನೀಡುವಂತೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ತಮ್ಮ ಅಧೀನದಲ್ಲಿ ಬರುವ ಎಲ್ಲಾ ಕೆರೆಗಳ ಒತ್ತುವರಿ ತೆರವುಗೊಳಿಸಿದ ಬಗ್ಗೆ ಮತ್ತು ಕೆರೆ ಅಭಿವೃದ್ಧಿ ಹಾಗೂ ಕೆರೆಗಳ ಸಂರಕ್ಷಣೆ ಕುರಿತಾದ ಪ್ರಸ್ತುತದವರೆಗೂ ಸಾಧಿಸಿದ ಪ್ರಗತಿ ವರದಿಯನ್ನು ಕಡ್ಡಾಯವಾಗಿ ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿ ಸಲ್ಲಿಸುವಂತೆ ಸೂಚನೆ ನೀಡಿದರು. ಜಲಮೂಲಗಳನ್ನು ಗುರುತಿಸಿ, ಅವುಗಳಿಗೆ ವಿಶಿಷ್ಟ ಗುರುತಿನ ಸಂಖ್ಯೆಯನ್ನು ನೀಡಿ, ಅಲ್ಲಿ ಅತಿಕ್ರಮಣ ತಪ್ಪಿಸಬೇಕು. ಕೆರೆಗಳಲ್ಲಿ ತ್ಯಾಜ್ಯ ವಸ್ತುಗಳನ್ನು ಸುರಿಯುವುದನ್ನು ತಡೆಯುವುದು ಹಾಗೂ ಇತರೆ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುವ ಮೂಲಕ ನೀರಿನ ಗುಣಮಟ್ಟ ಮತ್ತು ಪುನಃಸ್ಥಾಪನೆಯನ್ನು ಕಾಪಾಡಿಕೊಳ್ಳಬೇಕು. ಸಂಬಂಧಿಸಿದ ಇಲಾಖೆ, ಪಂಚಾಯತ್ ಮತ್ತು ಸ್ಥಳೀಯ ಸಂಸ್ಥೆಗಳು ಜಲಮೂಲಗಳ ರಕ್ಷಣೆಗೆ ವಿವಿಧ ಮೂಲಗಳಿಂದ ಲಭ್ಯವಿರುವ ಆರ್ಥಿಕ ಸಂಪನ್ಮೂಲಗಳನ್ನು ಬಳಸಿಕೊಳ್ಳಬೇಕು. ಕೆರೆಗಳ ಸಂರಕ್ಷಣೆಗೆ ಜನ ಸಮುದಾಯಕ್ಕೆ ಅರಿವು ಮೂಡಿಸುವುದರ ಜೊತೆಗೆ ಅವರನ್ನು ಈ ಕಾರ್ಯದಲ್ಲಿ ಪಾಲ್ಗೊಳ್ಳುವಂತೆ ಮಾಡಬೇಕು ಎಂದರು.

ಕೆರೆಗಳಲ್ಲಿ ವಾಹನಗಳನ್ನು ತೊಳೆಯುವುದು ಮತ್ತು ಜಾನುವಾರುಗಳ ಮೈತೊಳೆಯುವುದನ್ನು ತಡೆಗಟ್ಟಬೇಕು. ಇದಕ್ಕಾಗಿ ಪ್ರತ್ಯೇಕ ತೊಟ್ಟಿಯನ್ನು ನಿರ್ಮಿಸುವಂತೆ ಆಯಾ ಗ್ರಾಮ ಪಂಚಾಯತ್ ಮತ್ತು ಸ್ಥಳೀಯ ಸಂಸ್ಥೆಗಳು ಕ್ರಮ ಕೈಗೊಳ್ಳಬೇಕು. ಎಲ್ಲಿ ನೀರು ಕಲುಷಿತವಾಗಿದೆ ಅದನ್ನು ಗುರುತಿಸಿ, ನೀರು ಶುದ್ಧೀಕರಿಸಲು ಸೂಕ್ತ ಕ್ರಮ ವಹಿಸಬೇಕು. ಪ್ರಸ್ತುತ ಕೆರೆ ಮತ್ತು ಇತರೆ ಜಲಮೂಲಗಳಲ್ಲಿ ಗಣೇಶ ಮೂರ್ತಿಗಳ ವಿಸರ್ಜನೆ ನಡೆಯಲಿದ್ದು, ಇದಕ್ಕಾಗಿ ಅಗತ್ಯ ವ್ಯವಸ್ಥೆ ಮಾಡಿಕೊಡಬೇಕು. ಜಲಮೂಲಗಳಲ್ಲಿ ಯಾವುದೇ ರೀತಿಯ ತ್ಯಾಜ್ಯ ವಸ್ತುಗಳನ್ನು ಹಾಕದಂತೆ ನೋಡಿಕೊಳ್ಳಬೇಕೆಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಂಜುನಾಥ ಗುಂಡೂರು, ಜಿ.ಪಂ ಯೋಜನಾ ನಿರ್ದೇಶಕ ಪ್ರಕಾಶ ವಿ., ಜಂಟಿ ಕೃಷಿ ನಿರ್ದೇಶಕ ರುದ್ರೇಶಪ್ಪ ಟಿ.ಎಸ್., ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಹಿರಿಯ ಭೂ ವಿಜ್ಞಾನಿ ಪುಷ್ಪಲತಾ ಎಸ್. ಕವಲೂರು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಕೊಪ್ಪಳ ಪ್ರಾದೇಶಿಕ ಕಛೇರಿಯ ಪರಿಸರ ಅಧಿಕಾರಿ ವೈ.ಎಸ್. ಹರಿಶಂಕರ ಸೇರಿದಂತೆ ಇತರೆ ಇಲಾಖೆಗಳ ಅಧಿಕಾರಿಗಳು, ವಿವಿಧ ತಾಲ್ಲೂಕುಗಳ ತಹಶೀಲ್ದಾರರು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

## ಸೆ.07 ರಂದು ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.02–ಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಸೆ.07 ರಂದು ಬೆಳಿಗ್ಗೆ 11.30 ಗಂಟೆಗೆ ನಗರದ ಡಾ.ರಾಜ್‌ಕುಮಾರ್ ರಸ್ತೆಯ ಹೊಂಗಿರಣದ ಸಾಂಸ್ಕೃತಿಕ ಸಮುಚ್ಚಯದಲ್ಲಿ ಬ್ರಹ್ಮಶ್ರೀ ನಾರಾಯ–ಣಗುರು ಜಯಂತಿ ಕಾರ್ಯಕ್ರಮ ಆಯೋಜಿಸಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಮ್, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಬಳ್ಳಾರಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಬಳ್ಳಾರಿ ಜಿಲ್ಲಾ ಆರ್ಯ ಈಡಿಗ ಗೌನ ಮಹಾಜನ ಸಂಘದ ಜಿಲ್ಲಾಧ್ಯಕ್ಷ ಹೆಚ್.ಆರ್.ಶ್ರೀನಾಥ್ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಬಳ್ಳಾರಿಯ ಆಕಾಶವಾಣಿ ಎಫ್.ಎಂ ಕೇಂದ್ರದ ಉದ್ಘೋಷಕ ಬಸವರಾಜ ಅಮಾತಿ ಅವರು ಜಯಂತಿ ಕಾರ್ಯಕ್ರಮ ಕುರಿತು ವಿಶೇಷ ಉಪನ್ಯಾಸ ನೀಡುವರು. ಕಾರ್ಯಕ್ರಮದಲ್ಲಿ ಬಳ್ಳಾರಿಯ ರೇಣುಕಾ.ಎ ತಂಡದಿಂದ ಭಕ್ತಿ ಸಂಗೀತ ಇರಲಿದೆ.

*ಮೆರವಣಿಗೆ:*

ಜಯಂತಿ ಕಾರ್ಯಕ್ರಮದ ಅಂಗವಾಗಿ ಅಂದು ಬೆಳಿಗ್ಗೆ 09.30 ಗಂಟೆಗೆ ನಗರದ ಈಡಿಗ ಹಾಸ್ಟೆಲ್ ನಿಂದ ಮೆರವಣಿಗೆ ನಡೆಯಲಿದ್ದು, ಮೆರವಣಿಗೆಯು ಗಡಿಗಿ ಚನ್ನಪ್ಪ ವೃತ್ತ– ಡಾ.ರಾಜಕುಮಾರ್ ರಸ್ತೆ– ಇಂದಿರಾ ವೃತ್ತದ ಮೂಲಕ ಸಾಂಸ್ಕೃತಿಕ ಸಮುಚ್ಚಯ ಹೊಂಗಿರಣ ಸಭಾಂಗಣದವರೆಗೆ ನಡೆಯಲಿದೆ.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಸಹಾಯಕ ಆಯುಕ್ತ ಪಿ.ಪ್ರಮೋದ್, ಮಹಾನಗರ ಪಾಲಿಕೆ ಆಯುಕ್ತ ಮಂಜುನಾಥ್.ಪಿ.ಎಸ್ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

## ಸೆ.04 ರಂದು ಸಿರುಗುಪ್ಪ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟಗಳು

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.02–ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ 2025–26 ನೇ ಸಾಲಿನ ಸಿರುಗುಪ್ಪ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟಗಳನ್ನು ಸೆ.04 ರಂದು ಬೆಳಿಗ್ಗೆ 11 ಗಂಟೆಗೆ ಸಿರುಗುಪ್ಪ ಪಟ್ಟಣದ ತಾಲ್ಲೂಕು ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ.

ಕ್ರೀಡಾಕೂಟಗಳು: ಅಥ್ಲೆಟಿಕ್ಸ್, ವಾಲಿಬಾಲ್, ಕಬಡ್ಡಿ, ಖೋ–ಖೋ, ಫುಟ್ಬಾಲ್ (ಪುರುಷರಿಗೆ ಮಾತ್ರ), ಥ್ರೋಬಾಲ್ ಮತ್ತು ಯೋಗಾ.

*ಸೂಚನೆ:*

ತಾಲ್ಲೂಕು ದಸರಾ ಸ್ಪರ್ಧೆಗಳಲ್ಲಿ ಆಯಾ ತಾಲ್ಲೂಕು ಕ್ರೀಡಾಪಟುಗಳು ಮಾತ್ರ ಭಾಗವಹಿಸಲು ಅವಕಾಶ. ಕ್ರೀಡಾಪಟುಗಳು ಪ್ರತಿನಿಧಿಸುವ ತಾಲ್ಲೂಕು ದೃಢೀಕರಣದ ಬಗ್ಗೆ ದಾಖಲೆ ಸಲ್ಲಿಸಬೇಕು ಹಾಗೂ ನೋಂದಣಿ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸಬೇಕು (ಶಾಲಾ, ಕಾಲೇಜಿನ ಗುರುತಿನ ಚೀಟಿ, ಆಧಾರ್ ಕಾರ್ಡ್, ರೇಷನ್ ಕಾರ್ಡ್, ಮತದಾರರ ಗುರುತಿನ ಚೀಟಿ ಹಾಗೂ ಸರ್ಕಾರದಿಂದ ಅಧಿಕೃತ ಇರುವ ಇತರೆ ಗುರುತಿನ ಚೀಟಿ).

ಬೇರೆ ಜಿಲ್ಲೆಯಿಂದ ಭಾಗವಹಿಸುವ ಕ್ರೀಡಾಪಟುಗಳಿಗೆ ಅವಕಾಶ ಇರುವುದಿಲ್ಲ. ಕ್ರೀಡಾಪಟುಗಳು ವಿದ್ಯಾಭ್ಯಾಸ, ಸೇವೆಯಲ್ಲಿದ್ದರೆ ಸಂಬಂಧಪಟ್ಟ ಕಾಲೇಜು–ಸಂಸ್ಥೆಗಳ ಗುರುತಿನ ಚೀಟಿಯೊಡನೆ ಭಾಗವಹಿಸಲು ಅವಕಾಶವಿದೆ.

ಪ್ರಸಕ್ತ ಸಾಲಿನಿಂದ ದಸರಾ ಕ್ರೀಡಾ ಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳನ್ನು ತಾಲ್ಲೂಕು, ಜಿಲ್ಲೆ ಮತ್ತು ವಿಭಾಗ ಮಟ್ಟದವರಿಗೆ ಆಛಿಚಿಡಿಚಿ ಅಒ ಅಣಾ 2025 ಖಠಿಂಡಿಣ ಖಜರುಣಡಿಚಿ–ಣುಂಟ ಕಿಖ ಅಂಜಜ ನಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳಬೇಕು. ಇಲ್ಲವಾದಲ್ಲಿ ಕ್ರೀಡಾ ಕೂಟದಲ್ಲಿ ಭಾಗವಹಿಸಲು ಅವಕಾಶ ಇರುವುದಿಲ್ಲ.

ತಾಲ್ಲೂಕು ಮಟ್ಟದಲ್ಲಿ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದವರು ಮತ್ತು ಗುಂಪು ಆಟಗಳಲ್ಲಿ ಪ್ರಥಮ ಸ್ಥಾನ ಪಡೆದ ಕ್ರೀಡಾಪಟುಗಳಿಗೆ ಜಿಲ್ಲಾ ಮಟ್ಟದಲ್ಲಿ ಭಾಗವಹಿಸಲು ಅವಕಾಶ ಇರುತ್ತದೆ.

ವಿವಿಧ ಮಟ್ಟದ ದಸರಾ ಕ್ರೀಡಾ ಕೂಟ–ದ ಸ್ಪರ್ಧೆಗಳಲ್ಲಿ ಭಾಗವಹಿಸಲು ಕರ್ನಾಟಕ ರಾಜ್ಯದಲ್ಲಿ ವಾಸಿಸುವ ಕ್ರೀಡಾಪಟುಗಳು ಮಾತ್ರ ಅರ್ಹರಿರುತ್ತಾರೆ. ಕ್ರೀಡಾ ಕೂಟದಲ್ಲಿ ರಕ್ಷಣಾ ಪಡೆ, ಅರೆ ರಕ್ಷಣಾ ಪಡೆ, ಸೇರಿದ ಕ್ರೀಡಾಪಟುಗಳು ಭಾಗವಹಿಸಲು ಅವಕಾಶ ಇರುವುದಿಲ್ಲ.

ತಾಲ್ಲೂಕು ಮಟ್ಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಪ್ರಯಾಣ ಭತ್ಯೆ ನೀಡಲಾಗುವುದಿಲ್ಲ. ಒಬ್ಬ ಕ್ರೀಡಾಪಟು ಕೇವಲ ಒಂದು ಗುಂಪು ಕ್ರೀಡೆಯಲ್ಲಿ ಮಾತ್ರ ಭಾಗವಹಿಸಲು ಅವಕಾಶ ಇರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಎಂ.ಜಾಕೀರ್–9036335986, ಮಹ್ಮದ್ ಮಸೂದ್–9886688858 ಮತ್ತು ಕಚೇರಿ ಸಿಬ್ಬಂದಿ ರತಿಕಾಂತ್–8971238689 ಗೆ ಸಂಪರ್ಕಿಸಬಹುದು ಎಂದು ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ.ಗ್ರೇಸಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿರಿಯ ಪ್ರಾಥಮಿಕ, ಪ್ರೌಢಶಾಲೆಗಳ ಕ್ರೀಡಾ–ಕೂಟಕ್ಕೆ ಮಹಾಪೌರರಿಂದ ಚಾಲನೆ

ರಾಯಚೂರು ಸೆಪ್ಟೆಂಬರ್ 02 : ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ರಾಯಚೂರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ರಾಯಚೂರು, ಸಮೂಹ ಸಂಪನ್ಮೂಲ ಕೇಂದ್ರ ಪೂರ್ವ ವಲಯ, ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ, ಅನುದಾನಿತ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳು ರಾಯಚೂರ ಇವರ ಸಂಯುಕ್ತಾಶ್ರಯದಲ್ಲಿ ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಸೆಪ್ಟೆಂಬರ್ 2ರಂದು ಮತ್ತು ಸೆಪ್ಟೆಂಬರ್ 3ರಂದು ನಡೆಯಲಿರುವ ಗಾಜಗಾರ ಪೇಟೆ ಹೋಬಳಿ ಮಟ್ಟದ ಹಿರಿಯ ಪ್ರಾಥಮಿಕ ಶಾಲೆಗಳ ಮತ್ತು ಮಲಿಯಬಾದ ವಲಯ ಮಟ್ಟದ ಪ್ರೌಢಶಾಲೆಗಳ ಕ್ರೀಡಾಕೂಟಕ್ಕೆ ರಾಯಚೂರು ಮಹಾನಗರ ಪಾಲಿಕೆಯ ಮಹಾಪೌರರಾದ ನರಸಮ್ಮ ನರಸಿಂಹಲು ಮಾಡಿಗಿರಿ ಅವರು ಚಾಲನೆ ನೀಡಿದರು.

## ಪರೀಕ್ಷಾ ಕೇಂದ್ರಗಳ ಸುತ್ತಲು ನಿಷೇಧಾಜ್ಞೆ ಜಾರಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಸೆಪ್ಟೆಂಬರ್ 02 : ಕರ್ನಾಟಕ ಲೋಕಸೇವಾ ಆಯೋಗವು 2024ರ ಮಾರ್ಚ್ 15 ರಂದು ಅಧಿಸೂಚಿಸಿರುವ ಪದವಿ ಮಟ್ಟದ ವಿವಿಧ ಇಲಾಖೆಗಳಲ್ಲಿನ ಗ್ರೂಪ್ ಸಿ–16 (ಹೈ.ಕ) ಹುದ್ದೆಗಳ ಪರೀಕ್ಷೆಯು ಸುರಕ್ಷಿತವಾಗಿ ನಡೆಯಲು ಭಾರತೀಯ ನಾಗರಿಕ ಸುರಕ್ಷಾ ಸಂಹಿತ 2023ರ ಕಲಂ.163 ರನ್ವಯ ಪರೀಕ್ಷಾ ಕೇಂದ್ರಗಳ ಸುತ್ತಲು 200 ಮೀಟರ್ ಪ್ರದೇಶದಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾ ದಂಡಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಆದೇಶ ಹೊರಡಿಸಿದ್ದಾರೆ.

ರಾಯಚೂರು ನಗರದ 07 ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ಸುತ್ತುವರೆದ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ, ಈ ಪರೀ–ಕ್ಷೆ ಕೇಂದ್ರಗಳ ಸುತ್ತಲಿನ ಎಲ್ಲಾ ಝುರಾಕ್ಸ್ ಅಂಗಡಿಗಳು, ಕಂಪ್ಯೂಟರ್ ಅಂಗಡಿಗಳನ್ನು ಹಾಗೂ ಸೈಬರ್ ಕಫೆಗಳನ್ನು ಪರೀಕ್ಷೆ ಸಮಯದಲ್ಲಿ ಕಡ್ಡಾಯವಾಗಿ ಮುಚ್ಚುವಂತೆ ಜಿಲ್ಲಾಧಿಕಾರಿಗಳು ಆದೇಶಿಸಿದ್ದಾರೆ.

# ಓದುವ ಹವ್ಯಾಸ ಬೆಳೆಸಲು ಗ್ರಂಥಾಲಯ ಸಹಕಾರಿ-ಪೂಜಾರಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.2-ಓದುವ ಹವ್ಯಾಸ,ಸೃಜನಶೀಲತೆ,ವಿಮರ್ಶಾತ್ಮಕ ಚಿಂತನೆಯನ್ನುಬೆಳೆಸಲುಗ್ರಂಥಾಲಯಗಳು ಸಹಾಯಕವಾಗಿವೆಎಂದುಸುತಗುಂಡಾರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಹನಮಂತ ಪೂಜಾರಿ ಹೇಳಿದರು.

ಸಾರ್ವಜನಿಕ ಗ್ರಂಥಾಲಯ ವಿಜಯಪುರ ಹಾಗೂ ಆಲಮಟ್ಟಿ ಡ್ಯಾಮ್ ಸೈಟ್ ಶಾಖೆಯ ಸಂಯುಕ್ತ ಆಶ್ರಯದಲ್ಲಿ ಸೋಮವಾರ ತಾಲೂಕಿನ ಸುತಗುಂಡಾರ ಕರವಿರೇಶ್ವರ ಪ್ರೌಢಶಾಲೆಯಲ್ಲಿ ಜರುಗಿದ 100 ರಸಪ್ರಶ್ನೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಂಥಾಲಯಗಳು ಜ್ಞಾನದ ಕೇಂದ್ರಗಳಾಗಿದ್ದು, ವಿದ್ಯಾರ್ಥಿಗಳು ಗ್ರಂಥಾಲಯದಲ್ಲಿ ದೊರೆಯುವ ಪುಸ್ತಕಗಳ ಜ್ಞಾನವನ್ನು ಪಡೆದು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಸಹಕಾರಿಯಾಗಬಹುದು ಎಂದು ಪೂಜಾರಿ ಹೇಳಿದರು.

ಆಲಮಟ್ಟಿ ಗ್ರಂಥಾಲಯದ ಗ್ರಂಥಪಾಲಕ ಪರಶುರಾಮ ಮೂಲಂಗಿ ಪ್ರಾಸ್ತಾವಿಕವಾಗಿ ಮಾತನಾಡಿ, ವ್ಯಕ್ತಿಯ ಜ್ಞಾನಾಭಿವೃದ್ಧಿಗೆ ಹಾಗೂ ಸಮಯದ ಸದುಪಯೋಗಕ್ಕೆ ಗ್ರಂಥಾಲಯಗಳು ಸಹಕಾರಿಯಾಗಿವೆ ಎಂದರು. ಗ್ರಂಥಪಾಲಕರ ದಿನಾಚರಣೆ ಅಂಗವಾಗಿ ವರ್ಷವಿಡಿ ರಸಪ್ರಶ್ನೆ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಡಿ.ಜಿ.ಕುಲಕರ್ಣಿ, ದೇಶ ಸುತ್ತು, ಕೋಶ ಓದು ಎನ್ನುವಂತೆ ಗ್ರಂಥಾಲಯಗಳಲ್ಲಿ ಜ್ಞಾನಕ್ಕೆ ಅಗತ್ಯವಾಗಿರುವ ಹಲವಾರು ಪುಸ್ತಕಗಳು ದೊರೆ-ಯುತ್ತಿದ್ದು, ವಿದ್ಯಾರ್ಥಿಗಳು ಬಿಡುವಿನ ಸಮಯದಲ್ಲಿ ಅವುಗಳ ಪ್ರಯೋಜನ ಪಡೆದು ಜ್ಞಾನವಂತರಾಗಬೇಕು ಎಂದು ಹೇಳಿದರು.

ಸಿದ್ಧಾರೂಢ ಮಠದ ಶಾಂತ ಸ್ವಾಮೀಜಿ ಆಶೀರ್ವಚನ ನೀಡಿದರು. ಶಶಿಕಲಾ ಹಿರೇಮಠ ರೇಣುಕಾ ಮಲಘಾನ ಇದ್ದರು. ಶಿಕ್ಷಕ ಹೆಳವರ ನಿರೂಪಿಸಿದರು. ಬಸವರಾಜ ದ್ಯಾವಣ್ಣವರ ವಂದಿಸಿದರು.

ಬಹುಮಾನ ವಿಜೇತರು: 8ನೇ ತರಗತಿಯಲ್ಲಿ ಹರೀಶ ಚಲವಾದಿ ಪ್ರಥಮ, ದ್ಯಾಮಣ್ಣ ಮಾದಾಪೂರ ದ್ವಿತೀಯ ಹಾಗೂ ಪ್ರೀತಮ್ ವಾಲಿಕಾರ ತೃತೀಯ ಬಹುಮಾನ ಪಡೆದರೆ, 9ನೇ ತರಗತಿಯಲ್ಲಿ ಪ್ರವೀಣ ದೊಡ್ಡಮನಿ ಪ್ರಥಮ, ಶ್ರದ್ಧಾ ಅವ್ವನ್ನವರ ದ್ವಿತೀಯ ಹಾಗೂ ಸಂಜನಾ ಜೀರಳಬಾವಿ ತೃತೀಯ ಬಹುಮಾನ ಮತ್ತು 10ನೇ ತರಗತಿಯಲ್ಲಿ ಬಸಮ್ಮ ತಟ್ಟಿ ಪ್ರಥಮ, ಪೂಜಾ ತುಂಬುರಮಟ್ಟಿ ದ್ವಿತೀಯ ಮತ್ತು ಸಮರ್ಥ ಗೋನಾಳ ತೃತೀಯ ಬಹುಮಾನ ಪಡೆದುಕೊಂಡರು.

ವಿಜೇತ ವಿದ್ಯಾರ್ಥಿಗಳಿಗೆ ಸುತಗುಂಡಾರ ಗ್ರಾಮದ ಯೋಧ ಮಲ್ಲಿಕಾರ್ಜುನ ಬಸರಕೋಡ ಬಹುಮಾನ ನೀಡಿದರು.

### ಶೇ.10 ರಷ್ಟು ಲಾಭಾಂಶ ಹಂಚಿಕೆ

# ಜ್ಯೋತಿ ಕ್ರೆಡಿಟ್ ಸೊಸೈಟಿಗೆ 1.14 ಕೋಟಿ ರೂ.ಲಾಭ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.2-ವರ್ಷದಿಂದ ವರ್ಷಕ್ಕೆ ಪ್ರಗತಿಯತ್ತ ಸಾಗುತ್ತಿರುವ ಜ್ಯೋತಿ ಕೋ-ಆಫ್ ಕ್ರೆಡಿಟ್ ಸೊಸಾಯಿಟಿ(ಬ್ಯಾಂಕ್) ಕಳೆದ ಮಾರ್ಚ ಅಂತ್ಯಕ್ಕೆ 1.14 ಕೋಟಿ ರೂ.ಗಳ ನಿವ್ವಳ ಲಾಭ ಗಳಿಸಿದೆ ಎಂದು ಬ್ಯಾಂಕಿನ ಅಧ್ಯಕ್ಷ ಅಧ್ಯಕ್ಷ ಸಿದ್ಧಣ್ಣ ಕಾಖಂಡಕಿ ಹೇಳಿದರು.

ನವನಗರದಲ್ಲಿರುವ ಬ್ಯಾಂಕಿನ ಸಭಾಭವನದಲ್ಲಿ ಆಯೋಜಿಸಿದ್ದ 29ನೇ ವಾರ್ಷಿಕ ಸರ್ವಸಾಧಾರಣ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಪ್ರಾರಂಭದಲ್ಲಿ 341 ಸದಸ್ಯರನ್ನು ಹೊಂದಿದ್ದ ಬ್ಯಾಂಕು ಇಂದು 6190 ಸದಸ್ಯರನ್ನು ಹೊಂದಿದ್ದು, 262 ಕೋಟಿ ರೂ. ಠೇವು ಹೊಂದಿದ್ದು, 114 ಕೋಟಿ ರೂ.ಗಳ ಸಾಲವನ್ನು ಗ್ರಾಹಕರಿಗೆ ನೀಡಿದೆ ಎಂದು ಹೇಳಿದರು.

67ಲಕ್ಷ ರೂ.ಗಳ ನಿಧಿಗಳನ್ನು ಹೊಂದಿದ್ದು, 5 ಕೋಟಿ ರೂ.ಗಳ ಶೇರು ಬಂಡಾವಳ ಹೊಂದಿದೆ. ಶೇ.10ರಷ್ಟು ಲಾಭಾಂಶ ಹಂಚಿಕೆ ಮಾಡಲು ನಿರ್ಧರಿಸಲಾಗಿದೆ ಎಂದು ಕಾಖಂಡಕಿ ಹೇಳಿದರು.

ಬ್ಯಾಂಕು ಹಣಕಾಸಿನ ವ್ಯವಹಾರದ ಜೊತೆಗೆ ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಿದ್ದು, ಪ್ರತಿವರ್ಷ ಎಸ್ಎಸ್ಎಲ್‌ಸಿ ಮತ್ತು ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ಸಮಾಜದ ಮಕ್ಕಳನ್ನು ಹಾಗೂ ಸಾಧನೆ ಮಾಡಿದವರನ್ನು ಸನ್ಮಾನಿಸಿ ಗೌರವಿಸುವ ಕೆಲಸ ಮಾಡುತ್ತಿದೆ. ಬ್ಯಾಂಕಿನ ಸಿಬ್ಬಂದಿ, ಆಡಳಿತ ಮಂಡಳಿ ಹಾಗೂ ಗ್ರಾಹಕರ ಸಹಕಾರದಿಂದಾಗಿ ಬ್ಯಾಂಕು ಪ್ರಗತಿ ಹೊಂದುತ್ತ ಮುನ್ನಡೆದಿದೆ ಎಂದು ಹೇಳಿದರು.

ಉಪಾಧ್ಯಕ್ಷ ಧರಿಯಪ್ಪ ಯಳ್ಳಿಗುತ್ತಿ, ನಿರ್ದೇಶಕರಾದ ಮಲ್ಲನಗೌಡ ನಾಡಗೌಡರ, ಬಸಲಿಂಗಪ್ಪ ಹೊಕ್ರಾಣಿ, ಅಶೋಕ ಲಾಗಲೋಟಿ, ನಿಂಗಣ್ಣ ಗೋಡಿ, ಮುತ್ತಪ್ಪ ಕೆಂಪನ್ನವರ, ಚಂದ್ರಕಾಂತ ಕೇಸನೂರ, ಸಂಗಪ್ಪ ಕೊಪ್ಪದ, ಪ್ರಭಾವತಿ ಹೆರಕಲ್, ಕವಿತಾ ಏಳೆಮ್ಮಿ, ಪರಸಪ್ಪ ಮಾದರ, ಬ್ಯಾಂಕಿನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಾಬು ನಾಡಗೌಡರ, ಸದಸ್ಯರು ಇದ್ದರು.

# ಪ್ರವಾಸೋದ್ಯಮ ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ,ಸೆಪ್ಟೆಂಬರ್.02-ಪ್ರವಾಸೋದ್ಯಮ ಇಲಾಖೆಯಿಂದ 2024-25ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ. ಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ, ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿಗಾಗಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ತರಬೇತಿ ಕಾರ್ಯಕ್ರಮವನ್ನು ಪರಿಶಿಷ್ಟ ಜಾತಿಗೆ ಸೇರಿದ 292 ಅಭ್ಯರ್ಥಿಗಳಿಗೆ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ 162 ಅಭ್ಯರ್ಥಿಗಳಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಅತಿಥ್ಯ ಕ್ಷೇತ್ರದ ಸಂಸ್ಥೆಗಳಾದ ಫುಡ್ ಕ್ರಾಫ್ಟ್ ಇನ್ಸಟ್ಯೂಟ್ (ಎಫ್‌ಸಿಐ) ಮೈಸೂರು ಹಾಗೂ ಇನ್ಸಟ್ಯೂಟ್ ಆಫ್ ಹೋಟೆಲ್ ಮ್ಯಾನೇಜಮೆಂಟ್ (ಐಎಚ್‌ಎಂ) ಬೆಂಗಳೂರು ಅವರ ಮೂಲಕ ವಸತಿ ಸಹಿತ ಕಾರ್ಯಕ್ರಮವನ್ನು ಜಾರಿಗೊಳಿಸಲು ಉದ್ದೇಶಿಸಲಾಗಿದೆ.

ಬೀದರ ಜಿಲ್ಲೆಗೆ ಮಲ್ಟಿ ಕೂಸಿನ್ ಕುಕ್: ಪ.ಜಾ-1, ಪ.ಪಂ-3 ಒಟ್ಟು 04 ಹಾಗೂ ರೂಮ್ ಅಟೆಂಡೆಂಟ್: ಪ.ಜಾ-1, ಪ.ಪಂ-1 ಒಟ್ಟು 02 ಬಾಕಿ ಗುರಿಗಳು ಉಳಿದಿರುತ್ತವೆ.

ಈಗಾಗಲೇ ತರಬೇತಿ ಪಡೆಯುತ್ತಿರುವ ಅಭ್ಯರ್ಥಿಗಳಿಗೆ ರಾಜ್ಯದ ವಿವಿಧ ಪಂಚತಾರಾ ಹಾಗೂ ಇತರೆ ಹೋಟೆಲ್‌ಗಳಲ್ಲಿ ಕೆಲಸ ಖಾತರಿಯಾಗಿರುತ್ತದೆ. ತರಬೇತಿ ಪಡೆಯುವ ವೇಳೆ 2000 ರೂ.ಗಳ ಮಾಹೆಯಾನ ಸ್ಟೈಫೆಂಡ್ ನೀಡಲಾಗುತ್ತದೆ. ತರಬೇತಿಗೆ ಹಾಜರಾಗುವವರಿಗೆ ವಸತಿ, ಉಟೋಪಚಾರ ಹಾಗೂ ಯೂನಿಫಾರ್ಮ ನೀಡಲಾಗುತ್ತದೆ. ತರಗತಿಯ ತರಬೇತಿ ಜೊತೆಗೆ ರಾಜ್ಯದ ವಿವಿಧ ಪಂಚತಾರಾ ಹಾಗೂ ಇತರೆ ಹೋಟೆಲ್‌ಗಳಲ್ಲಿ ಓನ್ ಜಾಬ್ ಟ್ರೈನಿಂಗ್ ಸಹ ನೀಡಲಾಗುತ್ತದೆ.

ಅರ್ಹರು ಅರ್ಜಿ ನಮೂನೆಯನ್ನು ಬೀದರ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಿಂದ ಪಡೆದು ಭರ್ತಿ ಮಾಡಿ ದ್ವಿಪ್ರತಿಯಲ್ಲಿ ಎಲ್ಲಾ ಅಗತ್ಯ ಪ್ರಮಾಣ ಪತ್ರಗಳ ಸ್ವಯಂ ದೃಢೀಕೃತ ಪತ್ರಗಳೊಂದಿಗೆ ದಿನಾಂಕ:06-09-2025ರೊಳಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಜಿಲ್ಲಾಧಿಕಾರಿಗಳ ಕಾರ್ಯಾಲಯ ಬೀದರ ಇಲ್ಲಿಗೆ ಸಲ್ಲಿಸಬೇಕೆಂದು ಅವರು ತಿಳಿಸಿದ್ದಾರೆ.

# ಶ್ರೀ ವಾಲ್ಮೀಕಿ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಸೆಪ್ಟೆಂಬರ್.02- ಪ್ರತಿ ವರ್ಷದಂತೆ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯಂದು ಪರಿಶಿಷ್ಟ ಪಂಗಡದ ಜನಾಂಗದ ಏಳ್ಗೆಗಾಗಿ ಶ್ರಮಿಸಿ ಪರಿಶಿಷ್ಟ ಪಂಗಡಕ್ಕೆ ಸೇರಿದ ಸಾಧಕರಿಗೆ ರಾಜ್ಯಮಟ್ಟದ ಶ್ರೀ ವಾಲ್ಮೀಕಿ ಪ್ರಶಸ್ತಿ ನೀಡಿ ಗೌರವಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದಿನಾಂಕ: 07-10-2025 ರಂದು ನಡೆಯುವ ರಾಜ್ಯ ಮಟ್ಟದ ಶ್ರೀ ವಾಲ್ಮೀಕಿ ಜಯಂತಿಯಂದು ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ. ಕಾರಣ ಅರ್ಹ ವ್ಯಕ್ತಿಗಳು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಬೀದರ ಇಲ್ಲಿಂದ ಅರ್ಜಿಯನ್ನು ಪಡೆದು ಸೂಕ್ತ ದಾಖಲಾತಿಗಳೊಂದಿಗೆ ದಿನಾಂಕ: 10-09-2025 ರೊಳಗಾಗಿ ಅರ್ಜಿ ಸಲ್ಲಿಸಬೇಕೆಂದು ಅವರು ತಿಳಿಸಿದ್ದಾರೆ.

# ಕವಿರಾಜಮಾರ್ಗ ಕನ್ನಡಿಗರ ಅಸ್ಮಿತೆ : ಡಾ.ದುರ್ಗಾದಾಸ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.2-ಕನ್ನಡದ ಮೊದಲ ಉಪಲಬ್ದ ಗ್ರಂಥವಾದ ಕವಿರಾಜ ಮಾರ್ಗವು ಕನ್ನಡ ಕುರಿತು ಮಹತ್ವದ ದಾಖಲೆಗಳನ್ನು ಒದಗಿಸುತ್ತದೆ. ಅದು ಕನ್ನಡಿಗರ ಭಾಷಾ ಅಸ್ಮಿತೆಯಾಗಿದೆ ಎಂದು ಕರ್ನಾಟಕ ಬಯಲಾಟ ಅಕಾಡೆಮಿ ಅಧ್ಯಕ್ಷ ಡಾ.ಕೆ.ಆರ್. ದುರ್ಗಾದಾಸ ಹೇಳಿದರು.

ಹಂಪಿ ಕನ್ನಡ ವಿಶ್ವವಿದ್ಯಾಲಯದ ಹಸ್ತಪ್ರತಿಶಾಸ್ತ್ರ ವಿಭಾಗದಡಿಯಲ್ಲಿ ಬಾಗಲಕೋಟೆ ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ), ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಕನ್ನಡ ಉಪನ್ಯಾಸಕರ ಒಕ್ಕೂಟ, ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಇವರ ಸಹಯೋಗದಲ್ಲಿ ನಗರದಲ್ಲಿ ನಡೆದಿರುವ ಹಳಗನ್ನಡ ಸಾಹಿತ್ಯ ಬೋಧನಾ ತರಬೇತಿ ಶಿಬಿರದಲ್ಲಿ ಚಂಪೂ ಸಾಹಿತ್ಯದ ಸ್ವರೂಪ ಅದರ ಲಕ್ಷಣಗಳನ್ನು ಕುರಿತು ವಿಷಯ ಮಂಡಿಸಿ ಅವರು ಮಾತನಾಡಿದರು.

ಕನ್ನಡ ಸಾಹಿತ್ಯ ಚರಿತ್ರೆಯಲ್ಲಿ ಚಂಪೂ ಸಾಹಿತ್ಯ ಸುವರ್ಣಯುಗವಾಗಿತ್ತು ಎಂಬುದಕ್ಕೆ ಪಂಪ, ರನ್ನ, ಜನ್ನ, ಪೊನ್ನರಂತಹ ಮೇಧಾವಿ ಹಳಗನ್ನಡದ ಕವಿಗಳು ಗದ್ಯ ಮತ್ತು ಪದ್ಯ ಮಿಶ್ರಿತವಾದ ಚಂಪೂ ಸಾಹಿತ್ಯವನ್ನು ರಚಿಸಿ ಕನ್ನಡವನ್ನು ಶ್ರೀಮಂತಗೊಳಿಸಿದ್ದಾರೆ. ಅವರು ಹಾಕಿಕೊಟ್ಟ ಕನ್ನಡ ಮಾರ್ಗವೇ ಹಳಗನ್ನಡದ ಬುನಾದಿಯಾಗಿದೆ ಎಂದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥ ಜಿ.ಜಿ.ಹಿರೇಮಠ, ಪಂಪನ ಪಂಪಭಾರತ ಮತ್ತು ರನ್ನನ ಗದಾಯುದ್ಧ ಕಾವ್ಯಗಳ ಕುರಿತು ವಿಷಯ ಮಂಡಿಸಿ ಮಾತನಾಡಿ, ಪಂಪನ ಕಾವ್ಯದ ವಸ್ತು, ಉದ್ದೇಶ ಮತ್ತು ಶೈಲಿ ವೈಶಿಷ್ಟ್ಯಪೂರ್ಣವಾಗಿವೆ. ಅದರಂತೆ ರನ್ನನ ಗದಾಯುದ್ಧವು ಚಂಪೂ ಕಾವ್ಯವಾಗಿದೆ. ಗದಾಯುದ್ಧದ ಮುಖ್ಯ ಕಥಾವಸ್ತು ಕವಿಯ ಆಶ್ರಯದಾತ ಸತ್ಯಾಶ್ರಯನನ್ನು ಭೀಮನಿಗೆ ಹೋಲಿಸಿ ರಚಿಸಲಾಗಿದೆ ಎಂದು ಹೇಳಿದರು.

ಮಂಗಳವಾರ ಮೊದಲ ಅವಧಿಯಲ್ಲಿ ಬಾದಾಮಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಚಂದ್ರಶೇಖರ ಹೆಗಡೆ ನಾಗಚಂದ್ರನ ರಾಮಚಂದ್ರ ಚರಿತ ಪುರಾಣ ಕಾವ್ಯ ಕುರಿತು ವಿಷಯ ಮಂಡಿಸಿ ಮಾತನಾಡಿ, ನಾಗಚಂದ್ರನ ಈ ಕಾವ್ಯವು ಮೂಲ ರಾಮಾಯಣ ಕಾವ್ಯಕ್ಕಿಂತ ಭಿನ್ನವಾಗಿದ್ದು ರಾಮ, ಸೀತೆ, ರಾವಣರ ವಿಷಯಗಳ ಕುರಿತು ಪಂಪ ರಾಮಾಯಣ ಕಾವ್ಯದ ಮೂಲಕ ವಿವರಿಸಿದರು.

ಭಾಷಾ ಚಿಂತಕ ಸಂಗಮೇಶ ಬ್ಯಾಳಿ, ಹರಿಹರನ ರಗಳೆಗಳು ಕುರಿತು ವಿಷಯ ಮಂಡಿಸಿ, ನಡುಗನ್ನಡ ಸಾಹಿತ್ಯದಲ್ಲಿ ಭಕ್ತಿ ಪ್ರಧಾನತೆಯ ರಗಳೆಗಳು ಮುಖ್ಯವಾಗಿವೆ. ಹರಿಹರನ 108 ರಗಳೆಗಳಲ್ಲಿ ಭಕ್ತಿ ಪ್ರಧಾನತೆಯನ್ನು ಕಾಣುತ್ತೇವೆ ಎಂದರು. ಬಸವೇಶ್ವರ ಕಲಾ ಮಹಾವಿದ್ಯಾಲಯದ ಪ್ರಾಧ್ಯಾಪಕಿ ವೀಣಾ ಕಲ್ಮಠ, ಷಟ್ಪದಿ ಸ್ವರೂಪ ಮತ್ತು ಲಕ್ಷಣಗಳ ಕುರಿತು ವಿಷಯ ಮಂಡಿಸಿದರು.

ಶಿಬಿರದ ನಿರ್ದೇಶಕ ವೀರೇಶ ಬಡಿಗೇರ, ಸಂಚಾಲಕ ಚಂದ್ರಶೇಖರ ಕಾಳನ್ನವರ, ಸಿದ್ದರಾಮ ಖಾನಾಪುರ, ಸಂತೋಷ ಕಾಳನ್ನವರ ಸೇರಿದಂತೆ 60ಕ್ಕೂ ಹೆಚ್ಚು ಶಿಬಿರಾರ್ಥಿಗಳು ಭಾಗವಹಿಸಿದ್ದರು.

# ಕುಮಾರೇಶ್ವರ ಆಸ್ಪತ್ರೆಯಲ್ಲಿ ಶ್ರವಣ ಸಾಧನ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.2-ಕೇಂದ್ರ ಸರ್ಕಾರ ಸಾರ್ವಜನಿಕರ ಆರೋಗ್ಯ ಸುಧಾರಣೆಗಾಗಿ ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ. ವಿಶೇಷವಾಗಿ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ನೆರವಾಗುವ ಉದ್ದೇಶದಿಂದ ಆರೋಗ್ಯ ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದು ಬಿ.ವಿ.ವಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ ಹೇಳಿದರು.

ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಹಾನಗಲ್ಲ ಕುಮಾರೇಶ್ವರ ಆಸ್ಪತ್ರೆಯಲ್ಲಿ ಮಂಗಳವಾರ ರೋಗಿಗಳಿಗೆ ಉಚಿತ ಶ್ರವಣ ಸಾಧನಗಳನ್ನು ವಿತರಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯ ಅಡಿಪ್ ಯೋಜನೆಯಡಿ ರೋಗಿಗಳಿಗೆ ಶ್ರವಣ ಸಾಧನಗಳನ್ನು ಉಚಿತವಾಗಿ ವಿತರಿಸಲಾಗುತ್ತಿದೆ ಎಂದರು.

ಕೇಂದ್ರ ಸರ್ಕಾರದ ಈ ಯೋಜನೆಯನ್ನು ಕುಮಾರೇಶ್ವರ ಆಸ್ಪತ್ರೆಯಲ್ಲಿ ಅನುಷ್ಠಾನಗೊಳಿಸಲಾಗಿದೆ. ಸ್ಪೀಚ್ ಆ್ಯಂಡ್ ಹೀಯರಿಂಗ್ ಕಾಲೇಜನ್ನು ಶೀಘ್ರವೇ ಆರಂಭಿಸಲಾಗುವುದು ಎಂದ ಅಥಣಿ, ಈ ಸಂದರ್ಭದಲ್ಲಿ ಕಳೆದ ಜೂನ್ ತಿಂಗಳಲ್ಲಿ ಅಡಿಪ್ ಯೋಜನೆಯಡಿ ಕುಮಾರೇಶ್ವರ ಆಸ್ಪತ್ರೆಯಲ್ಲಿ 22 ರೋಗಿಗಳಿಗೆ ಶ್ರವಣ ಸಾಧನಗಳನ್ನು ಉಚಿತವಾಗಿ ವಿತರಿಸಿದ್ದನ್ನು ಸ್ಮರಿಸಿಕೊಂಡರು.

ಕಾರ್ಯಕ್ರಮದಲ್ಲಿ 27 ಫಲಾನುಭವಿಗಳಿಗೆ 5 ಲಕ್ಷ ರೂಪಾಯಿಗಳ ಮೌಲ್ಯದ 59 ಶ್ರವಣ ಸಾಧನಗಳನ್ನು ಉಚಿತವಾಗಿ ವಿತರಿಸಲಾಯಿತು.

ಈ ಸಂದರ್ಭದಲ್ಲಿ ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ (ಬೇವೂರ), ಮೆಡಿಕಲ್ ಕಾಲೇಜಿನ ಪ್ರಾಚಾರ್ಯ ಡಾ.ಭುವನೇಶ್ವರಿ ಯಳಮಲಿ, ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ಇ.ಎನ್.ಟಿ ವಿಭಾಗದ ಮುಖ್ಯಸ್ಥ ಡಾ.ಸಿ.ಎಸ್.ಹಿರೇಮಠ, ವಾಕ್ ಮತ್ತು ಶ್ರವಣ ಸಂಸ್ಥೆಯ ಪ್ರಾಚಾರ್ಯ ಡಾ.ಶ್ರೀವಿದ್ಯಾ ಮತ್ತು ಸಿಬ್ಬಂದಿ, ಮೆಡಿಕಲ್ ಕಾಲೇಜಿನ ವಿವಿಧ ವಿಭಾಗಗಳ ಮುಖ್ಯಸ್ಥರು, ವೈದ್ಯರು, ವಿದ್ಯಾರ್ಥಿಗಳು ಮತ್ತು ಫಲಾನುಭವಿಗಳು ಹಾಗೂ ಅವರ ಕುಟುಂಬದ ಸದಸ್ಯರು ಉಪಸ್ಥಿತರಿದ್ದರು.

# ಆನೆಹೊಸೂರಿಗೆ ನೂತನ ಬಸ್ ಸೇವೆಗೆ ಚಾಲನೆ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸೂಗೂರು,ಸೆ.02 -ಆನೆಹೊಸೂರು ಗ್ರಾಮದ ಜನರ ಬಹುಕಾಲದ ಬೇಡಿ-ಕೆ ಇಂದು ಈಡೇರಿತು. ಲಿಂಗಸೂಗೂರು-ಬಾಗಲಕೋಟ ಮಾರ್ಗದಲ್ಲಿ ಆನೆಹೊಸೂರು ಮೂಲಕ ಸಂಚರಿಸುವ ಬಸ್‌ಗಳಿಗೆ ಚಾಲನೆ ದೊರಕಿದ್ದು, ಗ್ರಾಮಸ್ಥರ ಸಂಚಾರ ಹಾಗೂ ಆರೋಗ್ಯದ ಹಿತಕ್ಕಾಗಿ ಇದು ಮಹತ್ವದ ಹೆಜ್ಜೆಯಾಗಿದೆ.

ಕಾರ್ಯಕ್ರಮದಲ್ಲಿ ಗ್ಯಾರಂಟಿ ಯೋಜನೆಯ ಅಧ್ಯಕ್ಷರು ಅಮರೇಶ್ ಗುತ್ತೇದಾರ, ಸದಸ್ಯರು ಗದ್ದೆನ್ ಗೌಡ ನೆಂದಿಹಾಳ್, ಡಿ. ಗುರಿಕಾರ, ಬಸವಂತ ಗೌಡ್ರು ತೊವಿ, ಕೆಡಿಪಿ ಸದಸ್ಯ ಶರಣಪ್ಪ ಕಟಗಿ, ಮುಖಂಡರು ಗ್ಯಾನಪ್ಪ ಕಟ್ಟಿಮನಿ, ಇಸ್ಮಾಯಿಲ್ ಹುಬ್ಬಳ್ಳಿ, ಬುಡ್ಡಸಾಬ್ ಹುಡೇದ್, ಎಮ್.ಡಿ. ಉಸ್ಮಾನ್ ಆರ್. ಬೆಂಡೋಣಿ, ಮಹಿಳಾ ಸದಸ್ಯೆ ಲಕ್ಷ್ಮೀದೇವಿ, ರಾಜಾಸಾಬ್ ಕರಡಿ, ದವಲಸಾಬ್ ಪಠಾಣ್, ಶಾಜಾನ್ ಬೆಂಡೋಣಿ, ಸಂಗಮೇಶ್ ನಾಯಕ್, ಶಿವಪ್ಪ ಕಟ್ಟಿಮನಿ, ನಾಗರಾಜ್ ಮಡಿವಾಳ, ಭೀಮನಗೌಡ ಸುಂಕದ ಸೇರಿದಂತೆ ಅನೇಕ ಗಣ್ಯರು ಹಾಗೂ ಗ್ರಾಮಸ್ಥರು ಹಾಜರಿದ್ದರು.

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಯ ಸದಸ್ಯರು, ಲಿಂಗಸೂಗೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಗೋವಿಂದ ನಾಯಕ್ ಹಾಗೂ ಎಲ್ಲಾ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರಿಗೆ ಸಾರ್ವಜನಿಕರು ಧನ್ಯವಾದಗಳನ್ನು ಅರ್ಪಿಸಿದರು.


## PAPER PUBLICATION/ PUBLIC NOTICE

By this public notice to one and all in general and particularly concerned in any manner to the following land.

The property Land Sy. No: 226/*/10 measuring 4-acres 00-gunta, R.A. of Rs. 2.80 paise and Land sy No. 226/*/13 measuring 4 Acres 35 guntas RA of Rs. 3.41 both situated at village Humnabad Tq. Humnabad Dist Bidar belonging to Sri. Shivanandayya S/o Channabasayya R/o Kodli Allam prahu Road Chincholi Aadhar No. 6821 5901 4328 he is the owner and possessor of the said lands, I do hereby inform that my client Sri Rakesh B.R. S/o Rangappa B.E. intended to purchase the above said properties for valued consideration from the above said owner as mentioned above, if person or persons, public at large, Govt body. Semi Govt. Financial Institutions, Bank authority, or anybody etc, have got any claim, right title or Interest or any objection for purchase of the same by my client the same be pleased to inform me in writing with their documents specific objection and claim for the same within a period of 7 days from the date of publication of the this notice and if no claim and objection is received by me within that period then I will direct my client to complete the purchase transaction and get the sale deed executed from the owner said property as mentioned above and their after no claim of any kind and of any nature will be considered my client which may please note.

Hence this public notice,

Sd/-
Shambuling M Dhumansure
Advocate, Humnabad.
Cell.9916464266.


# ಅಪರಿಚಿತ ಮೃತ ವ್ಯಕ್ತಿಯ ವಾರಸುದಾರರ ಪತ್ತೆಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.02-ಅಂದಾಜು 50 ರಿಂದ 55 ವರ್ಷದ ಅನಾಮಧೇಯ ಮೃತ (ಪುರುಷ) ವ್ಯಕ್ತಿಯನ್ನು ಯಾ-ರೋ ದುಷ್ಕರ್ಮಿಗಳು ಯಾವದೋ ಉದ್ದೇಶಕ್ಕಾಗಿ ಕೊಡ್ಲಾ ಗ್ರಾಮದ ಹೊರವಲಯದ ಭೀರಪ್ಪ ತಂದೆ ನಿಂಗಪ್ಪ ರಾವೂರ ಇವರ ಹೊಲದ ಹತ್ತಿರದಲ್ಲಿ 2025ರ ಆಗಸ್ಟ್ 25 ರ ಸಂಜೆ 7 ರಿಂದ ಆಗಸ್ಟ್ 26ರ ಮಧ್ಯಾಹ್ನ 1.30 ಗಂಟೆಯ ಮಧ್ಯದ ಅವಧಿಯಲ್ಲಿ ಕೊಲೆ ಮಾಡಿ ಓಡಿಹೋಗಿದ್ದು, ಈ ಕುರಿತು ಸೇಡಂ ಪೊಲೀಸ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಸೇಡಂ ಆರಕ್ಷಕ ವೃತ್ತ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈವರೆಗೆ ಈ ಅಪರಿಚಿತ ಮೃತ ವ್ಯಕ್ತಿಯ ಹೆಸರು ಹಾಗೂ ವಿಳಾಸವು ಗೊತ್ತಾಗಿರುವುದಿಲ್ಲ. ಈ ವ್ಯಕ್ತಿಯು 5 ಅಡಿ 6 ಇಂಚು ಎತ್ತರ ಇದ್ದು, ಸದೃಢ ಮೈಕಟ್ಟು, ಸಾದಾ ಕಪ್ಪು ಮೈಬಣ್ಣ, ತಲೆಯ ಮೇಲೆ ಬಿಳಿ ಮತ್ತು ಕಪ್ಪು ಮಿಶ್ರಿತ ಕೂದಲು ಇದ್ದು, ಕಪ್ಪು ಬಣ್ಣದ ಫುಲ್ ಶರ್ಟ್, ಗೋಧಿ ಬಣ್ಣದ ಟಿ-ಶರ್ಟ್, ನೀಲಿ ಬಣ್ಣ ಪ್ಯಾಂಟ್, ಚಾಕಲೇಟ್ ಬಣ್ಣ ಅಂಡರವೇಯರ್, ಬಿಳಿ ಬಣ್ಣದ ರಕ್ತ ಹತ್ತಿರ ಟಾವೆಲ್ ಹಾಗೂ ಬಹದೂರ್ (ಃಂಊಂ-ಆಗಖ) ಕಂಪನಿಯ ಚಪ್ಪಲಿಗಳನ್ನು ಧರಿಸಿರುತ್ತಾನೆ.

ಈ ವ್ಯಕ್ತಿಯ ವಾರಸುದಾರರು ಯಾರಾದರೂ ಇದ್ದಲ್ಲಿ ಸೇಡಂ ಪೋಲೀಸ್ ಠಾಣೆಯ ದೂರವಾಣಿ ಸಂಖ್ಯೆ:08441-276166, ಪಿ.ಎಸ್.ಐ. ಸೇಡಂ ಇವರ ಮೊಬೈಲ್ ಸಂಖ್ಯೆ 9480803593 ಹಾಗೂ ಸಿ.ಪಿ.ಐ. ಇವರ ಮೊಬೈಲ್ ಸಂಖ್ಯೆ 9480803537 ಗೆ ಸಂಪರ್ಕಿಸಲು ಕೋರಿದೆ.

### ಸೆ.7ರವರೆಗೆ ಆಧಾರ್ ಸೀಡಿಂಗ್ ಅಭಿಯಾನ

# ವಿದ್ಯಾರ್ಥಿಗಳು ಬ್ಯಾಂಕ್ ಖಾತೆಗೆ ಆಧಾರ ಸೀಡಿಂಗ್ ಮಾಡಿಸಿಕೊಳ್ಳಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಸೆಪ್ಟೆಂಬರ್.02- ಬೀದರ ಜಿಲ್ಲೆಯ ಎಲ್ಲಾ ಪರಿಶಿಷ್ಟ ಪಂಗಡದ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರದ ವಿದ್ಯಾರ್ಥಿಗಳು ಬ್ಯಾಂಕ್ ಖಾತೆಗೆ ಆಧಾರ ಸೀಡಿಂಗ್ ಆಗದೇ ಇರುವ ಕೆಲ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರಾತಿಗೆ ತಾಂತ್ರಿಕ ಅಡೆತಡೆ ಉಂಟಾಗುತ್ತಿದ್ದು, ಈ ಹಿನ್ನಲೆಯಲ್ಲಿ ಎಲ್ಲಾ ಅರ್ಹ ವಿದ್ಯಾರ್ಥಿಗಳು ಆಧಾರ್ ಸೀಡಿಂಗ್ ಮಾಡಿಸಿಕೊಳ್ಳಲು ಸೆಪ್ಟೆಂಬರ್.7 ರವರೆಗೆ ವಿಶೇಷ ಆಧಾರ ಸೀಡಿಂಗ್ ಅಭಿಯಾನವನ್ನು ಜಿಲ್ಲಾ/ತಾಲ್ಲೂಕು ಮಟ್ಟದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಬೀದರ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಯೋಜನೆಗಳನ್ನು ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ (ಎಸ್‌ಎಸ್ ಪಿ) ಮೂಲಕ ಅನುಷ್ಠಾನಗೊಳಿಸಲಾಗುತ್ತಿದ್ದು, ನೇರ ನಗದು ವರ್ಗಾವಣೆ (ಡಿಬಿಟಿ) ತಂತ್ರಾಂಶದ ಮೂಲಕ ಅರ್ಹ ವಿದ್ಯಾರ್ಥಿಗಳ ಆಧಾರ್ ಜೋಡಿತ್ ಬ್ಯಾಂಕ್ ಖಾತೆಗೆ ನೇರವಾಗಿ ವಿದ್ಯಾರ್ಥಿ ವೇತನ ಪಾವತಿಸಲಾಗುತ್ತಿದೆ.

ಜಿಲ್ಲೆಯ ಎಲ್ಲಾ ಪರಿಶಿಷ್ಟ ಪಂಗಡದ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರದ ವಿದ್ಯಾರ್ಥಿಗಳು ಬ್ಯಾಂಕ್ ಖಾತೆಗೆ ಆಧಾರ ಸೀಡಿಂಗ್ ಮಾಡಿಕೊಳ್ಳುವಂತೆ ಅವರು ತಿಳಿಸಿದ್ದಾರೆ.

# ಗಡಿನಾಡು ಬೀದರ ಈಗ 'ಸೋಯಾ'ಮಯ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಸೆ. 02 : ಪ್ರಕೃತಿ ವಿಕೋಪ, ಮಾರುಕಟ್ಟೆಯಲ್ಲಿ ದರ ಕುಸಿತದಿಂದ ಜಿಲ್ಲೆಯ ಪ್ರಧಾನ ಆಹಾರ ಬೆಳೆ ಜೋಳಕ್ಕೆ ಭಾರಿ ಹೊಡೆತ ಬಿದ್ದಿದ್ದು, ಬಿತ್ತನೆ ಕ್ಷೇತ್ರ ಸಂಪೂರ್ಣ ಕ್ಷೀಣಿಸಿದೆ. ಕಳೆದ ಎರಡು ದಶಕದಲ್ಲಿ ಶೇ.95 ಜೋಳದ ಕ್ಷೇತ್ರ ಇಳಿಕೆಯಾಗಿದ್ದು, ಈಗ ಆ ಜಾಗದಲ್ಲಿ ಸೋಯಾಬಿನ್ ಆವರಿಸಿದೆ.

ತೊಗರಿ ಕಣಜ, ಉದ್ದು-ಹೆಸರು, ಜೋಳ ಉತ್ಪಾದನೆ ಪ್ರದೇಶ ಎಂಬೆಲ್ಲ ಖ್ಯಾತಿ ಪಡೆದಿದ್ದ ಗಡಿನಾಡು ಬೀದರ ಈಗ ಸೋಯಾಮಯವಾಗಿದೆ. 20 ವರ್ಷಗಳ ಹಿಂದೆ 1ಲಕ್ಷಕ್ಕೂ ಅಧಿಕ ಹೆಕ್ಟೇರ್ ಪ್ರದೇಶದಲ್ಲಿ ಜೋಳ ಬಿತ್ತನೆ ಮಾಡಲಾಗುತ್ತಿತ್ತು. ಆದರೀಗ ಶೇ.5 ಇಳಿಕೆಯಾಗಿದೆ. ಒಂದೆಡೆ ಊಟಕ್ಕೆ ಜೋಳದ ರೊಟ್ಟಿ ಬಳಸುವವರ ಸಂಖ್ಯೆ ಹೆಚ್ಚುತ್ತಿದ್ದರೆ, ಇನ್ನೊಂದೆಡೆ ಜೋಳದ ಪ್ರದೇಶ ಕಡಿಮೆಯಾಗಿ ರೊಟ್ಟಿ ತುಟ್ಟಿಯಾಗುತ್ತಿದೆ. ಉತ್ತರ ಕರ್ನಾಟಕದ ಆಹಾರ ಬೆಳೆಗಳಲ್ಲಿ ಜೋಳ ಪ್ರಧಾನವಾಗಿದ್ದು, ಜೋಳದ ರೊಟ್ಟಿ ತಿನ್ನದೇ ಊಟ ಇಲ್ಲ ಎನ್ನುವಷ್ಟರ ಮಟ್ಟಿಗೆ ಈ ಬೆಳೆ ಇಲ್ಲಿನ ಜನರನ್ನು ಆವರಿಸಿದೆ. ಸೋಯಾಬೀನ್ ಕಡಿಮೆ ಬಂಡವಾಳ-ಅಧಿಕ ಲಾಭ ತಂದುಕೊಡಬಲ್ಲ ಬೆಳೆ ಎಂಬ ನಂಬಿಕೆಯಿಂದ ಅನ್ನದಾತರು ಪ್ರಮುಖ ಆಹಾರ ಬೆಳೆ ಬಿತ್ತನೆಯತ್ತ ನಿರಾಸಕ್ತಿ ತೋರುತ್ತಿದ್ದಾರೆ. ಇದರಿಂದ ಪಾರಂಪರಿಕ ಬೆಳೆಗಳ ಮೇಲೆ ಭಾರಿ ಹೊಡೆತ ಬಿದ್ದಿದ್ದು, ಭವಿಷ್ಯದಲ್ಲಿ ಜೋಳ ಉತ್ಪಾದನೆಯ ಗಂಭೀರ ಪರಿಸ್ಥಿತಿ ಎದುರಾದರೂ ಅಚ್ಚರಿ ಇಲ್ಲ. ಮಳೆಯಾಶ್ರಿತ ಬೀದರ ಜಿಲ್ಲೆಯಲ್ಲಿ 15-20 ವರ್ಷಗಳ ಹಿಂದೆ ಜೋಳ ಬೆಳೆಯನ್ನು ಹೆಚ್ಚು ಪ್ರಮಾಣದಲ್ಲಿ ಬೆಳೆದರೆ, ಅಂತರ ಬೆಳೆಯಾಗಿ ಸೋಯಾಬಿನ್ ಬಿತ್ತನೆಯಾಗುತ್ತಿತ್ತು. ಆದರೆ ಜಿಲ್ಲೆ ಪ್ರತಿ ವರ್ಷ ಅತಿವೃಷ್ಟಿ ಅಥವಾ ಅನಾವೃಷ್ಟಿಗೆ ಜೋಳ ತುತ್ತಾಗಿ ಕೃಷಿಕರನ್ನು ಆರ್ಥಿಕ ನಷ್ಟ ತಂದೊಡ್ಡುತ್ತಿತ್ತು.

ಈ ನಡುವೆ ಸೋಯಾ ಬೆಳೆಗೆ ಪ್ರಕೃತಿ ವಿಕೋಪವಾದರೂ ಅಷ್ಟಾಗಿ ತೊಂದರೆಯಾಗಲ್ಲ ಎಂದರಿತಿರುವ ರೈತರು ಸೋಯಾನತ್ತ ಹೆಚ್ಚು ಒಲವು ತೋರುತ್ತಿದ್ದಾರೆ. ಜಿಲ್ಲೆಯಲ್ಲಿ ಗುಂಡು ಜೋಳ ಮತ್ತು ಎಂ.35-1 ತಳಿಯನ್ನು ಬಿತ್ತನೆ ಮಾಡಲಾಗುತ್ತದೆ. ಮುಖ್ಯವಾಗಿ ಬೆಳೆಗೆ ದರ, ಕಟಾವಿಗೆ ಕೂಲಿಕಾರರ ಸಮಸ್ಯೆ ಜೋಳ ಬಿತ್ತನೆಯತ್ತ ರೈತರ ಆಸಕ್ತಿ ಕಡಿಮೆಯಾಗಿಸಿದೆ. ಉತ್ಪಾದನೆ ಕಡಿಮೆಯಾದ ಪರಿಣಾಮ ರೊಟ್ಟಿ ಪ್ರಿಯರ ಆಹಾರ ಪದ್ಧತಿಯೂ ಬದಲಾಗುತ್ತಿದ್ದು, ಗೋಧಿ ಮತ್ತು ಅಕ್ಕಿ ಬಳಕೆಯಾಗುತ್ತಿದೆ. ರೈತರು ಹಣ ಗಳಿಸುವ ಬೆಳೆಯನ್ನಾಗಿ ಸ್ವೀಕರಿಸಿರುವುದರಿಂದ ಸೋಯಾ ಪ್ರದೇಶ ಪ್ರತಿ ವರ್ಷ ಹಿಗ್ಗುತ್ತಲೇ ಇದೆ. ಭವಿಷ್ಯದಲ್ಲಿ ಜೋಳಕ್ಕೆ ಗಂಭೀರ ಸ್ಥಿತಿ ಎದುರಾಗುವ ಮುನ್ನ ಎಚ್ಚೆತ್ತುಕೊಳ್ಳಬೇಕಿದೆ.

ಒಂದು ಲಕ್ಷದಿಂದ 2 ಸಾವಿರಕ್ಕೆ ಇಳಿಕೆ ಜಿಲ್ಲೆಯಲ್ಲಿ 2005ರಲ್ಲಿ ಸುಮಾರು 1ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದ್ದ ಜೋಳ ಕಳೆದ 15 ವರ್ಷಗಳಲ್ಲಿ ಭಾರಿ ಕುಸಿತ ಕಂಡಿದೆ. 2011ರಲ್ಲಿ 57 ಸಾವಿರ ಹೆ., 2012ರಲ್ಲಿ 55 ಸಾವಿರ ಹೆ., 2013ರಲ್ಲಿ 35 ಸಾವಿರ ಹೆ., 2014ರಲ್ಲಿ 27 ಸಾವಿರ ಹೆ., 2015ರಲ್ಲಿ 22 ಸಾವಿರ ಹೆ., 2016ರಲ್ಲಿ 26 ಸಾವಿರ ಹೆ., 2017ರಲ್ಲಿ 23 ಸಾವಿರ ಹೆ., 2018ರಲ್ಲಿ 21 ಸಾವಿರ ಹೆ., 2019ರಲ್ಲಿ 18 ಸಾವಿರ ಹೆ., 2021ರಲ್ಲಿ 13 ಸಾವಿರ ಹೆ. ಮತ್ತು 2022ರಲ್ಲಿ 4745 ಹೆ. ಪ್ರದೇಶಕ್ಕೆ ಇಳಿಕೆಯಾಗಿದ್ದು, 2025ರಲ್ಲಿ ಕೇವಲ 2081 ಹೆ. ಬಿತ್ತನೆಯಾಗಿದೆ. ಇನ್ನೊಂದೆಡೆ 2005-06ರಲ್ಲಿ ಕೇವಲ 32 ಸಾವಿರ ಹೆ. ಪ್ರದೇಶದಲ್ಲಿ ಬಿತ್ತನೆಯಾಗಿದ್ದ ಸೋಯಾ ಈಗ 20 ವರ್ಷದಲ್ಲಿ ಸುಮಾರು 2.32 ಲಕ್ಷ ಹೆ. ಪ್ರದೇಶ ಆವರಿಸಿಕೊಂಡಿದೆ. ಅಂದಾಜು 20 ವರ್ಷಗಳ ಹಿಂದೆ ಜಿಲ್ಲೆಗೆ ಪರಿಚಯವಾದ ಸೋಯಾ ಸದ್ಯ ರಾಜ್ಯದಲ್ಲೇ ಹೆಚ್ಚು ಪ್ರಮಾಣದಲ್ಲಿ ಬೆಳೆಯಲಾಗುತ್ತಿದೆ. ಆದರೆ ಈ ಬೆಳೆಯ ಬೆಳವಣಿಗೆ ಜೋಳ ಮುಗ್ಗರಿಸುವಂತೆ ಮಾಡಿದೆ.

ಮಾರುಕಟ್ಟೆಯಲ್ಲಿ ದರ ಕಡಿಮೆ ಜತೆಗೆ ಪ್ರಾಕೃತಿಕ ಹೊಡೆತ ಮತ್ತು ಕೂಲಿಕಾರರ ಸಮಸ್ಯೆ ಜೋಳ ಬಿತ್ತನೆ ಕಡಿಮೆಯಾಗಲು ಪ್ರಮುಖ ಕಾರಣ. ಆದರೆ ಸೋಯಾಬಿನ್ ಭರವಸೆ ಮತ್ತು ಲಾಭದಾಯಕ ಬೆಳೆ ಎನಿಸಿರುವುದರಿಂದ ರೈತರನ್ನು ಹೆಚ್ಚು ಆಕರ್ಷಿಸಿದೆ. ಜೋಳ ಬಿತ್ತನೆ ಕುಸಿತ ಭವಿಷ್ಯದಲ್ಲಿ ಪರಿಣಾಮ ಬೀರುವ ಸಾಧ್ಯತೆ ಇದ್ದು, ಜೋಳ ಬಿತ್ತನೆಗಾಗಿ ಸರ್ಕಾರದ ಪ್ರೋತ್ಸಾಹ ಸಿಗಬೇಕಿದೆ.

# ವಿಕಲಚೇತನ ಮಕ್ಕಳಿಗೆ ಸರ್ಕಾರದ ಸೌಲಭ್ಯ ತಲುಪಿಸಿ: ಶಾಸಕ ಪ್ರಭು ಚವ್ಹಾಣ



ಮಲ್ಲಮ್ಮ ನುಡಿ ವಾರ್ತೆ

ಔರಾದ:ಸೆ.2:ವಿಕಲಚೇತನರ ಹಿತಾಸಕ್ತಿಗಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಜಾರಿಗೆ ತಂದಿರುವ ಎಲ್ಲ ಕಲ್ಯಾಣ ಯೋಜನೆಗಳ ಬಗ್ಗೆ ಹೆಚ್ಚಿನ ಪ್ರಚಾರ ನೀಡುವ ಮೂಲಕ ವಿಕಲಚೇತನ ವಿದ್ಯಾರ್ಥಿಗಳಿಗೆ ಸರ್ಕಾರದ ಸೌಲಭ್ಯಗಳನ್ನು ತಲುಪಿಸಲು ಪ್ರಾಮಾಣಿಕ ಪ್ರಯತ್ನ ಮಾಡಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಸಮಗ್ರ ಶಿಕ್ಷಣ ಯೋಜನೆಯಡಿ ಸಮನ್ವಯ ಶಿಕ್ಷಣ ವಿಭಾಗದಿಂದ ಸೆ.2ರಂದು ಔರಾದ(ಬಿ) ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಆವರಣದಲ್ಲಿ ಏರ್ಪಡಿಸಿದ್ದ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ವ್ಯಾಸಂಗ ಮಾಡುವ ವಿಕಲಚೇತನ ವಿದ್ಯಾರ್ಥಿಗಳಿಗೆ ಸಾಧನ ಸಲಕರಣೆಗಳ ವಿತರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿಕಲಚೇತನ ಮಕ್ಕಳಲ್ಲಿಯೂ ವಿಶೇಷ ಪ್ರತಿಭೆ ಅಡಗಿರುತ್ತದೆ. ಅದನ್ನು ಗುರುತಿಸಿ ಪ್ರೋತ್ಸಾಹಿಸುವ ಕೆಲಸ ಪಾಲಕರು ಮತ್ತು ಶಿಕ್ಷಕ-ರಿಂದ ಆಗಬೇಕು. ಮಕ್ಕಳು ತಮ್ಮಲ್ಲಿನ ದೌರ್ಬಲ್ಯಗಳ ಬಗ್ಗೆ ತಲೆಕೆಡಿಸಿಕೊಳ್ಳದೇ ಸಾಧನೆಯತ್ತ ಹೆಚ್ಚಿನ ಗಮನ ಹರಿಸಬೇಕು. ಸರ್ಕಾರದಿಂದ ಇರುವ ಯೋಜನೆಗಳ ಬಗ್ಗೆ ತಿಳಿದುಕೊಂಡು ಸೌಲಭ್ಯಗಳನ್ನು ಪಡೆಯಲು ಯತ್ನಿಸಬೇಕು ಎಂದು ಹೇಳಿದರು.

ವಿಕಲಚೇತನ ಮಕ್ಕಳಿಗೆ ವಿಶೇಷ ಗಮನ ಹರಿಸಿ ಅವರಿಗೆ ಉತ್ತಮ ಸೌಲಭ್ಯಗಳನ್ನು ಒದಗಿಸುವುದು ನಮ್ಮೆಲ್ಲರ ಹೊಣೆಯಾಗಿದ್ದು ಈ ದಿಶೆಯಲ್ಲಿ ನಾನು ಪ್ರಮಾಣಿಕವಾಗಿ ಪ್ರಯತ್ನಿಸುತ್ತಿದ್ದೇನೆ. ವಿಕಲಚೇತನರು ಯಾವುದೇ ರೀತಿಯ ಸಮಸ್ಯೆಯಿರಲಿ ನೇರವಾಗಿ ತಮ್ಮನ್ನು ಭೇಟಿಯಾಗಿ ಸಮಸ್ಯೆ ಪರಿಹರಿಸಿಕೊಳ್ಳಬಹುದು ಎಂದರು. ಪಾಲಕರು ಕೂಡ ತಮ್ಮ ವಿಕಲಚೇತನ ಮಕ್ಕಳಿಗೆ ತಾತ್ಸಾರದಿಂದ ಕಾಣದೇ ತಪ್ಪದೆ ಶಾಲೆಗೆ ಕಳುಹಿಸಬೇಕು. ವಿಶೇಷ ಗುರುತಿನ ಚೀಟಿ ಮಾಡಿಸಿಕೊಂಡು ಸರ್ಕಾರದ ಸೌಲಭ್ಯಗಳ ಲಾಭ ಪಡೆಯಬೇಕು ಎಂದು ಮನವಿ ಮಾಡಿದರು.

ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಕಿರಣ್ ಪಾಟೀಲ, ಸಹಾಯಕ ನಿರ್ದೇಶಕ ಶಿವಕುಮಾರ ಘಾಟೆ, ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಜೆ ರಂಗೇಶ, ಸಮನ್ವಾಧಿಕಾರಿ ಪ್ರಕಾಶ ರಾಥೋಡ, ಪದವಿ ಪೂರ್ವ ಕಾಲೇಜು ಪ್ರಾಂಶುಪಾಲ ಓಂಪ್ರಕಾಶ ದಡ್ಡೆ, ಮುಖಂಡರಾದ ಶಿವರಾಜ ಅಲ್ಮಾಜೆ, ಸಚಿನ ರಾಠೋಡ, ಕೇರಬಾ ಪವಾರ, ಗುಂಡಪ್ಪ ಮುಧಾಳೆ, ಸಂಜು ವಡೆಯರ್, ಪ್ರದೀಪ ಪವಾರ್, ರಮೇಶ ಡೊಂಬಾಳೆ, ಯಶವಂತರಾವ ಡೊಂಬಾಳೆ, ಸಿಆರ್‌ಪಿ, ಬಿಆರ್‌ಪಿ ಇಸಿಓ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ರೈತರಿಗೆ ಸಮರ್ಪಕ ಗೊಬ್ಬರ ವಿತರಣೆಗೆ ಕ್ರಮವಹಿಸಿ
## ಶಾಸಕ ಬಸನಗೌಡ ದದ್ದಲ್ ಕಟ್ಟುನಿಟ್ಟಿನ ನಿರ್ದೇಶನ




ರಾಯಚೂರು ಸೆ 02: ಯಾವುದೇ ರೈತರು ಸರದಿ ಸಾಲಲಿ ನಿಂತು ಕಾಯದಂತೆ, ಸಣ್ಣರೈತರು ಸೇರಿದಂತೆ ಎಲ್ಲರಿಗೂ ಸಮರ್ಪಕ ಗೊಬ್ಬರ ವಿತರಣೆಗೆ ಅಗತ್ಯ ಕ್ರಮವಹಿಸಬೇಕು ಎಂದು ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರ ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಕೃಷಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ರಾಯಚೂರ ತಾಲೂಕು ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಸೆ.2ರಂದು ನಡೆದ ರಾಯಚೂರು ತಾಲೂಕು ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮೊದಲನೇ ಬೆಳೆಗೆ ಸಹಜವಾಗಿ ರಸಗೊಬ್ಬರದ ಬೇಡಿಕೆ ಹೆಚ್ಚಿರುತ್ತದೆ. ಎರಡನೇ ಬೆಳೆಗೆ ಒತ್ತಡ ಇರುವುದಿಲ್ಲ. ಗೊಂದಲಕ್ಕೆ ಅವಕಾಶವಿಲ್ಲದ ಹಾಗೆ ಶಿಸ್ತುಬದ್ಧವಾಗಿ ರಸಗೊಬ್ಬರ ವಿತರಣೆಯಾಗಬೇಕು ಎಂದು ಶಾಸಕರು ಸೂಚನೆ ನೀಡಿದರು.

ರಾಯಚೂರ ತಾಲೂಕಿನ ಯೂರಿಯಾ ರಸಗೊಬ್ಬರದ ಮುಂಗಾರು ಬೇಡಿಕೆ 16,592 ಮೆಟ್ರಿಕ್ ಟನ್ ಇರುತ್ತದೆ. ಅದರಲ್ಲಿ ಆಗಸ್ಟ್ ಮಾಹೆಯ ಅಂತ್ಯದವರೆಗೆ 13,430 ಮೆಟ್ರಿಕ್ ಟನ್ ರಷ್ಟು ಬೇಡಿಕೆ ಇದ್ದು, ಈ ಪೈಕಿ ಇದುವರೆಗೆ 12,484 ರಷ್ಟು ಗೊಬ್ಬರ ವಿವಿಧ ಮಳಿಗೆಗಳಿಂದ ಮಾರಾಟವಾಗಿದ್ದು, 1994 ಮೆಟ್ರಿಕ್ ಟನ್ ದಷ್ಟು ದಾಸ್ತಾನು ಇರುತ್ತದೆ. ರಾಯಚೂರ ತಾಲೂಕಿನಲ್ಲಿ ಸಕ್ರಿಯವಾಗಿ ರಸಗೊಬ್ಬರ ವಿತರಣೆಯಲ್ಲಿ ತೊಡಗಿರುವ ಎಲ್ಲ ಸಹಕಾರಿ ಸಂಘಗಳಿಗೆ ಜಿಲ್ಲೆಯಿಂದ ಬಫರ್ ಸ್ಟಾಕ್ ವಿತರಣೆಯಾಗುತ್ತಿದ್ದು, ಅದರಲ್ಲಿ ಈವರೆಗೆ ಒಟ್ಟು 1737 ಮೆಟ್ರಿಕ್ ಟನ್ ರಷ್ಟು ಯೂರಿಯಾ ಹಾಗೂ 809 ಮೆಟ್ರಿಕ್ ಟನ್ ರಷ್ಟು ಡಿಎಪಿ ರಸಗೊಬ್ಬರವನ್ನು ಹಂಚಿಕೆ ಮಾಡಲಾಗಿದೆ ಎಂದು ಕೃಷಿ ಇಲಾಖೆಯ ಅಧಿಕಾರಿ ದೀಪಾ ಎಲ್ ಅವರು ಸಭೆಗೆ ಮಾಹಿತಿ ನೀಡಿದರು.

ತೋಟಗಾರಿಕೆ ಬೆಳೆ ಕ್ಷೇತ್ರ ಹೆಚ್ಚಾಗಲಿ: ರಾಯಚೂರ ಗ್ರಾಮೀಣ ಪ್ರದೇಶದಲ್ಲಿ ತೋಟಗಾರಿಕಾ ಬೆಳೆ ಕೃಷಿ ಪ್ರದೇಶ ವಿಸ್ತರಣೆಯಾಗಬೇಕು. ತೋಟಗಾರಿಕಾ ಬೆಳೆಗಾರರಿಗೆ ಹನಿ ನೀರಾವರಿ ಸೇರಿದಂತೆ ಪ್ರೋತ್ಸಾಹದಾಯಕ ಯೋಜನೆಗಳ ಅನುಷ್ಠಾನಕ್ಕೆ ಹೆಚ್ಚಿನ ಒತ್ತು ಕೊಡಬೇಕು.

ರೈತರ ಬೇಡಿಕೆಗನುಸಾರ ತೋಟಗಾರಿಕಾ ಸಸಿಗಳ ವಿತರಣೆಗೆ ಕ್ರಮವಹಿಸಬೇಕು ಎಂದು ಶಾಸಕರು, ತೋಟಗಾರಿಕಾ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಿಗೆ ಸೂಚನೆ ನೀಡಿದರು. ರಾಯಚೂರ ಗ್ರಾಮೀಣ ಕ್ಷೇತ್ರದಲ್ಲಿ ಮಾವು, ಮೋಸಂಬಿ, ಡ್ರಾಗನ್ ಬೆಳೆಗೆ ಹೆಚ್ಚಿನ ಪ್ರೋತ್ಸಾಹ ನೀಡಲು ಒತ್ತು ಕೊಡಬೇಕು ಎಂದು ಶಾಸಕರು ಸೂಚನೆ ನೀಡಿದರು.

ರಾಯಚೂರ ಗ್ರಾಮೀಣ ಕ್ಷೇತ್ರದಲ್ಲಿ 300 ಹೆಕ್ಟೇರನಷ್ಟು ಇದ್ದ ಮಾವು ಬೆಳೆ ಪ್ರದೇಶವು ಇದೀಗ 350ನಷ್ಟು ಹೆಚ್ಚಳವಾಗಿದೆ. ಈ ಬಾರಿ ಕೆಲ ರೈತರು ಪೇರಲ ಬೆಳೆಗೆ ಆಸಕ್ತಿ ತೋರಿದ್ದಾರೆ. ನರೇಗಾ ಯೋಜನೆಯಡಿ 57,000 ಮಾನವ ದಿನಗಳ ಗುರಿ ಇದ್ದು ಈ ಪೈಕಿ 6000 ಗುರಿ ಸಾಧನೆಯಾಗಿದೆ. ನರೇಗಾ ಯೋಜನೆಗೆ ಹೊಸದಾಗಿ 350 ಅಪ್ಲಿಕೇಶನ್ ಬಂದಿದ್ದು, ಅಕ್ಟೋಬರ್ ಮಾಹೆಯಲ್ಲಿ ಕ್ರಿಯಾಯೋಜನೆ ತಯಾರಿಸಿ ಜಿಪಂಗೆ ಸಲ್ಲಿಸಲಾಗುವುದು ಎಂದು ತೋಟಗಾರಿಕಾ ಇಲಾಖೆಯ ಅಧಿಕಾರಿ ಸುರೇಶ ಕುಮಾರ ಸಭೆಗೆ ಮಾಹಿತಿ ನೀಡಿದರು.

ನೀರಿಗೆ ತೊಂದರೆಯಾಗದಿರಲಿ: ರಾಯಚೂರ ಗ್ರಾಮೀಣ ಕ್ಷೇತ್ರದ ಯಾವುದೇ ಗ್ರಾಮದಲ್ಲಿ ಕುಡಿವ ನೀರಿಗೆ ತೊಂದರೆಯಾಗಬಾರದು. ಮುಂದಿನ ದಿನಗಳಲ್ಲಿ ಅನುಕೂಲವಾಗುವಂತೆ ಕೆರೆ ತುಂಬಲು ಒತ್ತು ಕೊಡಬೇಕು. ತುಂಗಭದ್ರಾ ನದಿ ತುಂಬಿ ಹರಿಯುತ್ತಿದೆ. ಆದಾಗ್ಯು ನದಿ ತಟದ ಸುತ್ತಲಿನ ಗ್ರಾಮಸ್ಥರು ನಮಗೆ ನೀರು ಸಿಗುತ್ತಿಲ್ಲ ಎಂದು ದೂರಿದಲ್ಲಿ ಸಂಬಂಧಿಸಿದ ಅಧಿಕಾರಿಗಳ ಮೇಲೆ ಕ್ರಮ ಜರುಗಿಸಲಾಗುವುದು ಎಂದು ಶಾಸಕರು ಎಚ್ಚರಿಕೆ ನೀಡಿದರು. ಪೈಪಲೈನ್ ಲಿಕೇಜ್ ಆಗುತ್ತಿದೆ, ನೀರು ಹೋಗುತ್ತಿಲ್ಲ ಎಂದು ಕುಂಟುನೆಪ ಹೇಳುತ್ತ ಕಾಲಹರಣ ಮಾಡದೇ ಕ್ರಿಯಾಯೋಜನೆಯಲ್ಲಿ ಸೇರಿಸಿ, ಅವಶ್ಯವಿರುವ ಕಡೆಗೆ ತಡಮಾಡದೆ ದುರಸ್ತಿ ಕಾರ್ಯ ಆರಂಭಿಸಬೇಕು ಎಂದು ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯ ಅಧಿಕಾರಿಗಳಿಗೆ ಮತ್ತು ಕೆಲ ಪಿಡಿಓಗಳಿಗೆ ಶಾಸಕರು ನಿರ್ದೇಶನ ನೀಡಿದರು.

ಜೆಸ್ಕಾಂ ಅಧಿಕಾರಿಗಳಿಗೆ ಸೂಚನೆ: ವಿದ್ಯುತ್ ಮೀಟರ್ ಇಲ್ಲ, ಬಿಲ್ ಕಟ್ಟಿಲ್ಲ ಎಂದು ಯಾವುದೇ ಹಳೆಯ ಮನೆಗಳು ಮತ್ತು ಸರ್ಕಾರಿ ಶಾಲೆ, ಅಂಗನವಾಡಿಗಳಿಗೆ ವಿದ್ಯುತ್ ಕಡಿತ ಮಾಡಕೂಡದು. ಬಿಲ್ ಕಟ್ಟಿಲ್ಲ ಎಂದು ಬೀದಿದೀಪಗಳನ್ನು ಆಫ್ ಮಾಡಬಾರದು ಎಂದು ಶಾಸಕರು ಜೆಸ್ಕಾಂ ಅಧಿಕಾರಿಗಳಿಗೆ ಸೂಚನೆ ನೀಡಿದರು. ಎಲ್ಲ ಶಾಲೆಗಳ ಹೆಡ್ ಮಾಸ್ತರಗಳಿಂದ ಮೀಟರ್ ಇಲ್ಲದ ಶಾಲೆಗಳ ಪಟ್ಟಿ ಮಾಡಿ ಮೀಟರ್ ಅಳವಡಿಕೆಗೆ ಕ್ರಮ ವಹಿಸಬೇಕು ಎಂದು ಶಾಸಕರು ಬಿಇಓ ಅವರಿಗೆ ನಿರ್ದೇಶನ ನೀಡಿದರು.

ಶಾಲೆಗಳಿಗೆ ನಿಯಮಿತ ಭೇಟಿ ನಡೆಸಲು ಸೂಚನೆ: ಶಾಲಾ ಮಕ್ಕಳಿಗೆ ಸಮವಸ್ತ್ರ, ಶೂ ವಿತರಣೆ ಸಕಾಲಕ್ಕೆ ಆಗಬೇಕು. ಮಕ್ಕಳಿಗೆ ಗುಣಮಟ್ಟದ ಬಿಸಿ ಊಟದ ವ್ಯವಸ್ಥೆಯಾಗಬೇಕು. ಖಾಲಿ ಇರುವ ಅಡುಗೆ ಮೇಲ್ವಿಚಾರಕರು ಮತ್ತು ಅಡುಗೆದಾರರ ಹುದ್ದೆ ತುಂಬಬೇಕು. ಶಾಲೆಗಳಲ್ಲಿ ಆರಂಭವಾದ ಎಲ್‌ಕೆಜಿ ಮತ್ತು ಯುಕೆಜಿ ತರಗತಿಗಳು ಸರಿಯಾಗಿ ನಡೆಯುವಂತೆ ಮೇಲ್ವಿಚಾರಣೆ ಮಾಡಬೇಕು. ಎಲ್ಲ ಶಾಲೆಗಳಿಗೆ ನಿಯಮಿತ ಭೇಟಿ ನೀಡಿ ಪರಿಶೀಲಿಸಬೇಕು ಎಂದು ಶಾಸಕರು, ಬಿಇಓ ಈರಣ್ಣ ಅವರಿಗೆ ನಿರ್ದೇಶನ ನೀಡಿದರು.

ಪಾಗಿಂಗ್ ಮಾಡಲು ಪಿಡಿಓಗಳಿಗೆ ಸೂಚನೆ: ಮಳೆಯಿಂದಾಗಿ ಅಲ್ಲಲ್ಲಿ ನೀರು ನಿಂತು ಸೊಳ್ಳೆಗಳು ಉತ್ಪತ್ತಿಯಾಗುತ್ತವೆ. ಆದ್ದರಿಂದ ರಾಯಚೂರ ತಾಲೂಕಿನ ಎಲ್ಲ ಗ್ರಾಮ ಪಂಚಾಯತಗಳಲ್ಲಿ ಅಲ್ಲಿನ ಪಿಡಿಓ ಗಳು ಕಡ್ಡಾಯ ಪಾಗಿಂಗ್ ಮಾಡಲು ಕ್ರಮವಹಿಸಿ ಜನರ ಆರೋಗ್ಯ ಕಾಪಾಡಬೇಕು ಎಂದು ಶಾಸಕರು ನಿರ್ದೇಶನ ನೀಡಿದರು.

ಅಕ್ರಮ ಮರಳು ಸಾಗಣೆ ನಿಲ್ಲಿಸಿ: ಅಕ್ರಮ ಮರಳು ಸಾಗಣೆ ನಡೆಯುತ್ತಿರುವುದು ಎಲ್ಲಾದರು ಕಂಡು ಬಂದಲ್ಲಿ, ಆ ಬಗ್ಗೆ ನಿಗಾವಹಿಸಿ ಅಕ್ರಮ ಮರಳು ಸಾಗಣೆ ತಡೆಯಬೇಕು ಎಂದು ಶಾಸಕರು, ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ರಾಯಚೂರ ಒಕ್ಕುಲುತನ ಹುಟ್ಟುವಳಿ ಮಾರಾಟ ಮತ್ತು ಸಂಸ್ಕರಣ ಸಂಘದ ಅಧ್ಯಕ್ಷರಾದ ಜಯಂತರಾವ್ ಪತಂಗೆ, ಎಪಿಎಂಸಿ ಅಧ್ಯಕ್ಷರಾದ ಮಲ್ಲಿಕಾರ್ಜುನಗೌಡ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ತಾಲೂಕು ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ, ತಹಸೀಲ್ದಾರ ಸುರೇಶ ವರ್ಮಾ, ತಾಲೂಕು ಪಂಚಾಯತನ ಆಡಳಿತಾಧಿಕಾರಿಗಳಾದ ಶರಣಬಸವರಾಜ, ತಾಪಂ ಇಓ ಚಂದ್ರಶೇಖರ ಪವರ್, ತ್ರೈಮಾಸಿಕ ಕೆಡಿಪಿ ಸಭೆಯ ನಾಮ ನಿರ್ದೇಶಿತ ಸದಸ್ಯರಾದ ಫಾರುಕ್ ಹುಸೇನ್ ತಂದೆ ಅಬ್ದುಲ್ ಜಿಲಾನಿ, ಶ್ರೀಮತಿ ಪಲ್ಲವಿ ಗಂಡ ಸುರೇಶ, ಈರೇಶ ತಂದೆ ರಾಮಪ್ಪ, ಜಿಂದಪ್ಪ ಶಾವಣಿ ತಂದೆ ಹನುಮಯ್ಯ, ಶರಣಬಸವ ತಂದೆ ನಾಗಾರೆಡ್ಡಿ, ತಿಮ್ಮಪ್ಪ ನಾಯಕ ತಂದೆ ದೊಡ್ಡ ತಾಯಣ್ಣ, ರಾಯಚೂರು ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವ ವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ಚನ್ನಬಸವ ಮತ್ತು ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ವಿವಿಧೆಡೆ ಬೆಳೆ ಹಾನಿ
## ಪರಿಶೀಲಿಸಿದ ಡಿಸಿ ಸಂಗಪ್ಪ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.2-ಜಿಲ್ಲೆಯ ಹುನಗುಂದ ತಾಲೂಕಿನಲ್ಲಿ ಮಳೆಯಿಂದ ಹಾನಿಗೊಳಗಾದ ಮುಂಗಾರು ಹಂಗಾಮಿನ ತೊಗರಿ, ಹೆಸರು, ಸೂರ್ಯಕ್ರಾಂತಿ, ಈರುಳ್ಳಿ ಹಾಗೂ ಮೆಣಸಿನಕಾಯಿ ಬೆಳೆಗಳನ್ನು ಜಿಲ್ಲಾಧಿಕಾರಿ ಸಂಗಪ್ಪ ಮಂಗಳವಾರ ಪರಿಶೀಲನೆ ನಡೆಸಿದರು.

ಹುನಗುಂದ ತಾಲೂಕಿನ ರಕ್ಕಸಗಿ, ಬೇವಿನಮಟ್ಟಿ, ಹಿರೇಬಾದವಾಡಗಿ, ಹಿರೇಯರಣಕೇರಿ, ರಾಮತಾಳ ಗ್ರಾಮದಲ್ಲಿ ಮಳೆಯಿಂದ ಹಾನಿಗೊಳಗಾದ ವಿವಿಧ ಬೆಳೆಗಳನ್ನು ವೀಕ್ಷಣೆ ಮಾಡಿದರು. ಈ ಸಂದರ್ಭದಲ್ಲಿ ಪ್ರಸ್ತುತ ಈರುಳ್ಳಿ ಹಾಗೂ ಮೆಣಸಿನಕಾಯಿ ಬೆಳೆಗಳು ಬಹಳ ಸೂಕ್ಷ್ಮ ಬೆಳೆಗಳಾಗಿದ್ದು, ಹೆಚ್ಚಿನ ತೇವಾಂಶದಿಂದ ಬೆಳೆಗಳು ಹಳದಿ ಬಣ್ಣಕ್ಕೆ ತಿರುಗಿ ಬೇರುಗಳಲ್ಲಿ ಕೊಳೆ ಬರಲು ಪ್ರಾರಂಭವಾಗಿದ್ದು, ಇದೇ ರೀತಿ ಮಳೆ ಮುಂದುವರೆದರೆ ಹೆಚ್ಚಿನ ಹಾನಿ ಉಂಟಾಗಬಹುದು ಎಂದು ವಿಜ್ಞಾನಿಗಳು ತಿಳಿಸಿದರು.

ಕೃಷಿ ಬೆಳೆಗಳಾದ ಸೂರ್ಯಕಾಂತಿ, ತೊಗರಿ ಹಾಗೂ ಹೆಸರು ಬೆಳೆಗಳು ಮಳೆಗೆ ಹಾನಿಗೊಳಗಾಗಿದ್ದು, ಹೆಚ್ಚಿನ ಮಳೆಯಿಂದ ಸೂರ್ಯಕಾಂತಿಯಲ್ಲಿ ಕಾಳು ಕಟ್ಟದೆ ಇರುವುದು ಮತ್ತು ಹೆಸರು ಬೆಳೆಯ ಕೊಯ್ಲು ಮಾಡಲು ಸಹ ಮಳೆ ಬಿಡುತ್ತಿಲ್ಲವೆಂದು ಸ್ಥಳೀಯ ರೈತರು ಹಾಗೂ ಅಧಿಕಾರಿಗಳು ತಿಳಿಸಿದರು.

ಇದಕ್ಕೆ ಸಂಬಂಧಿಸಿದಂತೆ ವಿಜ್ಞಾನಿಗಳು ಇಲಾಖೆ ಅಧಿಕಾರಿಗಳ ಜೊತೆ ಚರ್ಚಿಸಿ ಸೂಕ್ತ ರೀತಿಯಲ್ಲಿ ಬೆಳೆಯನ್ನು ವೀಕ್ಷಿಸಿ ಮುಂಬರುವ ದಿನಗಳಲ್ಲಿ ರೈತರಿಗೆ ಅವಶ್ಯವಿರುವ ಮಾಹಿತಿಯನ್ನು ನೀಡಲು ತಿಳಿಸಿದರು. ಈಗಾಗಲೇ ಹಾನಿಗೊಳಗಾದ ಬೆಳೆಗಳ ಕುರಿತು ಸಮಗ್ರ ಮಾಹಿತಿ ನೀಡಿ ವರದಿ ಸಲ್ಲಿಸಲು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚಿಸಿದರು.

ಹಿರೇಬಾದವಾಡಗಿ ಗ್ರಾಮದ ಮಹಾಂತವ್ವ ಮೇಟಿ ಅವರ ಹೊಲದಲ್ಲಿ ಬೆಳೆಯಲಾದ ಮೆಣಸಿನಕಾಯಿ ಬೆಳೆ ಹಾನಿ ವೀಕ್ಷಿಸಿದರು. ಅದೇ ರೀತಿ ಶರಣಪ್ಪ ರೇವಡಿ ಜಮೀನಿನಲ್ಲಿ ಬೆಳೆದ ಈರುಳ್ಳಿ, ಮೆಣಸಿನಕಾಯಿ, ಬೇವಿನಮಟ್ಟಿ ಗ್ರಾಮದ ಸಂಗಪ್ಪ ಮಹಾಂತಪ್ಪನವರ, ವೀರಭದ್ರಪ್ಪ ಅಕ್ಕಿ, ಶಿವಪುತ್ರಪ್ಪ ಹೊನವಾಡ, ಹಿರೇಯರನಕೇರಿ ಗ್ರಾಮದ ಸಿದ್ದಲಿಂಗಪ್ಪ ಹಡಗಲಿ ಅವರ ಜಮೀನಲ್ಲಿ ಬೆಳೆದ ಈರುಳ್ಳಿ, ರಾಮಥಾಳ ಗ್ರಾಮದ ಕಸ್ತೂರೆವ್ವ ಸೀಮಿಕೇರಿ, ಭೀಮರಾಯಪ್ಪ ಹುಗ್ಗಿ ಅವರ ಜಮೀನಿನಲ್ಲಿ ಬೆಳೆದ ತೊಗರಿ, ಬಸವರಾಜ ಕೊಪ್ಪದ ಬೆಳೆದ ಸೂರ್ಯಕ್ರಾಂತಿ ಬೆಳೆ ಹಾನಿಯನ್ನು ಸಂಗಪ್ಪ ವೀಕ್ಷಿಸಿದರು.

ಬೇವಿನಮಟ್ಟಿ ಗ್ರಾಮದ ಚಂದ್ರಶೇಖರ ಹಳ್ಳೂರ, ಬಸಪ್ಪ ಸೂಳೇಭಾವಿ, ಮಹಾಂತಗೌಡ ದೊಡಮನಿ, ರಮೇಶ ಸುಂಕದ, ಪ್ರಶಾಂತ ತನಹಳ್ಳಿ, ಹಿರೇಬಾದವಾಡಗಿ ಗ್ರಾಮದ ಬಸವಣೆಪ್ಪ ಹಳ್ಳೂರ, ಸಾವಿತ್ರಮ್ಮ ತುಂಬರಮಟ್ಟಿ, ಹುನಗುಂದನ ಅಮರಪ್ಪ ಹಕಾರಿ, ಗಂಗಮ್ಮ ತೋಟಗೇರ ಬೆಳೆದ ತೊಗರಿ ಬೆಳೆ ಹಾನಿಯನ್ನು ವೀಕ್ಷಿಸಿ, ಈಗಾಗಲೇ ಕ್ಷೇತ್ರ ಮಟ್ಟದಲ್ಲಿ ಕೃಷಿ, ತೋಟಗಾರಿಕೆ, ಕಂದಾಯ ಹಾಗೂ ಗ್ರಾಮ ಅಭಿವೃದ್ಧಿ ಅಧಿಕಾರಿಗಳ ಜಂಟಿ ಸಮೀಕ್ಷೆ ಕಾರ್ಯ ನಡೆಸಲಾಗುತ್ತಿದೆ ಎಂದು ತಿಳಿಸಿದರು. ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೆನ್ನವರ, ತೋಟಗಾರಿಕೆ ಉಪನಿರ್ದೇಶಕ ರವೀಂದ್ರ ಹಕಾಟಿ, ಕೃಷಿ ಉಪನಿರ್ದೇಶಕ ಎಲ್.ಐ.ರೂಢಗಿ, ಸಹಾಯಕ ಕೃಷಿ ನಿರ್ದೇಶಕ ಸೋಮಲಿಂಗಪ್ಪ, ತೋಟಗಾರಿಕೆ ಹಿರಿಯ ಸಹಾಯಕ ನಿರ್ದೇಶಕ ಸುಭಾಷ ಸುಲ್ಪಿ, ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ವಿಜ್ಞಾನಿಗಳಾದ ಡಾ.ಶಶಿಕಾಂತ, ಡಾ.ಸತ್ಯನಾರಾಯಣ ಸಿ, ನೂರುಲ್ಲ ಹಾವೇರಿ ಸೇರಿದಂತೆ ಇತರರು ಇದ್ದರು.

# ಅಫ್ಘಾನ್ ಭೂಕಂಪ : ಮೃತರ ಸಂಖ್ಯೆ
## 1,411ಕ್ಕೆ ಏರಿಕೆ, 3000 ಮಂದಿಗೆ ಗಾಯ



ಕಾಬೂಲ್:ಸೆ.2: ಅಫ್ಘಾನಿಸ್ತಾನದಲ್ಲಿ ಸಂಭವಿಸಿದ 6.0 ತೀವ್ರತೆಯ ಪ್ರಬಲ ಭೂಕಂಪದಿಂದ 1,411ಕ್ಕೂ ಹೆಚ್ಚು ಜನ ಸಾವನ್ನಪ್ಪಿದ್ದಾರೆ. ಈ ದುರಂತದಲ್ಲಿ ಸುಮಾರು 3,124 ಮಂದಿ ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ. ಭಾನುವಾರ ತಡರಾತ್ರಿ ಭೂಕಂಪ ಸಂಭವಿಸಿತ್ತು. ಸಾವಿನ ಸಂಖ್ಯೆ ಕ್ಷಣಕ್ಷಣಕ್ಕೂ ಹೆಚ್ಚುತ್ತಿದೆ. ತೀವ್ರ ಹಾನಿಗೊಳಗಾದ ಕುನಾರ್ ಪ್ರಾಂತ್ಯದಲ್ಲಿ ಹೆಚ್ಚು ಜನರು ಸಾವನ್ನಪ್ಪಿದ್ದಾರೆ ಮತ್ತು ಗಾಯಗೊಂಡಿದ್ದಾರೆ ಎಂದು ತಾಲಿಬಾನ್ ಸರ್ಕಾರದ ಮುಖ್ಯ ವಕ್ತಾರ ಜಬಿಹುಲ್ಲಾ ಮುಜಾಹಿದ್ ಎಕ್ಸ್‌ನಲ್ಲಿ ತಿಳಿಸಿದ್ದಾರೆ. ಕುನಾರ್‌ನಲ್ಲಿ ನೆಲಸಮವಾದ ಮನೆಗಳ ಅವಶೇಷಗಳಲ್ಲಿ ಬದುಕುಳಿದವರಿಗಾಗಿ ರಕ್ಷಣಾ ಕಾರ್ಯಕರ್ತರು ಮಂಗಳವಾರವೂ ಹುಡುಕಾಟ ನಡೆಸಿದ್ದಾರೆ. ದೂರದ ಹಳ್ಳಿಗಳಲ್ಲಿ ಗಾಯಗೊಂಡವರನ್ನು ಸ್ಥಳಾಂತರಿಸುವ ಕೆಲಸ ಇನ್ನೂ ನಡೆಯುತ್ತಿದೆ. ಸಾರ್ವಜನಿಕರು ಸಹ ಬರಿ ಕೈಯಲ್ಲೇ ಅವಶೇಷಗಳ ಅಡಿಯಲ್ಲಿ ಸಿಲುಕಿದವರ ರಕ್ಷಣಾ ಕಾರ್ಯದಲ್ಲಿ ತೊಡಗಿದ್ದಾರೆ ಎಂದು ವರದಿಯಾಗಿದೆ.

ಅಫ್ಘಾನಿಸ್ತಾನದ ಸಂಕಷ್ಟದ ಸಮಯದಲ್ಲಿ ಅವರಿಗೆ ಸಹಾಯ ಮಾಡಲು, ಭಾರತವು ಡೇರೆಗಳು ಮತ್ತು ಆಹಾರ ಸಾಮಗ್ರಿಗಳನ್ನು ದೇಶಕ್ಕೆ ರವಾನಿಸಿದೆ ಎಂದು ಜೈಶಂಕರ್ ತಿಳಿಸಿದ್ದಾರೆ. ಮುಂದಿನ ದಿನಗಳಲ್ಲಿ ಅಫ್ಘಾನಿಸ್ತಾನಕ್ಕೆ ಹೆಚ್ಚಿನ ನೆರವು ನೀಡಲಾಗುವುದು ಎಂದಿದ್ದಾರೆ. ಭಾರತ ಇಂದು ಕಾಬೂಲ್‌ನಲ್ಲಿ 1000 ಕುಟುಂಬ ಡೇರೆಗಳನ್ನು ತಲುಪಿಸಿದೆ. ಭಾರತೀಯ ಮಿಷನ್ 15 ಟನ್ ಆಹಾರ ಸಾಮಗ್ರಿಗಳನ್ನು ತಕ್ಷಣವೇ ಕಾಬೂಲ್‌ನಿಂದ ಕುನಾರ್‌ಗೆ ಸಾಗಿಸುತ್ತಿದೆ ಎಂದು ಜೈಶಂಕರ್ ತಿಳಿಸಿದ್ದಾರೆ.

# ಸ್ಮಶಾನ ಭೂಮಿಗೆ ಹೋಗಲು ಸೂಕ್ತ ರಸ್ತೆ ಅನಿವಾರ್ಯ:ವೈಜನಾಥ ವಡ್ಡೆ



ಮಲ್ಲಮ್ಮ ನುಡಿ ವಾರ್ತೆ ಕಮಲನಗರ :ಸೆ.2: ಸ್ಮಶಾನ ಭೂಮಿಗೆ ಹೋಗಲು ಸೂಕ್ತ ರಸ್ತೆ ಅನಿವಾರ್ಯ ಈ ಬಗ್ಗೆ ಒಂದು ವರ್ಷದಿಂದ ಸಂಬಂಧ ಪಟ್ಟ ಅಧಿಕಾರಿಗಳ ಗಮನ ತಂದರು ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಸಾಮಾಜಿಕ ಹೋರಾಟಗಾರ ವೈಜಿನಾಥ ವಡ್ಡೆ ಹೇಳಿದರು.

ಪಟ್ಟಣದ ವೀರಶೈವ-ಲಿಂಗಾಯತ ಹಾಗೂ ಸಲಗರ್ ಸಮಾಜದ ಸ್ಮಶಾನ ಭೂಮಿಗೆ ಹೋಗಲು ದಾರಿಯಿಲ್ಲದೆ ಬಸ್ ನಿಲ್ದಾಣದಿಂದ ಸೋನಾಳಗೆ ಹೋಗುವ ಮುಖ್ಯ ರಸ್ತೆಯ ಮೇಲೆಯೇ ಅಂತಿಮ ಸಂಸ್ಕಾರಕ್ಕೆ ಬಂದ ಜನ ಕೂತುಕೊಂಡ ಘಟನೆ ನಡೆದಿದೆ. ಈ ಸ್ಮಶಾನ ಭೂಮಿಗೆ ದಶಕಗಳು ಕಳೆದರೂ ಇಲ್ಲಿಯವರೆಗೂ ರಸ್ತೆ ಮಾಡಿ ಕೊಟ್ಟಿಲ್ಲ. ಬೇರೆಯವರ ಜಾಗದಿಂದ ಗಿಡ ಗಂಟಿ ಮುಳ್ಳು ಕಲ್ಲು ಬಡಾವಣೆಯ ಹೊಲಸು ತುಂಬಿರುವ ಜಾಗದಿಂದಲೆ ಶವ ಸಂಸ್ಕಾರಕ್ಕಾಗಿ ಜನ ಹೋಗಿ ಬರುತ್ತಿದ್ದರು. ಸಮಾಜದಲ್ಲಿ ಯಾರಾದರು ನಿಧನರಾದರೆ ಸ್ಮಶಾನ ಭೂಮಿಗೆ ಹೋಗುವುದು ಹೇಗೆ ಎಂಬ ಚಿಂತೆ ಕಾಣುತ್ತಿದೆ.

ಅಂತಿಮ ಸಂಸ್ಕಾರ ಮಾಡಿ ಹೋದ ಮೇಲೆ ಈ ರಸ್ತೆಯ ಗೋಜಿಗೆ ಯಾರು ಹೋಗಲಾರರು ಆದರೆ ಮಳೆಗಾಲದ ಈ ದಿನ ಸ್ಮಶಾನ ಭೂಮಿಗೆ ತೆರಳಲು ಜೆಸಿಬಿ ಬಳಸಿ ಶವ ತೆಗೆದುಕೊಂಡು ಹೋಗಲಾಯಿತು. ಉಳಿದ ನೆಂಟರಿಷ್ಟರು ಹೋಗಲೇ ಬೇಕೆನ್ನುವ ಛಲದವರು ಮೊಳಕಾಲು ಉದ್ದ ಕೆಸರಿನಲ್ಲಿಯೇ ಬಿದ್ದು ಎದ್ದು ಆ ಸ್ಮಶಾನ ಭೂಮಿಗೆ ಹೋಗಿ ಬರಬೇಕಾಯಿತು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.